**ಸಂಪುಟ:** 05 **ಸಂಚಿಕೆ:** 43 **ಪುಟಗಳು:** 08 **ಭಾನುವಾರ** 27 ಏಪ್ರಿಲ್ 2025

www.udayavahini.in | epaper.udayavahini.in | Udaya vahini news | Udaya vahini news | Udayavahini news youtube | udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ    RNI No. KARKAN/2021/80833    9448225696    +91 8035841833    ₹5

ಮುಂಜಾನೆ ಮಾತು

ನಿಮಗೆ ಏನೂ ತಿಳಿದಿಲ್ಲ ಎಂದು ತಿಳಿದುಕೊಳ್ಳುವುದರಲ್ಲಿ ಮಾತ್ರ ನಿಜವಾದ ಬುದ್ಧಿವಂತಿಕೆ ಇದೆ.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಭಾರತೀಯರ ಪ್ರತಿಭಟನೆ ವೇಳೆ ಕತ್ತು ಕೊಯ್ಯುವ ಸನ್ನೆ ಮಾಡಿದ ಪಾಕ್ ಅಧಿಕಾರಿ

**ಲಂಡನ್:** ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಅಂತಾರಾಷ್ಟ್ರೀಯ ಮಟ್ಟದಲ್ಲಿ ತೀವ್ರ ವಿರೋಧ, ಖಂಡನೆಗಳು ವ್ಯಕ್ತವಾಗ್ತಿವೆ. ಬೇರೆ ದೇಶಗಳಲ್ಲಿರುವ ಭಾರತೀಯರು ಪ್ರತಿಭಟನೆ ನಡೆಸಿ ಆಕ್ರೋಶ ಹೊರಹಾಕುತ್ತಿದ್ದಾರೆ. ಹಾಗೆಯೇ ಲಂಡನ್ ರಾಯಭಾರಿ ಕಚೇರಿ ಬಳಿ ಪ್ರತಿಭಟನೆ ಮಾಡುವಾಗ ಪಾಕ್ ರಾಯಭಾರಿ ಅಧಿಕಾರಿ ತೈಮೂರ್ ರಾಹತ್ ಪ್ರಚೋದನೆ ನೀಡಿದ್ದಾನೆ.

ಅಭಿನಂದನ್ ವರ್ಧಮಾನ್ ಫೋಟೋ ಇರುವ ಪೋಸ್ಟರ್ ಹಿಡಿದುಕೊಂಡು ಕತ್ತು ಕೊಯ್ಯುತ್ತೇವೆ ಎಂದು ಸನ್ನೆ ಮಾಡಿ ತೋರಿಸಿದ್ದಾನೆ. ಇದಕ್ಕೆ ಪ್ರತಿಭಟನಾಕಾರರು ಸ್ಥಳದಲ್ಲೇ ತಿರುಗೇಟು ಕೊಟ್ಟಿದ್ದಾರೆ. ನಿಮಗೂ ತೊಳೆದುಕೊಳ್ಳಲು ನೀರು ಇರಲ್ಲ ಅಂತ ಟಾಂಗ್ ಕೊಟ್ಟಿದ್ದಾರೆ.




**ನಿಮಗೂ ತೊಳೆದುಕೊಳ್ಳಲು ನೀರು ಇರಲ್ಲ**

**ಮತ್ತೊಂದು ಭಯಾನಕ ವಿಡಿಯೋ ವೈರಲ್:** ಈ ಮಧ್ಯೆ, ಅನಂತ್‌ನಾಗ್ ಜಿಲ್ಲೆಯ ಪಹಲ್ಗಾಮ್‌ನಲ್ಲಿ ಬುಧವಾರ ನಡೆದ ಉಗ್ರರ ದಾಳಿಯ ಮತ್ತೊಂದು ಭಯಾನಕ ವಿಡಿಯೋವೊಂದು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಬಿಳಿ ಶರ್ಟ್ ಧರಿಸಿದ್ದ ವ್ಯಕ್ತಿಗೆ ಉಗ್ರ ಪಾಯಿಂಟ್ ಬ್ಲಾಕ್‌ನಲ್ಲಿ ಶೂಟ್ ಮಾಡಿ, ಬಳಿಕ ಜನಸಮುದಾದತ್ತ ತೆರಳಿ ಅಲ್ಲಿ ರಕ್ತಪಾತ ನಡೆಸಿದ್ದಾನೆ.

ಆ ಉಗ್ರ ಮತ್ತೆ ಮುಂದೆ ಹೋಗಿ ಅಲ್ಲಿದ್ದ ಜನಸಮೂಹದ ಮೇಲೆ ಗುಂಡಿನ ದಾಳಿ ಮಾಡುತ್ತಾನೆ. ದಾಳಿ ವೇಳೆ ಕೆಲ ಮಕ್ಕಳು ಆಟವಾಡುತ್ತಿರುವುದು, ಚೀರಾಟ, ಕೂಗಾಟದ ಸದ್ದು ಕೇಳಿಬರುತ್ತದೆ. ಉಗ್ರರು ದಟ್ಟ ಕಾನನ ಮಧ್ಯೆ ಬಂದು ಗಿಡಗಳಿಂದ ಇಳಿದು ದಾಳಿ ನಡೆಸಿರೋದು ಗೊತ್ತಾಗಿದೆ. ಇನ್ನೂ ಶಂಕಿತ ಉಗ್ರ ಆದಿಲ್ 2018ರಲ್ಲಿ ಪಾಕಿಸ್ಥಾನಕ್ಕೆ ಸ್ಟೂಡೆಂಟ್ ವೀಸಾದಲ್ಲಿ ಹೋಗಿ, 2024ಕ್ಕೆ ನಾಲ್ವರು ಉಗ್ರರೊಂದಿಗೆ ವಾಪಸ್ಸಾಗಿ ಈ ದಾಳಿ ನಡೆಸಿರೋದು ಗೊತ್ತಾಗಿದೆ. ಈ ದಾಳಿಯಲ್ಲಿ ಕರ್ನಾಟಕದ ಮೂವರು ಸೇರಿದಂತೆ 26 ಜನರು ಬಲಿಯಾಗಿದ್ದು, ಹಲವರು ಗಾಯಗೊಂಡಿದ್ದಾರೆ.

## ಪಾಕಿಸ್ತಾನದ ಜೊತೆ ಯುದ್ಧ ಅಗತ್ಯ ಇಲ್ಲ; ನಾವು ಯುದ್ಧದ ಪರ ಇಲ್ಲ

• **ಉದಯವಾಹಿನಿ, ಮೈಸೂರು**

ಪಾಕಿಸ್ತಾನದ ಜೊತೆ ಯುದ್ಧದ ಅನಿವಾರ್ಯತೆ ಇಲ್ಲ. ನಾವು ಯಾವತ್ತೂ ಯುದ್ಧದ ಪರ ಇಲ್ಲ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು. ಯುದ್ಧದ ಬದಲು ಭದ್ರತೆಯನ್ನು ಬಿಗಿ ಮಾಡಿಕೊಳ್ಳಬೇಕಿದೆ. ನಾವು ಯಾವತ್ತೂ ಶಾಂತಿಯ ಪರ, ಯುದ್ಧದ ಬಗ್ಗೆ ಯೋಚನೆ ಬೇಡ. ಭದ್ರತೆಯನ್ನು ಬಿಗಿ ಮಾಡಿ ಎಂದು ಸಲಹೆ ನೀಡಿದರು. ರಾಜ್ಯದಲ್ಲಿರುವ ಪಾಕಿಸ್ತಾನದ ಪ್ರಜೆಗಳನ್ನು ವಾಪಸ್ ಕಳುಹಿಸುವ ವಿಚಾರಕ್ಕೆ ಮಾತನಾಡಿ, ಕೇಂದ್ರದ ಸೂಚನೆಗೆ ನಾವು ಸಹಕಾರ ಕೊಡುತ್ತೇವೆ. ರಾಜ್ಯದಲ್ಲಿ ಎಷ್ಟು ಜನ ಪಾಕಿಸ್ತಾನದ ಪ್ರಜೆಗಳು ಇದ್ದಾರೆ ಎಂಬ ಬಗ್ಗೆ ನನಗೆ ಮಾಹಿತಿ ಇಲ್ಲ. ಕೇಂದ್ರದ ಸೂಚನೆಯನ್ನು ನಾವು ಪಾಲಿಸುತ್ತೇವೆ. ಬೆಂಗಳೂರಿನಲ್ಲಿ ಅತಿ ಹೆಚ್ಚು ಜನರು ಇರುವ ಸಾಧ್ಯತೆ ಇದೆ. ಇದರ ಬಗ್ಗೆ ಸೂಕ್ತ ಕ್ರಮಕೈಗೊಳ್ಳುತ್ತೇವೆ ಎಂದು ಹೇಳಿದರು. ಕಾಶ್ಮೀರದ ಭದ್ರತೆ ವಿಚಾರದಲ್ಲಿ ಕೇಂದ್ರ ಸರ್ಕಾರ ಜನರಿಗೆ ಟೋಪಿ ಹಾಕಿದೆ. ಭದ್ರತೆ ಇದೆ ಎಂದು ನಂಬಿಕೊಂಡು ಜನ ಕಾಶ್ಮೀರಕ್ಕೆ ಹೋದರು. ಆದರೆ ಅಲ್ಲಿ ಭದ್ರತೆಯ ವೈಫಲ್ಯ ಉಂಟಾಗಿದೆ. ಹಾಗಾದರೆ ಇವರು ಮಾಡಿದ್ದು ಬರೀ ಭಾಷಣಾನಾ. ಈಗ ಏನೇ ಕ್ರಮಕೈಗೊಂಡರೂ ಹೋದ 26 ಜೀವಗಳನ್ನು ವಾಪಸ್ ತರಲು ಸಾಧ್ಯಾನಾ. ಪುಲ್ವಾಮಾ ಘಟನೆ ವಿಚಾರದಲ್ಲಿ ಮುಂದೆ ಏನಾಯಿತು ಎಂದು ಯಾರಿಗೆ ಗೊತ್ತಿದೆ ಹೇಳಿ. ಈಗ ಕೇಂದ್ರ ಸರ್ಕಾರ ಭದ್ರತಾ ವೈಫಲ್ಯವನ್ನು ಒಪ್ಪಿಕೊಂಡಿದೆ. ನಾನು ಮೊದಲೇ ಹೇಳಿದೆ, ನನ್ನ ಮಾತು ನಿಜವಾಗಿದೆ ಎಂದು ಹೇಳಿದರು. ಸರ್ವ ಪಕ್ಷ ಸಭೆಗೆ ಪ್ರಧಾನಿ ಹೋಗದ ವಿಚಾರ. ಇಂತಹ ಸಭೆಗಿಂತ ಮಹತ್ವದ ಸಭೆ ಯಾವುದು ಇದೆ ಹೇಳಿ. ಚುನಾವಣಾ ಪ್ರಚಾರದ ಭಾಷಣ ಮುಖ್ಯನಾ ಸಭೆ ಮುಖ್ಯಾನಾ. ಇವರಿಗೆ ಪರಿಸ್ಥಿತಿಯ ಗಂಭೀರತೆ ಗೊತ್ತಿದೆಯಾ ಎಂದು ಕಿಡಿಕಾರಿದರು.

## ತೆರಿಗೆ ಬಾಕಿ ಉಳಿಸಿಕೊಂಡ ಬೆಂಗಳೂರಿನ ಮಾಲ್‌ಗಳು!

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರಿನ ಪ್ರತಿಷ್ಠಿತ ಮಾಲ್‌ಗಳು ರಾಜ್ಯ ಸರ್ಕಾರಕ್ಕೆ ತೆರಿಗೆ ಬಾಕಿ ಉಳಿಸಿಕೊಂಡಿವೆ. ನಿಯಮಗಳ ಪ್ರಕಾರ ಈ ಪ್ರತಿಷ್ಠಿತ ಮಾಲ್‌ಗಳು ಸರ್ಕಾರಕ್ಕೆ ಪಾವತಿಸಬೇಕಾಗಿದ್ದು ಬರೋಬ್ಬರಿ 69 ಕೋಟಿ. ಈ ಕುರಿತಾದ ಕೆಲವೊಂದು ಪ್ರಕರಣಗಳ ನ್ಯಾಯಾಲಯದಲ್ಲಿ ವಿಚಾರಣೆಯ ಹಂತದಲ್ಲಿದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 6 ಪ್ರತಿಷ್ಠಿತ ಮಾಲ್‌ಗಳು ತೆರಿಗೆ ಬಾಕಿ ಉಳಿಸಿಕೊಂಡಿವೆ. ಜಿಟಿ ಮಾಲ್, ಸೆಂಟ್ರಲ್ ಮಾಲ್, ಸ್ವಾಗತ್ ಗರುಡಾ ಮಾಲ್ , ಮಂತ್ರಿಮಾಲ್ ತೆರಿಗೆ ಬಾಕಿ ಪಟ್ಟಿಯಲ್ಲಿವೆ. ಒಟ್ಟು 6 ಮಾಲ್‌ಗಳಿಂದ ಸರ್ಕಾರಕ್ಕೆ 69,06,93,073 ಕೋಟಿ ತೆರಿಗೆ ಪಾವತಿ ಆಗಬೇಕಾಗಿದೆ. ಈ ಸಂಬಂಧಿಸಿದಂತೆ ಬಿಬಿಎಂಪಿ ನೋಟಿಸ್ ನೀಡಿದೆ. • **ವಿಜಯ ನಗರ:** ಜಿಟಿ ಮಾಲ್ – ತೆರಿಗೆ ಬಾಕಿ– 2.44 ಕೋಟಿ • **ಬೊಮ್ಮನಹಳ್ಳಿ:** ಮೀನಾಕ್ಷಿ ಮಾಲ್ – ತೆರಿಗೆ ಬಾಕಿ – 12.18 ಕೋಟಿ • **ಮಹದೇವಪುರ:** ಸೆಂಟ್ರಲ್ ಮಾಲ್ ಬೆಳ್ಳಂದೂರು ಮಾರತಹಳ್ಳಿ – ತೆರಿಗೆ ಬಾಕಿ – 2.32 ಕೋಟಿ • **ಜಯನಗರ:** ಸ್ವಾಗತ್ ಗರುಡಾ ಮಾಲ್ – ತೆರಿಗೆ ಬಾಕಿ – 19.95 ಲಕ್ಷ ಮಂತ್ರಿಮಾಲ್ – 30.76 ಕೋಟಿ

## ಕರ್ನಾಟಕ ಸರ್ಕಾರದ 2ನೇ ವರ್ಷದ ಸಾಧನಾ ಸಮಾವೇಶ

• **ಉದಯವಾಹಿನಿ, ಬೆಂಗಳೂರು ಗ್ರಾಮಾಂತರ**

ಸರಕಾರದ 2ನೇ ವರ್ಷದ ಸಾಧನೆ ಸಮಾವೇಶ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನಾನಾ ಕಾಮಗಾರಿಗಳಿಗೆ ಶಂಕುಸ್ಥಾಪನೆ ಜತೆಗೆ ಫಲಾನುಭವಿಗಳಿಗೆ ಸವಲತ್ತು ವಿತರಣೆ ಸಮಾರಂಭವನ್ನು ಏ.27ರಂದು ಬೆಳಗ್ಗೆ 11ಗಂಟೆಗೆ ದೇವನಹಳ್ಳಿ ತಾಲ್ಲೂಕಿನ ಕುಂದಾಣ ಹೋಬಳಿಯ ಬೈರದೇನಹಳ್ಳಿ ಕೈಗಾರಿಕಾಭಿವೃದ್ಧಿ ಪ್ರದೇಶದಲ್ಲಿ ಹಮ್ಮಿಕೊಳ್ಳಲಾಗಿದೆ. ಉಸ್ತುವಾರಿ ಸಚಿವ ಮುನಿಯಪ್ಪ ನೇತೃತ್ವದಲ್ಲಿಆಯೋಜಿಸಿರುವ ಕಾರ್ಯಕ್ರಮದಲ್ಲಿ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ್, ಗೃಹ ಸಚಿವ ಪರಮೇಶ್ವರ್, ಸಚಿವರಾದ ಎಚ್.ಕೆ ಪಾಟೀಲ್, ಕೆ.ಜೆ. ಜಾರ್ಜ್, ಎನ್.ಎಸ್.ಭೋಸರಾಜು ಸೇರಿದಂತೆ ಸಚಿವ ಸಂಪುಟದ ಬಹುಪಾಲು ಸಚಿವರು, ನೆಲಮಂಗಲ ಶಾಸಕ ಎನ್.ಶ್ರೀನಿವಾಸ್, ಹೊಸಕೋಟೆ ಶಾಸಕ ಶರತ್ ಬಚ್ಚೇಗೌಡ ಸೇರಿದಂತೆ ಅನೇಕ ಶಾಸಕರು ಭಾಗವಹಿಸಲಿದ್ದಾರೆ. ಸರಕಾರದ 2 ವರ್ಷದ ಸಾಧನೆಯ ಕೈಪಿಡಿಯನ್ನು ಸಮಾವೇಶದಲ್ಲಿ ಸಿಎಂ, ಡಿಸಿಎಂ, ಸಚಿವರು ಬಿಡುಗಡೆ ಮಾಡುವರು. ಜತೆಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿನಡೆದಿರುವ 2 ವರ್ಷದ ಸಾಧನೆಗಳ ಕೈಪಿಡಿಯೂ ಬಿಡುಗಡೆಯಾಗಲಿದೆ.

# ಏಟಿಗೆ ಭಾರತ ಎದುರೇಟು

## ಇದುವರೆಗೆ 175ಕ್ಕೂ ಹೆಚ್ಚು ಮಂದಿ ವಶಕ್ಕೆ

• **ಉದಯವಾಹಿನಿ, ನವದೆಹಲಿ**

ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಗುಂಡಿನ ದಾಳಿ ನಡೆಸಿ ಪರಾರಿಯಾಗಿರುವ ಪಾಪಿಗಳ 'ಉಗ್ರ' ಬೇಟೆ ಆರಂಭವಾಗಿದೆ. ಈವರೆಗೂ ಕಾಶ್ಮೀರದಲ್ಲಿ ಭಯೋತ್ಪಾದಕರ 5 ಮನೆ ಧ್ವಂಸ ಮಾಡಿರೋದು ಕೇವಲ ಟ್ರೇಲರ್ ಆದ್ರೆ, ಅಸಲಿ ಪಿಕ್ಚರ್ ಬಾಕಿ ಇದೆ. ಗಡಿಯಲ್ಲಿ ಭಾರತೀಯ ಸೇನೆ ಹೈ ಅಲರ್ಟ್ ಆಗಿದ್ರೆ, ಸೇನೆಯಿಂದ ಸಮರಾಭ್ಯಾಸ ಕೂಡ ಸದ್ದಿಲ್ಲದೇ ನಡೆಯುತ್ತಿದೆ. ಕಾಶ್ಮೀರ ಸೇರಿದಂತೆ ದೇಶಾದ್ಯಂತ ಪಾಕಿಸ್ತಾನಿಯರನ್ನು ವಾಪಸ್ ಕಳಿಸೋ ಪ್ರಕ್ರಿಯೆಯೂ ಚುರುಕಾಗಿದೆ. ಪಹಲ್ಗಾಮ್‌ನಲ್ಲಿ ಉಗ್ರರ ದಾಳಿ ಬೆನ್ನಲ್ಲೇ ಇಡೀ ದೇಶಾದ್ಯಂತ ನೆಲೆಸಿರುವ ಪಾಕಿಸ್ತಾನಿಯರನ್ನ ವಾಪಸ್ ಕಳುಹಿಸುವ ಕಾರ್ಯಾಚರಣೆಯನ್ನು ಸರ್ಕಾರಗಳು ಚುರುಕುಗೊಳಿಸಿವೆ. ಈ ನಡುವೆ ವಿವಿಧ ದೇಶಗಳಿಂದ ಬಂದು ಭಾರತದಲ್ಲಿ ಅಕ್ರಮವಾಗಿ ನೆಲೆಸಿರುವ ವಲಸಿಗರನ್ನು ಪತ್ತೆಹಚ್ಚುವ ಕೆಲಸಕ್ಕೆ ಪೊಲೀಸ್ ಇಲಾಖೆ ಮುಂದಾಗಿದೆ. ಅದರಂತೆ ಅಹಮದಾಬಾದ್ ಮತ್ತು ಸೂರತ್‌ನಲ್ಲಿ ನಡೆದ ಶೋಧ ಕಾರ್ಯಾಚರಣೆಯ ನಂತರ ಮಹಿಳೆಯರು ಮತ್ತು ಮಕ್ಕಳು ಸೇರಿದಂತೆ 1,000ಕ್ಕೂ ಹೆಚ್ಚು ಅಕ್ರಮ ಬಾಂಗ್ಲಾದೇಶಿಗರನ್ನು ಬಂಧಿಸಲಾಗಿದೆ. ಗುಜರಾತ್ ಪೊಲೀಸರು ಇಲ್ಲಿಯವರೆಗೆ ನಡೆಸಿದ ಅತಿದೊಡ್ಡ ಕಾರ್ಯಾಚರಣೆ ಇದಾಗಿದ್ದು, ಬಂಧಿತರನ್ನ ಶೀಘ್ರವೇ ಗಡೀಪಾರು ಮಾಡುವ ಪ್ರಕ್ರಿಯೆ ಚುರುಕುಗೊಂಡಿದೆ ಎಂದು ಗೃಹ ಖಾತೆ ರಾಜ್ಯ ಸಚಿವ ಹರ್ಷ ಸಂಘ್ವಿ ತಿಳಿಸಿದ್ದಾರೆ. ಅಹಮದಾಬಾದ್‌ನಲ್ಲಿ ಕನಿಷ್ಠ 890 ಮತ್ತು ಸೂರತ್‌ನಲ್ಲಿ 134 ಬಾಂಗ್ಲಾದೇಶಿಗರನ್ನ ಬಂಧಿಸಲಾಗಿದೆ. ಬಂಧಿತರು ಗುಜರಾತ್‌ಗೆ ಬರುವ ಮುನ್ನ ಭಾರತದ ವಿವಿಧ ಭಾಗಗಳಲ್ಲಿ ಉಳಿಯಲು ಪಶ್ಚಿಮ ಬಂಗಾಳದಿಂದ ಪಡೆದ ನಕಲಿ ದಾಖಲೆಗಳನ್ನು ಬಳಸಿದ್ದಾರೆ ಎಂದು ಸಹ ಸಚಿವರು ಮಾಹಿತಿ ನೀಡಿದ್ದಾರೆ. ಗುಜರಾತ್‌ನಲ್ಲಿ ವಾಸಿಸುವ ಅಕ್ರಮ ವಲಸಿಗರು ಸ್ವಯಂಪ್ರೇರಿತವಾಗಿ ಪೊಲೀಸರ ಮುಂದೆ ಶರಣಾಗಬೇಕು, ಇಲ್ಲದಿದ್ದರೆ ಅವರನ್ನು ಬಂಧಿಸಿ ಗಡೀಪಾರು ಮಾಡಲಾಗುವುದು ಎಚ್ಚರಿಕೆ ಸಹ ನೀಡಿದ್ದಾರೆ.

ಉಗ್ರರಿಗೆ ಹಣಕಾಸು ಸಹಾಯ ಮಾಡಿರುವ ಶಂಕೆಯಲ್ಲಿ ಅನಂತನಾಗ್ ಜಿಲ್ಲೆಯಲ್ಲಿ 175 ಮಂದಿಯನ್ನ ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ. ಇದೇ ವೇಳೆ ಕುಪ್ವಾರದಲ್ಲಿ ಕೂಂಬಿಂಗ್ ವೇಳೆ 8 ಎಕೆ 47 ಸೇರಿದಂತೆ ಅಪಾರ ಪ್ರಮಾಣದ ಶಸ್ತ್ರಾಸ್ತ್ರಗಳನ್ನ ಜಪ್ತಿ ಮಾಡಲಾಗಿದೆ. ಇನ್ನೂ ಪಾಕಿಸ್ತಾನ ಪ್ರಜೆಗಳು ದೇಶ ತೊರೆಯಲು ಕೇಂದ್ರ ಸರ್ಕಾರ 48 ಗಂಟೆ ಗಡುವು ನೀಡಿತ್ತು. ಈ ಬೆನ್ನಲ್ಲೇ ಭಾರತಕ್ಕೆ ಭೇಟಿ ನೀಡಿದ ಒಟ್ಟು 191 ಪಾಕಿಸ್ತಾನಿ ಪ್ರಜೆಗಳು ಪಂಜಾಬ್‌ನ ಅಮೃತಸರದ ಅಟ್ಟಾರಿ–ವಾಘಾ ಭೂಮಾರ್ಗದ ಮೂಲಕ ವಾಪಸ್ ಮರಳಿದ್ದಾರೆ. ಪಾಕಿಸ್ತಾನಕ್ಕೆ ಭೇಟಿ ನೀಡಿದ್ದ 287 ಭಾರತೀಯ ಪ್ರಜೆಗಳು ಸಹ ಹಿಂತಿರುಗಿದ್ದಾರೆ ಎಂದು ಗೃಹ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ. ಕರ್ನಾಟಕದಲ್ಲಿರುವ 98 ಜನ ಪಾಕಿಸ್ತಾನ ಪ್ರಜೆಗಳಿಗೂ ದೇಶ ತೊರೆಯುವಂತೆ ಸೂಚಿಸಲಾಗಿದೆ. ಈ ಮಧ್ಯೆ, ವಾಘಾ ಗಡಿ ಬಂದ್ ಆದ ಕಾರಣ ಪಾಕ್ ವಧು–ರಾಜಸ್ಥಾನದ ವರ ಮದುವೆ ಅತಂತ್ರಗೊಂಡಿದೆ. ಈ ಮಧ್ಯೆ, ಉಗ್ರರ ವಿರುದ್ಧ ರಾಜ್ಯಾದ್ಯಂತ ಪ್ರತಿಭಟನೆಗಳು ಮುಂದುವರಿದಿವೆ.

## ಗುಜರಾತ್‌ನಲ್ಲಿ ನೆಲೆಸಿದ್ದ 1,000ಕ್ಕೂ ಹೆಚ್ಚು ಅಕ್ರಮ ಬಾಂಗ್ಲಾ ವಲಸಿಗರ ಬಂಧನ




## ಕಾಶ್ಮೀರದ ಹಲವೆಡೆ ಭದ್ರತಾ ಸಿಬ್ಬಂದಿ ಭರ್ಜರಿ ಕಾರ್ಯಾಚರಣೆ

ಭಾರತ



## ಪಾಕ್ ಬೆಂಬಲಿಸಿದ 9 ದೇಶದ್ರೋಹಿಗಳ ಬಂಧನ

ಪಾಕಿಸ್ತಾನ ಪರ ನಿಲುವು ತಳೆದಿದ್ದಕ್ಕಾಗಿ ಅಸ್ಸಾಂನಲ್ಲಿ ಮತ್ತೋರ್ವ ವ್ಯಕ್ತಿಯನ್ನು ಬಂಧಿಸಲಾಗಿದೆ. ಇದರೊಂದಿಗೆ ಅಸ್ಸಾಂನಲ್ಲಿ ಇಂತಹ ಬಂಧನಗಳ ಸಂಖ್ಯೆ ಒಂಬತ್ತಕ್ಕೇರಿದೆ ಎಂದು ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ತಿಳಿಸಿದ್ದಾರೆ. ಆರೋಪಿಗಳು ಫೇಸ್‌ಬುಕ್‌ನಲ್ಲಿ ಪಾಕಿಸ್ತಾನ್ ಜಿಂದಾಬಾದ್ ಎಂದು ಪೋಸ್ಟ್ ಮಾಡಿದ್ದರು ಪ್ರತಿಪಕ್ಷ ಎಐಯುಡಿಎಫ್ ಶಾಸಕ ಅಮಿನುಲ್ ಇಸ್ಲಾಂ ಸೇರಿದಂತೆ ಇಬ್ಬರನ್ನು ಬಂಧಿಸಲಾಗಿದ್ದು, ರಾಜ್ಯಾದ್ಯಂತ ಇನ್ನೂ ಆರು ಜನರನ್ನು ಬಂಧಿಸಲಾಗಿದೆ ಎಂದು ಶರ್ಮಾ ಹೇಳಿದ್ದಾರೆ. ಪಹಲ್ಗಾಮ್‌ನಲ್ಲಿ ನಡೆದ ಭೀಕರ ದಾಳಿಗೆ ಸಂಬಂಧಿಸಿದಂತೆ ಪಾಕಿಸ್ತಾನವನ್ನು ನೇರವಾಗಿ ಅಥವಾ ಪರೋಕ್ಷವಾಗಿ ಬೆಂಬಲಿಸುವ ಅಥವಾ ರಕ್ಷಿಸುವ ಯಾವುದೇ ವ್ಯಕ್ತಿಯನ್ನು ಅಸ್ಸಾಂ ಸಹಿಸುವುದಿಲ್ಲ ಎಂದು ಅವರು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದ್ದಾರೆ.

## ಪಾಕಿಸ್ತಾನೀಯರ ವಿರುದ್ಧದ ಪೋಸ್ಟರ್ ವೈರಲ್

ಉಗ್ರರ ದಾಳಿಯನ್ನು ಖಂಡಿಸಿ ದೇಶಾದ್ಯಂತ ಪ್ರತಿಭಟನೆ ಮುಂದುವರೆದಿರುವಂತೆಯೇ ಪಾಕಿಸ್ತಾನೀಯರ ವಿರುದ್ಧದ ಪೋಸ್ಟರ್‌ವೊಂದು ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕವಾಗಿ ವೈರಲ್ಲಾಗುತ್ತಿದೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ದೇಶಾದ್ಯಂತ ಆಕ್ರೋಶ ಪ್ರತಿಭಟನೆ ಭುಗಿಲೆದ್ದಿದೆ. ಜನ ಬೀದಿಗಿಳಿದು ಪಾಕಿಸ್ತಾನಿ ಪ್ರಾಯೋಜಿತ ಉಗ್ರ ದಾಳಿಯನ್ನು ಒಕ್ಕೊರಲಿನಿಂದ ಖಂಡಿಸುತ್ತಿದ್ದಾರೆ. ಏತನ್ಮಧ್ಯೆ ಉತ್ತರ ಪ್ರದೇಶದ ಇಂದೋರ್‌ನಲ್ಲಿ ಪ್ರಖ್ಯಾತ ಫುಡ್ ಸ್ಟ್ರೀಟ್‌ನಲ್ಲಿ ಪಾಕಿಸ್ತಾನಿಯರು ಮತ್ತು ಹಂದಿಗಳಿಗೆ ಪ್ರವೇಶವಿಲ್ಲ ಎಂಬ ಪೋಸ್ಟರ್ ಇದೀಗ ಭಾರಿ ಚರ್ಚೆಗೆ ಕಾರಣವಾಗಿದೆ. ಇಂದೋರ್‌ನ ಐಕಾನಿಕ್ ಛಪ್ಪನ್ ತುಕಾನ್ ಫುಡ್ ಸ್ಟ್ರೀಟ್ ರಸ್ತೆಯಲ್ಲಿರುವ ಆಹಾರ ಮಳಿಗೆಯ ಮೇಲೆ ಪಾಕಿಸ್ತಾನವನ್ನು ಗುರಿಯಾಗಿಟ್ಟುಕೊಂಡು ಹಾಕಲಾದ ಪೋಸ್ಟರ್‌ಗಳು ವ್ಯಾಪಕವಾಗಿ ಹರದಾಡುತ್ತಿವೆ. ಈ ಅಂಗಡಿಯಲ್ಲಿ ಹಂದಿಗಳು ಮತ್ತು ಪಾಕಿಸ್ತಾನಿ ನಾಗರಿಕರ ಪ್ರವೇಶವನ್ನು ನಿಷೇಧಿಸಲಾಗಿದೆ ಎಂದು ಒಂದು ದೊಡ್ಡ ಫಲಕದಲ್ಲಿ ಬರೆಯಲಾಗಿದೆ.

## ಮತ್ತೆ ಉಗ್ರರ ಮನೆ ಧ್ವಂಸ

'ಪೆಹಲ್ಗಾಮ್ ಉಗ್ರ ದಾಳಿ ಬೆನ್ನಲ್ಲೆ ಭಾರತೀಯ ಸೇನೆಯಿಂದ ಬುಲ್ಡೋಜರ್ ಕಾರ್ಯಾಚರಣೆ ನಡೆಸಿದ್ದು ರಾತ್ರೋರಾತ್ರಿ ಮತ್ತೆ ಮೂವರು ಲಷ್ಕರ್ ಉಗ್ರರ 7 ಮನೆಗಳ ನೆಲಸಮ ಮಾಡಿ ಪ್ರತೀಕಾರಕ್ಕೆ ಮುನ್ನುಡಿ ಬರೆದಿದೆ. ಇದರೊಂದಿಗೆ ಐವರು ಉಗ್ರರ ಮನೆಗೆ ಧ್ವಂಸ ಮಾಡಲಾಗಿದೆ. ಪುಲ್ವಾಮಾದಲ್ಲಿ ಅಹ್ಸಾನ್ ಶೇಖ್, ಶೋಪಿಯಾನ್‌ನಲ್ಲಿ ಶಾಹಿದ್ ಅಹ್ಮದ್ ಕುಟ್ಟೇ ಮತ್ತು ಕುಲ್ಗಾಮ್‌ನಲ್ಲಿ ಜಾಹಿದ್ ಅಹ್ಮದ್ ಅವರನ್ನು ಗುರಿಯಾಗಿಸಿಕೊಂಡು ಜಮ್ಮು ಮತ್ತು ಕಾಶ್ಮೀರ ಆಡಳಿತ ,ಲಷ್ಕರ್–ಎ–ತೈಬಾ ಭಯೋತ್ಪಾದಕರ ಮನೆಗಳನ್ನು ಧ್ವಂಸಗೊಳಿಸಿದೆ ಪಾಕಿಸ್ತಾನಿ ಭಯೋತ್ಪಾದಕರಿಗೆ ನೇರ ಬೆಂಬಲ ನೀಡಿದ ಕಾಶ್ಮೀರ ಮೂಲದ ಮೂವರು ಲಷ್ಕರ್ ಓವಗ್ರೌಂಡ್ ಕಾರ್ಯಕರ್ತರಲ್ಲಿ ಅಹ್ಸಾನ್ ಒಬ್ಬರಾಗಿದ್ದರೆ, ಕುಟ್ಟೇ ಮತ್ತು ಅಹ್ಮದ್ ಕಳೆದ 3–4 ವರ್ಷಗಳಿಂದ ರಾಷ್ಟ್ರ ವಿರೋಧಿ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದಾರೆ ಎಂದು ಆರೋಪಿಸಲಾಗಿದೆ. ಇದರೊಂದಿಗೆ ಕಳೆದ 24 ಗಂಟೆಗಳಲ್ಲಿ ಧ್ವಂಸಗೊಂಡ ಭಯೋತ್ಪಾದಕರ ಮನೆಗಳ ಸಂಖ್ಯೆ ಐದಕ್ಕೆ ಏರಿದೆ. ಪೆಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಭಾಗವಹಿಸಿದ ಕಾಶ್ಮೀರ ಮೂಲದ ಇತರ ಇಬ್ಬರು ಒಜಿಡಬ್ಲ್ಯೂಗಳಾದ ಆಸಿಫ್ ಶೇಖ್ ಮತ್ತು ಆದಿಲ್ ಥೋಕರ್ ಅವರ ಮನೆಗಳನ್ನು ಸ್ಫೋಟಿಸಲಾಗಿದೆ.

## ಝೀಲಂ ನದಿಗೆ ನೀರು ಹರಿಸಿದ ಭಾರತ

• **ಉದಯವಾಹಿನಿ, ಹೊಸ ದಿಲ್ಲಿ**

ಪಹಲ್ಗಾಮ್ ಭಯೋತ್ಪಾದಕ ದಾಳಿ ನಂತರ ಭಾರತವು ಪಾಕಿಸ್ತಾನದೊಂದಿಗಿನ ಸಿಂಧು ನದಿ ನೀರು ಹಂಚಿಕೆ ಒಪ್ಪಂದವನ್ನು ಅಮಾನತುಗೊಳಿಸಿತ್ತು. ಆ ಬೆನ್ನಲ್ಲೇ ಭಾರತವು ಪಾಕಿಸ್ತಾನಕ್ಕೆ ಯಾವುದೇ ಮುನ್ಸೂಚನೆ ನೀಡದೆ ಝೀಲಂ ನದಿಗೆ ನೀರು ಹರಿಸಿದ್ದು, ಭಾರೀ ಚರ್ಚೆಗೆ ಗ್ರಾಸವಾಗಿದೆ.


**ಭಾರತ ಅಂತರಾಷ್ಟ್ರೀಯ ನಿಯಮ ಉಲ್ಲಂಘಿಸಿದೆ**

ಭಾರತದ ಈ ನಿರ್ಧಾರವನ್ನು ಖಂಡಿಸಿರುವ ಪಾಕಿಸ್ತಾನದ ಮಾಜಿ ವಿದೇಶಾಂಗ ಸಚಿವ ಬಿಲಾವಲ್ ಭುಟ್ಟೋ ಭಾರತ ಒಂದು ವೇಳೆ ಸಿಂಧು ನದಿ ಒಪ್ಪಂದವನ್ನು ರದ್ದುಗೊಳಿಸಿದರೆ, ರಕ್ತ ಹರಿಯುತ್ತದೆ ಎಂದು ಎಚ್ಚರಿಕೆ ನೀಡಿದ್ದರು ಆ ಬೆನ್ನಲ್ಲೇ, ನೀರು ಹರಿಸಿರುವುದರಿಂದ ಪಾಕಿಸ್ತಾನದಲ್ಲಿ ಪ್ರವಾಹದ ಭೀತಿ ಹೆಚ್ಚಾಗಿದೆ ಎನ್ನಲಾಗಿದೆ. ಜೊತೆಗೆ ಭಾರತ ಅಂತರಾಷ್ಟ್ರೀಯ ನಿಯಮ ಉಲ್ಲಂಘಿಸಿದೆ ಎಂದು ಆರೋಪಿಸಿದೆ.

**ಪಾಕಿಸ್ತಾನದಲ್ಲಿ ಪ್ರವಾಹ ಭೀತಿ**

**ಮುಜಾಫರಾಬಾದ್ ಬಳಿ ನೀರಿನ ಮಟ್ಟ ಹೆಚ್ಚಳ**

ಭಾರತವು ಝೀಲಂ ನದಿಗೆ ನೀರು ಬಿಟ್ಟಿದ್ದರಿಂದ ಮುಜಾಫರಾಬಾದ್



ಬಳಿ ನೀರಿನ ಮಟ್ಟ ಹೆಚ್ಚಾಗಿದೆ. ಆಡಳಿತವು ಹಟ್ಟಿಯನ್ ಬಾಲಾದಲ್ಲಿ ತುರ್ತು ಪರಿಸ್ಥಿತಿ ಹೇರಿದೆ. ಮಸೀದಿಗಳಲ್ಲಿ ಈ ಬಗ್ಗೆ ಪ್ರಕಟಣೆ ಹೊರಡಿಸಿ ಜನರಿಗೆ ಎಚ್ಚರಿಕೆ ನೀಡಲಾಗಿದೆ. ನದಿ ತೀರದ ನಿವಾಸಿಗಳಲ್ಲಿ ಭಯದ ವಾತಾವರಣ ಸೃಷ್ಟಿಯಾಗಿದೆ. ಭಾರತವು ಇಂಡಸ್ ವಾಟರ್ ಟ್ರೀಟಿ ಒಪ್ಪಂದವನ್ನು ರದ್ದುಗೊಳಿಸುವ ಬೆದರಿಕೆ ಹಾಕಿದ ನಂತರ ಈ ಘಟನೆ ನಡೆದಿದೆ. ಭಾರತವು ಅಂತರಾಷ್ಟ್ರೀಯ ನಿಯಮಗಳನ್ನು ಉಲ್ಲಂಘಿಸುತ್ತಿದೆ ಎಂದು ಪಾಕಿಸ್ತಾನ ಆರೋಪಿಸಿದೆ. ಈ ಕ್ರಮವು ಅಂತರಾಷ್ಟ್ರೀಯ ಒಪ್ಪಂದಗಳಿಗೆ ವಿರುದ್ಧವಾಗಿದೆ. ಪಾಕಿಸ್ತಾನದ ಜನರು ಭಾರತದ ಈ ಕ್ರಮವನ್ನು ವಿರೋಧಿಸುತ್ತಿದ್ದಾರೆ.

ಈ ಒಪ್ಪಂದವು ಮೂರು ಯುದ್ಧಗಳು ಮತ್ತು ಅನೇಕ ಪ್ರಾದೇಶಿಕ ಸಮಸ್ಯೆಗಳನ್ನು ಎದುರಿಸಿದೆ. ಆದರೂ, ಭಾರತವು ಈಗ ಈ ಒಪ್ಪಂದದಿಂದ ಹಿಂದೆ ಸರಿಯಲು ಸಿದ್ಧವಾಗಿದೆ ಎಂದು ತೋರುತ್ತಿದೆ.

ಭಾರತದ ಈ ಕ್ರಮಕ್ಕೆ ಪ್ರತಿಕ್ರಿಯೆಯಾಗಿ, ಪಾಕಿಸ್ತಾನದ ರಾಷ್ಟ್ರೀಯ ಭದ್ರತಾ ಸಮಿತಿಯು ಅಂತರಾಷ್ಟ್ರೀಯ ನಿಯಮಗಳ ಅಡಿಯಲ್ಲಿ ಕೆಲವು ಕ್ರಮಗಳನ್ನು ತೆಗೆದುಕೊಂಡಿದೆ. ಭಾರತವು ಮತ್ತಷ್ಟು ವೈರಿ ಕ್ರಮಗಳನ್ನು ತೆಗೆದುಕೊಂಡರೆ ಉದ್ವಿಗ್ನತೆ ಹೆಚ್ಚಾಗಬಹುದು ಎಂದು ಎಚ್ಚರಿಕೆ ನೀಡಲಾಗಿದೆ. ಭಾರತದ ಈ ಕ್ರಮವು ಅಂತರಾಷ್ಟ್ರೀಯ ನಿಯಮಗಳು ಮತ್ತು ನೀರಿನ ಒಪ್ಪಂದಗಳ ಸಂಪೂರ್ಣ ಉಲ್ಲಂಘನೆಯಾಗಿದೆ. ಪಾಕಿಸ್ತಾನದ ಜನರು ಈ ಕ್ರಮಗಳ ವಿರುದ್ಧ ಹೋರಾಡಲು ಒಗ್ಗಟ್ಟಾಗಿದ್ದಾರೆ.

**ಅಟ್ಟಾರಿ ವಾಘಾ ಗಡಿ ಬಂದ್**

ಪಾಕಿಸ್ತಾನಕ್ಕೆ ರಸ್ತೆ ಮೂಲಕ ಸಂಪರ್ಕ ಕಲ್ಪಿಸುವ ಅಟ್ಟಾರಿ ವಾಘಾ ಗಡಿಯನ್ನು ತಕ್ಷಣದಿಂದ ಮುಚ್ಚುವ ಘೋಷಣೆಯನ್ನೂ ಭಾರತ ಮಾಡಿದೆ. ಪಂಜಾಬ್ ರಾಜಧಾನಿ ಅಮೃತಸರದಿಂದ 28 ಕಿ.ಮೀ ದೂರದಲ್ಲಿರುವ ಅಟ್ಟಾರಿ ಗಡಿಯು ಭಾರತ ಮತ್ತು ಪಾಕಿಸ್ತಾನದ ನಡುವೆ ಕಾನೂನುಬದ್ಧ ಸಂಚಾರಕ್ಕೆ ಇರುವ ಏಕೈಕ ರಸ್ತೆ ಮಾರ್ಗ. ಪಾಕಿಸ್ತಾನ ಮಾತ್ರವಲ್ಲದೆ ಅಫ್ಘಾನಿಸ್ತಾನದೊಂದಿಗಿನ ಸರಕುಗಳ ವ್ಯಾಪಾರಕ್ಕೂ ಇದೇ ಗಡಿಯನ್ನು ಬಳಸಲಾಗುತ್ತದೆ. ಪ್ರತಿ ವರ್ಷ ಸಾವಿರಾರು ಮಂದಿ ಈ ಗಡಿಯ ಮೂಲಕ ಉಭಯ ದೇಶಗಳ ನಡುವೆ ಪ್ರಯಾಣವನ್ನೂ ಮಾಡುತ್ತಾರೆ.

# ಬಿಡದಿ ಟೌನ್‌ಶಿಪ್‌ಗಾಗಿ ಭೂಸ್ವಾಧೀನ ಕೈಬಿಡುವಂತೆ ಒತ್ತಾಯಿಸಿ ಪತ್ರ

■ **ಟೌನ್‌ಶಿಪ್ ನಿರ್ಮಾಣಕ್ಕಾಗಿ ರೈತರ ಭೂಮಿ ಸ್ವಾಧೀನಕ್ಕೆ, ಮಾಜಿ ಪ್ರಧಾನಮಂತ್ರಿ ಎಚ್.ಡಿ.ದೇವೇಗೌಡರ ತೀವ್ರ ವಿರೋಧ**

• **ಉದಯವಾಹಿನಿ, ಬೆಂಗಳೂರು**

ಬಿಡದಿ ಬಳಿ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಟೌನ್‌ಶಿಪ್ ನಿರ್ಮಾಣಕ್ಕಾಗಿ ರೈತರ ಭೂಮಿ ಸ್ವಾಧೀನಕ್ಕೆ, ಮಾಜಿ ಪ್ರಧಾನಮಂತ್ರಿ ಎಚ್.ಡಿ.ದೇವೇಗೌಡರ ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ.

ಈ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿರುವ ಎಚ್‌ಡಿ ದೇವೇಗೌಡ, ಟೌನ್‌ಶಿಪ್ ಯೋಜನೆಗಾಗಿ ಭೂಸ್ವಾಧೀನ ಪ್ರಕ್ರಿಯೆಯಿಂದ ರೈತರ ಭೂಮಿಯನ್ನು ಕೈ ಬಿಡಬೇಕು ಎಂದು ಆಗ್ರಹಿಸಿದ್ದಾರೆ.

ಬಿಡದಿ ಹೋಬಳಿಯ ಬೈರಮಂಗಲ, ಕಂಚುಗಾರನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ 24 ಗ್ರಾಮಗಳಲ್ಲಿನ ಹಲವಾರು ಸರ್ವೆ ನಂಬರುಗಳಲ್ಲಿರುವ ಸುಮಾರು 10 ಸಾವಿರ ಎಕರೆ ಜಮೀನನ್ನು ಸರ್ಕಾರ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಟೌನ್‌ಶಿಪ್ ಯೋಜನೆ ನಿರ್ಮಾಣಕ್ಕೆ





ಭೂಸ್ವಾಧೀನ ಪ್ರಕ್ರಿಯೆ ಪ್ರಾರಂಭಿಸಿರುವ ಹಿನ್ನೆಲೆಯಲ್ಲಿ, ಮಾಜಿ ಪ್ರಧಾನಿ ಈ ಪತ್ರ ಬರೆದಿದ್ದಾರೆ. 'ರಾಮನಗರ ಮತ್ತು ಕನಕಪುರ ತಾಲ್ಲೂಕುಗಳಲ್ಲಿ ಕೈಗಾರಿಕಾಭಿವೃದ್ಧಿಗೆ ಸರ್ಕಾರ ಈಗಾಗಲೇ ಸಾವಿರಾರು ಎಕರೆ ರೈತರ ಭೂಮಿಯನ್ನು ವಶಪಡಿಸಿಕೊಂಡಿದ್ದು, ಬೆಂಗಳೂರಿಗೆ ಹೊಂದಿಕೊಂಡಿರುವ ಕಾರಣಕ್ಕೆ ಈ ಭಾಗದಲ್ಲಿ ಹಲವಾರು ಖಾಸಗಿ ಉದ್ದಿಮೆಗಳು ಸ್ಥಾಪನೆಯಾಗಿವೆ. ಜೊತೆಗೆ, ಕರ್ನಾಟಕ ಗೃಹ ಮಂಡಳಿ ಮತ್ತಿತರ ಸರಕಾರಿ ಪ್ರಾಧಿಕಾರಗಳು ಬಿಡದಿ ಸುತ್ತಮುತ್ತ ಹಲವು ವಸತಿ ಯೋಜನೆಗಳನ್ನು ರೂಪಿಸಿ, ರೈತರ ಜಮೀನು ಸ್ವಾಧೀನ ಮಾಡಿಕೊಂಡಿವೆ. ಇಂತಹ ಸ್ಥಿತಿಯಲ್ಲಿ ಮತ್ತಷ್ಟು ಟೌನ್‌ಶಿಪ್ ಯೋಜನೆಗಾಗಿ ಕೃಷಿ ಸಾಗುವಳಿ ಭೂಮಿಯನ್ನು ಸ್ವಾಧೀನಪಡಿಸಿಕೊಂಡು ರೈತರನ್ನು ಒಕ್ಕಲೆಬ್ಬಿಸುವುದು ಬೇಡ'' ಎಂದು ಎಚ್‌ಡಿ ದೇವೇಗೌಡ ಮುಖ್ಯಮಂತ್ರಿಗಳಿಗೆ ಬರೆದ ಪತ್ರದಲ್ಲಿ ಹೇಳಿದ್ದಾರೆ. ಬಿಡದಿ ಸುತ್ತಮುತ್ತಲ ರೈತರು ಜೀವನ ನಿರ್ವಹಣೆಗಾಗಿ ಹೈನುಗಾರಿಕೆ, ರೇಷ್ಮೆ, ತೋಟಗಾರಿಕೆ ಮತ್ತು ಕೃಷಿಯನ್ನು ಅವಲಂಬಿಸಿದ್ದು, ಬಹುಪಾಲು ರೈತರು ಅತೀ ಸಣ್ಣ ಮತ್ತು ಸಣ್ಣ ಹಿಡುವಳಿದಾರರಾಗಿದ್ದಾರೆ. ಟೌನ್‌ಶಿಪ್ ಹೆಸರಿನಲ್ಲಿಮತ್ತಷ್ಟು ಭೂಮಿ ಕಸಿದುಕೊಂಡರೆ ಸಾವಿರಾರು ರೈತ ಕುಟುಂಬಗಳ ಯುವಕರು ನಿರುದ್ಯೋಗಿಗಳಾಗಿ ಬೀದಿಪಾಲಾಗುತ್ತಾರೆ ಎಂದು ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡ ಅವರು ಮುಖ್ಯಮಂತ್ರಿಗಳಿಗೆ ಬರೆದ ಪತ್ರದಲ್ಲಿ ಆತಂಕ ವ್ಯಕ್ತಪಡಿಸಿದ್ದಾರೆ.


**ದೇವೇಗೌಡ ಮಾತು ಕೇಳ್ತಾರಾ ಸಿಎಂ**

ಇನ್ನು ಬಿಡದಿ ಟೌನ್‌ಶಿಪ್ ವಿರೋಧಿಸಿ ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡ ಅವರು ಬರೆದಿರುವ ಪತ್ರಕ್ಕೆ, ಸಿದ್ದರಾಮಯ್ಯ ಯಾವ ರೀತಿಯ ಪ್ರತಿಕ್ರಿಯೆ ನೀಡಲಿದ್ದಾರೆ ಎಂಬುದು ಇದೀಗ ಕುತೂಹಲ ಮೂಡಿಸಿದೆ. ಬಿಡದಿ ಟೌನ್‌ಶಿಪ್ ಯೋಜನೆಯನ್ನು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಪ್ರತಿಷ್ಠೆಯನ್ನಾಗಿ ಸ್ವೀಕರಿಸಿದ್ದಾರೆ. ಟೌನ್‌ಶಿಪ್ ನಿರ್ಮಾಣ ಖಚಿತ ಎನ್ನುತ್ತಿರುವ ಡಿಕೆಶಿ, ಇದಕ್ಕಾಗಿ ಬರುವ ಎಲ್ಲಾ ಅಡೆಗಡೆಗಳನ್ನು ಎದುರಿಸುವುದಾಗಿ ಘೋಷಿಸಿದ್ದಾರೆ. ಅಲ್ಲದೇ ಈ ವಿಚಾರಚಾಗಿ ಎಚ್‌ಡಿ ದೇವೇಗೌಡ ಅವರಲ್ಲೂ ಮನವಿ ಮಾಡಿರುವ ಡಿಕೆ ಶಿವಕುಮಾರ್, ಬಿಡದಿ ಟೌನ್‌ಶಿಪ್ ಯೋಜನೆ ನಿಮ್ಮ ಮಗನ (ಮಾಜಿ ಸಿಎಂ ಎಚ್‌ಡಿ ಕುಮಾರಸ್ವಾಮಿ) ಆಡಳಿತಾವಧಿಯಲ್ಲೇ ಜಾರಿಗೆ ಬಂದಿದೆ ಎಂದು ಸೂಚ್ಯವಾಗಿ ಹೇಳಿದ್ದಾರೆ. ಈ ಎಲ್ಲಾ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಿಡದಿ ಟೌನ್‌ಶಿಪ್ ಯೋಜನೆಗೆ ರೈತರ ಜಮೀನು ಭೂಸ್ವಾಧೀನ ವಿರೋಧಿಸಿ, ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡ ಅವರು ಬರೆದ ಪತ್ರಕ್ಕೆ ಏನು ಪ್ರತಿಕ್ರಿಯೆ ನೀಡಲಿದ್ದಾರೆ ಎಂಬುದನ್ನು ಕಾದು ನೋಡಬೇಕಿದೆ.

**ಈ ದಿನದ ದರ** | ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹9,821/Gram24ct ₹9,002/Gram22ct | ಬೆಳ್ಳಿ: ₹101.90/Gram

# ಶ್ರೀ ಶ್ರೀನಿವಾಸ ಕಲ್ಯಾಣ

• ಉದಯವಾಹಿನಿ, ಬೆಂಗಳೂರು



ಶ್ರೀ ರಾಘವೇಂದ್ರ ಸೇವಾ ಸಮಿತಿಯ ವತಿಯಿಂದ ವೈಶಾಖ ಮಾಸದ ಪ್ರಯುಕ್ತ ಏಪ್ರಿಲ್ 28 ರಿಂದ ಮೇ 7ರ ವರೆಗೆ ಪ್ರತಿದಿನ ಸಂಜೆ 7-00ಕ್ಕೆ ಮ. ಶಾ.ಸಂ. ಶ್ರೀ ಕಲ್ಯಾ ಶ್ರೀಕಾಂತಾಚಾರ್ಯರಿಂದ ಶ್ರೀ ಶ್ರೀನಿವಾಸ ಕಲ್ಯಾಣ ಧಾರ್ಮಿಕ ಪ್ರವಚನ ಏರ್ಪಡಿಸಿದೆ. ಸ್ಥಳ: ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 6ನೇ ಅಡ್ಡರಸ್ತೆ, ಈಜುಕೊಳದ ಬಡಾವಣೆ, ಸುಧೀಂದ್ರನಗರ, ಮಲ್ಲೇಶ್ವರಂ, ಬೆಂಗಳೂರು-560003.

# 223 ಗ್ರಾ. ಪಂ. 265 ಸದಸ್ಯ ಸ್ಥಾನಗಳ ಚುನಾವಣೆಗೆ ವೇಳಾಪಟ್ಟಿ ಪ್ರಕಟ

• ಉದಯವಾಹಿನಿ, ಬೆಂಗಳೂರು

ವಿವಿಧ ಕಾರಣಗಳಿಂದ ತೆರವಾಗಿರುವ 223 ಗ್ರಾಮ ಪಂಚಾಯಿತಿಗಳ 265 ಸದಸ್ಯ ಸ್ಥಾನಗಳಿಗೆ ರಾಜ್ಯ ಚುನಾವಣಾ ಆಯೋಗ ಉಪ ಚುನಾವಣಾ ವೇಳಾಪಟ್ಟಿ ಪ್ರಕಟಿಸಿದೆ. ಸಂಬಂಧಪಟ್ಟ ಜಿಲ್ಲೆಯ ಚುನಾವಣಾಧಿಕಾರಿಗಳು ಮೇ 8 ರಂದು ಅಧಿಸೂಚನೆ ಹೊರಡಿಸಲಿದ್ದು, ಅಂದಿನಿಂದಲೇ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭಗೊಳ್ಳಲಿದೆ.

ಮೇ 14 ನಾಮಪತ್ರ ಸಲ್ಲಿಸಲು ಕಡೆಯ ದಿನವಾಗಿದ್ದು, ಮೇ 15 ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಉಮೇದುವಾರಿಕೆಯನ್ನು ವಾಪಸ್ ಪಡೆಯಲು ಮೇ 17 ಕಡೆಯ ದಿನವಾಗಿದೆ. ಮತದಾನದ ಅವಶ್ಯವಿದ್ದರೆ ಮೇ 25 ರಂದು ಬೆಳಿಗ್ಗೆ 7 ಗಂಟೆಯಿಂದ ಸಂಜೆ 5 ಗಂಟೆವರೆಗೆ ಮತದಾನ ನಡೆಸಲಾಗುತ್ತದೆ. ಮೇ 28 ರಂದು ಆಯಾ ತಾಲ್ಲೂಕು ಕೇಂದ್ರಗಳಲ್ಲಿ ಬೆಳಿಗ್ಗೆ 8 ಗಂಟೆಯಿಂದ ಮತ ಎಣಿಕೆ ನಡೆಯಲಿದ್ದು, ಅಂದೇ ಫಲಿತಾಂಶ ಪ್ರಕಟವಾಗಲಿದೆ.

ಉಪ ಚುನಾವಣೆ ನಡೆಯುವ ಗ್ರಾಮ ಪಂಚಾ ಯಿತಿಗಳ ವ್ಯಾಪ್ತಿಯಲ್ಲಿ ಮೇ 8 ರಿಂದ ಮೇ 28ರವರೆಗೆ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುತ್ತದೆ ಎಂದು ಆಯೋಗ ಹೊರಡಿಸಿರುವ ಆದೇಶದಲ್ಲಿ ತಿಳಿಸಲಾಗಿದೆ. ರಾಜ್ಯದ ಬಹುತೇಕ ಎಲ್ಲಾ ಜಿಲ್ಲೆಗಳ 135 ತಾಲ್ಲೂಕುಗಳ 223 ಗ್ರಾಮ ಪಂಚಾಯಿತಿಗಳ 265 ಸದಸ್ಯ ಸ್ಥಾನಗಳಿಗೆ ಚುನಾವಣೆ ಘೋಷಣೆಯಾಗಿದೆ.

# ಪ್ರೀತಿಸುವಂತೆ ಒತ್ತಾಯಿಸಿ ಚಾಕು ಇರಿದ ಎಂಜಿನಿಯರ್ ಅರೆಸ್ಟ್

• ಉದಯವಾಹಿನಿ, ಬೆಂಗಳೂರು

ಪ್ರೀತಿಸುವಂತೆ ಕಾಲೇಜು ವಿದ್ಯಾರ್ಥಿನಿಗೆ ಒತ್ತಾಯಿಸಿ ಚಾಕುವಿನಿಂದ ಇರಿದು ಪರಾರಿಯಾಗಿದ್ದ ಸಾಫ್ಟ್‌ವೇರ್ ಇಂಜಿನಿಯರೊಬ್ಬರನ್ನು ಬನಶಂಕರಿ ಠಾಣೆ ಪೊಲೀಸರು ಬಂಧಿಸಿದ್ದಾರೆ. ಜೆಸಿನಗರದ ಕುರುಬರಹಳ್ಳಿ ನಿವಾಸಿ ಶ್ರೀಕಾಂತ್ (43) ಬಂಧಿತ ಆರೋಪಿ. ಈತನಿಗೆ ಮದುವೆಯಾಗಿದ್ದು ಮಕ್ಕಳಿವೆ ಎಂದು ಪೊಲೀಸರು ಈ ಸಂಜೆಗೆ ತಿಳಿಸಿದ್ದಾರೆ. ಕಾಲೇಜು ವಿದ್ಯಾರ್ಥಿನಿ ಪೋಷಕರು ಈ ಹಿಂದೆ ಇವರ ಮನೆಯಲ್ಲಿ ಬಾಡಿಗೆಗೆ ಇದ್ದರು. ಈಗ ಬೇರೆ ಕಡೆ ನೆಲೆಸಿದ್ದಾರೆ. ಪ್ರೀತಿಸುವಂತೆ ಹಿಂದೆ ಬಿದ್ದಿದ್ದ ಈತ ವಿದ್ಯಾರ್ಥಿನಿ ಎಲ್ಲೆಲ್ಲಿ ಹೋಗುತ್ತಾರೆ ಅಲ್ಲೆಲ್ಲ ಹೋಗುತ್ತಿದ್ದ. ಇತ್ತೀಚೆಗೆ ಈಕೆ ಬನಶಂಕರಿ ಪೊಲೀಸ್ ಠಾಣೆ ವ್ಯಾಪ್ತಿಗೆ ಬರುವ ದೇವೇಗೌಡ ಪೆಟ್ರೋಲ್ ಬಂಕ್ ಬಳಿ ಈ ವಿದ್ಯಾರ್ಥಿನಿ ತನ್ನ ಸ್ನೇಹಿತನ ಜೊತೆ ಮಾತನಾಡುತ್ತಾ ನಿಂತಿದ್ದಳು. ಆಗ ಅಲ್ಲಿಗೆ ಬಂದ ಈತ ಜಗಳ ತೆಗೆದು ಕೈಗೆ ಚಾಕುವಿನಿಂದ ಇರಿದು ಪರಾರಿಯಾಗಿದ್ದ. ಈ ಬಗ್ಗೆ ವಿದ್ಯಾರ್ಥಿನಿ ಪೊಲೀಸರಿಗೆ ದೂರು ನೀಡಿದ್ದರು. ಪ್ರಕರಣ ದಾಖಲಿಸಿಕೊಂಡ ಪೊಲೀಸರು ಪರಿಶೀಲಿಸಿ ಆರೋಪಿಯನ್ನು ಬಂಧಿಸಿದ್ದಾರೆ.

# ಮಹೇಶ್ ಜೋಶಿಗೆ ಭದ್ರತೆ ಒದಗಿಸಿ: ಹೈಕೋರ್ಟ್ ಮೌಖಿಕ ನಿರ್ದೇಶನ

• ಉದಯವಾಹಿನಿ, ಬೆಂಗಳೂರು

ತಮಗೆ ಜೀವ ಬೆದರಿಕೆ ಇದೆ ಎಂದು ಆತಂಕ ವ್ಯಕ್ತಪಡಿಸಿರುವ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಹೇಶ್ ಜೋಶಿ ಅವರಿಗೆ ಅಗತ್ಯವಿದ್ದರೆ ಸೂಕ್ತ ಭದ್ರತೆ ಒದಗಿಸಿ ಎಂದು ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ಮೌಖಿಕ ನಿರ್ದೇಶನ ನೀಡಿದೆ. ಈ ಸಂಬಂಧ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಹೇಶ್ ಜೋಶಿ ಸಲ್ಲಿಸಿರುವ ರಿಟ್ ಅರ್ಜಿಯನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ ಶನಿವಾರ ವಿಚಾರಣೆ ನಡೆಸಿತು. ವಿಚಾರಣೆ ವೇಳೆ, ಜೋಶಿ ಅವರಿಗೆ ಅಗತ್ಯವಿದ್ದರೆ ಸೂಕ್ತ ಭದ್ರತೆಯನ್ನು ಒದಗಿಸಿ ಎಂದು ಪ್ರಾಸಿಕ್ಯೂಷನ್ ಪರ ಹಾಜರಿದ್ದ ರಾಹುಲ್ ಕಾರ್ಯಪ್ಪ ಅವರಿಗೆ ನಿರ್ದೇಶಿಸಿದ ನ್ಯಾಯಪೀಠ ಲಿಖಿತ ಆದೇಶವನ್ನು ಕಾಯ್ದಿರಿಸಿತು.

ಕಳೆದ ವರ್ಷ ಮಂಡ್ಯದಲ್ಲಿ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಜರುಗಿದ ಗಳಿಗೆಯಿಂದ ನನಗೆ ಜೀವ ಬೆದರಿಕೆಯ ಆಡಿಯೋ-ವಿಡಿಯೋ ಕರೆಗಳು ಬರುತ್ತಿವೆ. ಇದರಿಂದ ನನ್ನ ಜೀವಕ್ಕೆ ಅಪಾಯವಿದ್ದು, 24X7 ಭದ್ರತೆ ಒದಗಿಸುವ ಗನ್‌ಮೆನ್ ಜೊತೆಗೆ ಸೂಕ್ತ ಪೊಲೀಸ್ ರಕ್ಷಣೆ ಒದಗಿಸಲು ಸರ್ಕಾರಕ್ಕೆ ನಿರ್ದೇಶಿಸಬೇಕು ಎಂದು ಮಹೇಶ್ ಜೋಶಿ ಕೋರಿದ್ದಾರೆ. ಜೋಶಿ ಪರ ಪದಾಂಕಿತ ಹಿರಿಯ ವಕೀಲ ಎಸ್.ಬಸವರಾಜು ವಾದ ಮಂಡಿಸಿದ್ದರು. ಹೈಕೋರ್ಟ್ ವಕೀಲ ಎಂ.ಉದಯ ಶಂಕರ್ ವಕಾಲತ್ತು ವಹಿಸಿದ್ದಾರೆ.

# ಎಕ್ಸ್‌ಪೊ: ಬಿಎಂಟಿಸಿಗೆ ಎರಡು ಪ್ರಶಸ್ತಿ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ನಡೆದ ಕನೆಕ್ಟೆಡ್ ಆಟೋನೊಮಸ್ ಆ್ಯಂಡ್ ಎಲೆಕ್ಟ್ರಿಕ್ ವೆಹಿಕಲ್ ಎಕ್ಸ್‌ಪೊದಲ್ಲಿ ಬಿಎಂಟಿಸಿ ಎರಡು ಪ್ರಶಸ್ತಿಗಳನ್ನು ಪಡೆದಿದೆ. ಪರಿಸರ ಸ್ನೇಹಿ, ವಿದ್ಯುತ್ ಆಧಾರಿತ ಎಂಜಿನ್‌ಗಳ ವಾಹನಗಳನ್ನು ಹೆಚ್ಚಿಸುವ ಕ್ರಮಗಳಿಗಾಗಿ ಪಯೋನಿರಿಂಗ್ ಇನ್ ಗ್ರೀನ್ ಪಬ್ಲಿಕ್ ಟ್ರಾನ್ಸ್‌ಪೋರ್ಟ್ ಪ್ರಶಸ್ತಿ, ಡಿಜಿಟಲ್ ಆಧಾರಿತ ಪಾವತಿ ವ್ಯವಸ್ಥೆ ಯನ್ನು ಅನುಷ್ಠಾನಗೊಳಿಸಿದ್ದಕ್ಕಾಗಿ ನೆಕ್ಸ್ ಜೆನ್ ಕಮ್ಯೂಟರ್ ಕನ್ವಿನಿ ಯನ್ಸ್ ಪ್ರಶಸ್ತಿಗಳನ್ನು ಪಡೆದಿದೆ. ಬಿಎಂಟಿಸಿ ಕೇಂದ್ರೀಯ ವಲಯ ವಿಭಾಗೀಯ ನಿಯಂತ್ರಣಾಧಿಕಾರಿ ಜಗದೀಶ್ ಎಂ., ಕಾರ್ಯ ವ್ಯವಸ್ಥಾಪಕ ಶರಣ್ ಬಸವರಾಜ್ ಕೆ.ಎಂ. ಅವರು ಸಂಸ್ಥೆಯ ಪರವಾಗಿ ಪ್ರಶಸ್ತಿ ಸ್ವೀಕರಿಸಿದರು.

# ಐಶ್ವರ್ಯ ಗೌಡ ಮನೆ ಮೇಲೆ ಇಡಿ ದಾಳಿ 2.25 ಕೋಟಿ ನಗದು ಪತ್ತೆ

• ಉದಯವಾಹಿನಿ, ಬೆಂಗಳೂರು

ಚಿನ್ನ ಸೇರಿದಂತೆ ಹಲವು ವಂಚನೆ ಪ್ರಕರಣಗಳನ್ನು ಎದುರಿಸುತ್ತಿರುವ ಐಶ್ವರ್ಯ ಗೌಡ ಮನೆ ಮೇಲೆ ಎರಡು ದಿನಗಳ ಹಿಂದೆ ಇಡಿ ದಾಳಿ ನಡೆಸಿತ್ತು. ದಾಳಿ ವೇಳೆ 2.25 ಕೋಟಿ ರೂ. ನಗದು ಪತ್ತೆಯಾರುವುದಾಗಿ ಇಡಿ ಪ್ರಕಟಣೆ ಮೂಲಕ ತಿಳಿಸಿದೆ. ಮಾಜಿ ಸಂಸದ ಡಿ.ಕೆ.ಸುರೇಶ್ ಸಹೋದರಿ ಎಂದು ವಂಚನೆ ಮಾಡಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಇಡಿ ಅಧಿಕಾರಿಗಳು ಐಶ್ವರ್ಯಗೌಡ ವಿರುದ್ಧ ಕೇಸ್ ದಾಖಲಿಸಿಕೊಂಡು ತನಿಖೆ ಮಾಡುತ್ತಿದ್ದರು. ತನಿಖೆಯ ಮುಂದುವರೆದ ಭಾಗವಾಗಿ ಇಡಿ ಅಧಿಕಾರಿಗಳು ಆರೋಪಿ ಐಶ್ವರ್ಯ ಗೌಡ ಮನೆ, ಕಚೇರಿ, ಶಾಸಕ ವಿನಯ್ ಕುಲಕರ್ಣಿ ಮನೆ ಸೇರಿ ಒಟ್ಟು 14 ಸ್ಥಳಗಳಲ್ಲಿ ಇಡಿ ಅಧಿಕಾರಿಗಳು ದಾಳಿ ನಡೆಸಿದ್ದರು.

ಇಡಿ ದಾಳಿಯ ವೇಳೆ 2.25 ಕೋಟಿ ರೂ. ನಗದು ಪತ್ತೆಯಾಗಿದ್ದು, ಅಕ್ರಮ ಹಣ ವರ್ಗಾವಣೆ ಸಂಬಂಧ ಒಂದಷ್ಟು ಮಹತ್ವದ ದಾಖಲೆಗಳು ಪತ್ತೆಯಾಗಿರುವ ಬಗ್ಗೆ ಇಡಿ ಸ್ಪಷ್ಟಪಡಿಸಿದೆ.

### ಬೆಂಗಳೂರಿನಲ್ಲಿ ಫ್ಲೆಕ್ಸ್‌ಗಳದ್ದೇ ಕಾಟ! ಹೈಕೋರ್ಟ್ ಆದೇಶ ಇದ್ದರೂ ಜನಪ್ರತಿನಿಧಿಗಳೇ ಡೋಂಟ್ ಕೇರ್

# ಎಲ್ಲಾ ಕಡೆಗಳಲ್ಲಿ ಫ್ಲೆಕ್ಸ್, ಕಟೌಟ್‌ಗಳೇ ರಾರಾಜಿಸುತ್ತಿವೆ

• ಉದಯವಾಹಿನಿ, ಬೆಂಗಳೂರು

ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಫ್ಲೆಕ್ಸ್ ಗಳ ಅಬ್ಬರ ಜೋರಾಗಿದೆ. ಜನರ ಪ್ರಮುಖ ರಸ್ತೆಗಳಲ್ಲಿ ಎತ್ತ ನೋಡಿದರತ್ತ ಫ್ಲೆಕ್ಸ್ ಗಳ ದ್ದೇ ಕಾರುಬಾರು ಜೋರಾಗಿದೆ. ಶಾಸಕರು, ಸಚಿವರು, ಜನಪ್ರತಿನಿಧಿಗಳು ತಮ್ಮ ಹುಟ್ಟು ಹಬ್ಬಕ್ಕೆ ಶುಭಕೋರುವ ಹೆಸರಿನಲ್ಲಿ ಬೃಹತ್ ಫ್ಲೆಕ್ಸ್, ಕಟೌಟ್ ಗಳನ್ನು ಅಳವಡಿಸುತ್ತಿದ್ದಾರೆ.

■ ನಗರದಲ್ಲಿ ಫ್ಲೆಕ್ಸ್, ಕಟೌಟ್ ಹಾಕಲು ನಿಷೇಧ ಇದ್ದರೂ ಜನಪ್ರತಿನಿಧಿಗಳೇ ಅದನ್ನು ಪಾಲನೆ ಮಾಡುತ್ತಿಲ್ಲ

■ ವಿಜಯ ನಗರದಲ್ಲಿ ಕಾಂಗ್ರೆಸ್ ಶಾಸಕರಿಬ್ಬರ ಹುಟ್ಟುಹಬ್ಬಕ್ಕೆ ಶುಭಕೋರುವ ಫ್ಲೆಕ್ಸ್, ಕಟೌಟ್ ರಾಜಾಜಿಸುತ್ತಿವೆ

ಆಳೆತ್ತರದ ಫ್ಲೆಕ್ಸ್, ಕಟೌಟ್‌ಗಳು ನಗರದ ಸೌಂದರ್ಯವನ್ನು ಕೆಡಿಸುತ್ತಿದೆ. ನಗರದ ಸೌಂದರ್ಯ ಕಾಪಾಡುವ ನಿಟ್ಟಿನಲ್ಲಿ ಬೆಂಗಳೂರಿನಲ್ಲಿ ಇನ್ಮುಂದೆ ಯಾರೂ ಇನ್ಮುಂದೆ ಫ್ಲೆಕ್ಸ್, ಕಟೌಟ್ ಹಾಕುವ ಹಾಗಿಲ್ಲ ಎಂದು ಡಿಸಿಎಂ ಡಿಕೆ ಶಿವಕುಮಾರ್ ಅಬ್ಬರಿಸಿದ್ದರು. ಬೆಂಗಳೂರಿನಲ್ಲಿ ಪತ್ರಿಕಾಗೋಷ್ಠಿಯನ್ನು ನಡೆಸಿದ್ದ ಅವರು, ಫ್ಲೆಕ್ಸ್, ಕಟೌಟ್ ಅಳವಡಿಕೆ ಮಾಡದಂತೆ ಎಚ್ಚರಿಕೆ ನೀಡಿದ್ದರು. ಆಗಸ್ಟ್ 15 ರ ಒಳಗಡೆ ಫ್ಲೆಕ್ಸ್ ಹಾಕುವುದನ್ನು ಬ್ಯಾನ್ ಮಾಡುತ್ತೇವೆ. ಈ ಬಗ್ಗೆ ನ್ಯಾಯಾಲಯದ ಆದೇಶವೂ ಇದೆ. ಯಾವದೇ ಪಕ್ಷದ ಫ್ಲೆಕ್ಸ್ ಬೋರ್ಡಿಂಗ್ ಇರಲಿ ಅದನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುವುದು ಎಂದಿದ್ದರು. ಈ ಮಾತನ್ನು ಆಡಿ ವರ್ಷಗಳು ಕಳೆದಿದೆ. ಆದರೆ ಇದು ಕೇವಲ ಮಾತಿಗಷ್ಟೇ ಸೀಮಿತವಾಗಿದೆ.

**ಜನಪ್ರತಿನಿಧಿಗಳೇ ಪಾಲನೆ ಮಾಡ್ತಿಲ್ಲ:** ನಗರದ ವಿಜಯನಗರದಲ್ಲಿ





☛ ಉದಯವಾಹಿನಿ ಚಿತ್ರ

ಕಾಂಗ್ರೆಸ್ ಶಾಸಕ ಎಂ ಕೃಷ್ಣಪ್ಪ, ಅವರ ಪುತ್ರ ಗೋವಿಂದರಾಜನಗರ ಶಾಸಕರಾದ ಪ್ರಿಯ ಕೃಷ್ಣ ಅವರ ಫ್ಲೆಕ್ಸ್‌ಗಳದ್ದೇ ಅಬ್ಬರ ಜೋರಾಗಿದೆ. ಟೋಲ್ ಗೇಟ್ ತುಂಬಾ ಕಟೌಟ್‌ಗಳೇ ರಾರಾಜಿಸುತ್ತಿವೆ. ಇಬ್ಬರ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ಅವರ ಅಭಿಮಾನಿಗಳು ಮನಸೋ ಇಚ್ಛೆ ಫ್ಲೆಕ್ಸ್ ಗಳನ್ನು ಅಳವಡಿಸಿದ್ದಾರೆ.

**ಕಠಿಣ ಕ್ರಮಕ್ಕೆ ಎ ಎ ಪಿ ಆಗ್ರಹ:** ಬೆಂಗಳೂರಿನ ಶಾಸಕರುಗಳು ಅವ್ಯಾಹತವಾಗಿ ಫ್ಲೆಕ್ಸ್ ಬ್ಯಾನರ್ ಗಳನ್ನು ಅಳವಡಿಸುವ ಮೂಲಕ ಮೂಲಕ ಬೆಂಗಳೂರಿನ ಸೌಂದರ್ಯವನ್ನು ಹಾಳುಗಡೆವುತ್ತಿದ್ದಾರೆ. ಇದಲ್ಲದೆ ಅನೇಕ ಕಡೆ ನಾಗರೀಕರುಗಳ ಮೇಲೆ ಗಾಯಗಳಾಗಿವೆ. ಇವರುಗಳ ವಿರುದ್ಧ ಕಠಿಣ ಕಾನೂನು ಕ್ರಮಗಳನ್ನು ತೆಗೆದುಕೊಳ್ಳಬೇಕೆಂದು ಆಮ್ ಆದ್ಮಿ ಪಕ್ಷದ ನಿಯೋಗ ಬಿಬಿಎಂಪಿಯ ಮುಖ್ಯ ಕಮಿಷನರ್ ಹುಷಾರ್ ಗಿರಿನಾಥ್ ರನ್ನು ಭೇಟಿ ಮಾಡಿ ಆಗ್ರಹಿಸಿದ್ದಾರೆ.

**ಕಾನೂನು ಕ್ರಮ ಕೈಗೊಳ್ಳಲಾಗುವುದು**

**ಬೆಂಗಳೂರು ನಗರದಲ್ಲಿ ಎಲ್ಲಾ ಕಡೆಗಳಲ್ಲಿ ಫ್ಲೆಕ್ಸ್, ಕಟೌಟ್‌ಗಳೇ ರಾರಾಜಿಸುತ್ತಿವೆ. ನಗರದಲ್ಲಿ ಫ್ಲೆಕ್ಸ್, ಕಟೌಟ್ ಹಾಕಲು ನಿಷೇಧ ಇದ್ದರೂ ಜನಪ್ರತಿನಿಧಿಗಳೇ ಅದನ್ನು ಪಾಲನೆ ಮಾಡುತ್ತಿಲ್ಲ. ವಿಜಯ ನಗರದಲ್ಲಿ ಕಾಂಗ್ರೆಸ್ ಶಾಸಕರಿಬ್ಬರ ಹುಟ್ಟುಹಬ್ಬಕ್ಕೆ ಶುಭಕೋರುವ ಫ್ಲೆಕ್ಸ್, ಕಟೌಟ್ ರಾಜಾಜಿಸುತ್ತಿವೆ. ಈ ಹಿಂದೆ ಬೆಂಗಳೂರಿನಲ್ಲಿ ಪತ್ರಿಕಾಗೋಷ್ಠಿಯನ್ನು ನಡೆಸಿದ್ದ ಡಿಸಿಎಂ ಡಿಕೆ ಶಿವಕುಮಾರ್ ಅವರು ಬೆಂಗಳೂರಿನಲ್ಲಿ ಯಾರೂ ಫ್ಲೆಕ್ಸ್ ಹಾಕುವ ಹಾಗಿಲ್ಲ. ಇದರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದರು.**

ಪಕ್ಷದ ಬೆಂಗಳೂರು ನಗರ ಪ್ರಧಾನ ಕಾರ್ಯದರ್ಶಿ ಜಗದೀಶ್ ಚಂದ್ರ, ಸುದ್ದಿಗಾರರೊಂದಿಗೆ ಮಾತನಾಡುತ್ತಾ ನೂತನ ಜಾಹೀರಾತು ನೀತಿಯ ಅನುಸಾರ ಇದುವರೆಗೂ ಉಲ್ಲಂಘಿಸಿದ ವ್ಯಕ್ತಿಗಳ ವಿರುದ್ಧ ನೂರಾರು ಕೋಟಿ ರೂಪಾಯಿಗಳ ದಂಡವನ್ನು ವಸೂಲಿ ಮಾಡಬಹುದಾಗಿತ್ತು. ಬೆಂಗಳೂರಿನ ಸೌಂದರ್ಯವನ್ನು ಸಹ ಕಾಪಾಡಬಹುದಾಗಿತ್ತು. ಆದರೆ ಈ ರೀತಿಯ ಯಾವುದೇ ಕಠಿಣ ಕ್ರಮಗಳನ್ನು ಬಿಬಿಎಂಪಿ ಇಂಜಿನಿಯರ್ಗಳು ತೆಗೆದುಕೊಂಡಿಲ್ಲ. ಇದರಿಂದಾಗಿ ಮಹಾನಗರ ಪಾಲಿಕೆಗೆ ನೂರಾರು ಕೋಟಿಗಳ ನಷ್ಟ ಉಂಟು ಮಾಡಿದ್ದಾರೆ ಎಂದು ತಿಳಿಸಿದ್ದಾರೆ.

**50 ಸಾವಿರ ದಂಡದ ಎಚ್ಚರಿಕೆ ಕೊಟ್ಟಿದ್ದ ಡಿಕೆಶಿ**



**ಬೆಂಗಳೂರು ನಗರದಲ್ಲಿ ಯಾರಾದರೂ ಫ್ಲೆಕ್ಸ್ ಹಾಕಿದರೆ 50,000 ದಂಡ ಹಾಕಲು ನ್ಯಾಯಾಲಯದ ಆದೇಶ ಈಗಾಗಲೇ ಇದೆ ಎಂದು ಡಿಕೆ ಶಿವಕುಮಾರ್ ತಿಳಿಸಿದ್ದರು. ಸಿಎಂ ಆಗಲಿ ನನ್ನದೇ ಆಗಲಿ ಯಾವುದೇ ಫ್ಲೆಕ್ಸ್ ಹಾಕುವ ಹಾಗಿಲ್ಲ. ಸರ್ಕಾರ ಕಾರ್ಯಕ್ರಮದ ಬಗ್ಗೆ ಏನಾದರೂ ಫ್ಲೆಕ್ಸ್ ಹಾಕಬೇಕಾದಲ್ಲಿ ಅದಕ್ಕೆ ಅನುಮತಿ ಪಡೆದುಕೊಳ್ಳುತ್ತೇವೆ ಎಂದಿದ್ದರು. ಆದರೆ ಅವರ ಪಕ್ಷದ ಶಾಸಕರೇ ನಗರದ ಹಲವು ಕಡೆಗಳಲ್ಲಿ ಫ್ಲೆಕ್ಸ್ ಹಾಕುತ್ತಿದ್ದಾರೆ. ಆದರೆ ಇದರ ಬಗ್ಗೆ ಯಾರೂ ಪ್ರಶ್ನೆ ಮಾಡುತ್ತಿಲ್ಲ.**

# ರಾಜ್ಯದಲ್ಲಿ 92 ಪಾಕ್ ಪ್ರಜೆಗಳು, ಬೆಂಗಳೂರಲ್ಲಿ ನಾಲ್ವರು

• ಉದಯವಾಹಿನಿ, ಬೆಂಗಳೂರು

ಅಧಿಕೃತವಾಗಿ ರಾಜ್ಯದಲ್ಲಿ 92 ಪಾಕ್ ಪ್ರಜೆಗಳು ವಾಸವಾಗಿರುವುದು ದೃಢಪಟ್ಟಿದ್ದು, ಅವರಲ್ಲಿ ಕೆಲವರು ಇನ್ನೆರಡು ದಿನಗಳಲ್ಲಿ ದೇಶ ತೊರೆಯಬೇಕಾಗಿದೆ. ನಗರದಲ್ಲಿ ನಾಲ್ಕು ಮಂದಿ ಪಾಕ್ ವಲಸಿಗರಿದ್ದು ರಾಜ್ಯದ ಇತರ ಭಾಗಗಳಲ್ಲಿ ಒಟ್ಟು 88 ಮಂದಿ ಇದ್ದಾರೆ. ಇವರಲ್ಲಿ 88 ಮಂದಿ ಲಾಂಗ್ ಟರ್ಮ್, ಉಳಿದವರು ಶಾರ್ಟ್ ಟರ್ಮ್ ವೀಸಾ ಪಡೆದುಕೊಂಡಿದ್ದಾರೆ. ಶಾರ್ಟ್‌ಟರ್ಮ್ ವೀಸಾ ಪಡೆದಿರುವ ಪಾಕ್ ವಲಸಿಗರು ದೇಶ ತೊರೆಯಲೇಬೇಕಾಗಿರುವುದರಿಂದ ಬೇರೆ ಬೇರೆ ವೀಸಾದಲ್ಲಿ ರಾಜ್ಯಕ್ಕೆ ಬಂದಿರುವ ಪಾಕ್ ವಲಸಿಗರು ನಾಳೆಯೊಳಗೆ ದೇಶ ತೊರೆಯಬೇಕಾಗಿದೆ. ಇನ್ನು ಮೆಡಿಕಲ್ ವೀಸಾದಲ್ಲಿ ಬಂದಿರುವವರು ಏ.27 ರಂದು ದೇಶ ಬಿಡಬೇಕಾಗಿದೆ. ಒಟ್ಟಾರೆ ರಾಜ್ಯದಲ್ಲಿರುವ 92 ಪಾಕ್ ಪ್ರಜೆಗಳು ಪಾಸ್‌ಪೋರ್ಟ್ ಹೊಂದಿದ್ದು ಅಧಿಕೃತವಾಗಿ ರಾಜ್ಯದಲ್ಲಿ ನೆಲೆಸಿರುವುದು ಪತ್ತೆಯಾಗಿದೆ.

ಪಾಕ್ ವಲಸಿಗರಿಗೆ ಈಗಾಗಲೇ ನೋಟೀಸ್ ಜಾರಿ ಮಾಡಿದ್ದು, ನಿಗದಿತ ಅವಧಿಯೊಳಗೆ ದೇಶ ತೊರೆದು ಹೋಗುವಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಅದೇ ರೀತಿ ನಗರದ ವಿವಿಧ ಭಾಗಗಳಲ್ಲಿರುವ ನಾಲ್ವರು ಪಾಕ್ ವಲಸಿಗರಿಗೂ ನೋಟೀಸ್ ಜಾರಿ ಮಾಡಲಾಗಿದೆ. ಈಗ ಪತ್ತೆಯಾಗಿರುವ 92 ಮಂದಿಯೂ ಅಧಿಕೃತ





ವಲಸೆಗಾರರಾಗಿದ್ದಾರೆ. ಆದರೆ, ಅಕ್ರಮವಾಗಿ ರಾಜ್ಯದಲ್ಲಿ ಬೀಡುಬಿಟ್ಟಿರುವ ಅಕ್ರಮ ವಲಸಿಗರ ಸಂಖ್ಯೆ ಇನ್ನು ದೃಢಪಟ್ಟಿಲ್ಲ, ಮುಂದಿನ ದಿನಗಳಲ್ಲಿ ಅವರನ್ನು ಪತ್ತೆ ಹಚ್ಚಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಪೊಲೀಸ್ ಮೂಲಗಳು ಮಾಹಿತಿ ನೀಡಿವೆ.

ರಾಜ್ಯದ ಕೆಲವು ಮುಸ್ಲಿಂ ಕುಟುಂಬಗಳು ಹಲವು ವರ್ಷಗಳಿಂದ ಪಾಕಿಸ್ತಾನದ ಕುಟುಂಬಗಳ ಜತೆ ವೈವಾಹಿಕ ಸಂಬಂಧ ಹೊಂದಿವೆ. ಹೀಗಾಗಿ ರಾಜ್ಯದಲ್ಲಿನ 88 ಮಂದಿ ಪಾಕ್ ಪ್ರಜೆಗಳಿಗೆ ವೈವಾಹಿಕ ಸಂಬಂಧ ಇದೆ. ಇವರುಗಳು ಲಾಂಗ್ ಟರ್ಮ್ ವೀಸಾಗಳನ್ನು ಪಡೆದಿದ್ದಾರೆಂದು ತಿಳಿದುಬಂದಿದೆ.

ಕಾರಣವೇನು? ಮಿನಿ ಸ್ವಿಜರ್‌ಲ್ಯಾಂಡ್ ಖ್ಯಾತಿಯ ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರು 26 ಮಂದಿ ಅಮಾಯಕ ಹಿಂದೂ ಪ್ರವಾಸಿಗರನ್ನು ಗುಂಡಿಟ್ಟು ಕೊಂದ ಘಟನೆಯ ನಂತರ ನೆರೆಯ ಪಾಕಿಸ್ತಾನದ ವಿರುದ್ಧ ಕೇಂದ್ರ ಸರ್ಕಾರ ಕೆಲ ನಿರ್ಬಂಧಗಳನ್ನು ವಿಧಿಸಿದೆ.

**ಶೈಕ್ಷಣಿಕ ವೀಸಾ ಮೇಲೆ ಬಂದಿರುವ ಪಾಕ್ ವಿದ್ಯಾರ್ಥಿಯೊಬ್ಬರು ದಾವಣಗೆರೆ ಜಿಲ್ಲೆಯ ಮೆಡಿಕಲ್ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ. ನಗರದ ಬಸವನಗುಡಿ, ಮೈಸೂರು, ಮಂಗಳೂರು, ಭಟ್ಕಳ ಸೇರಿದಂತೆ ರಾಜ್ಯದ ವಿವಿಧ ಕಡೆ ಈ 88 ಮಂದಿ ವಾಸವಾಗಿದ್ದಾರೆ ಎಂದು ಮೂಲಗಳು ತಿಳಿಸಿವೆ. ಉತ್ತರ ಕನ್ನಡ ಜಿಲ್ಲೆಯಲ್ಲಿ 15 ಪಾಕಿಸ್ತಾನಿಗಳಿದ್ದು, ಅವರಲ್ಲಿ ಕೆಲವು ಪಾಕ್ ಮಹಿಳೆಯರು ಸ್ಥಳೀಯ ಯುವಕರನ್ನು ವಿವಾಹವಾಗಿದ್ದಾರೆ. ಅವರಿಗೆ ಮಕ್ಕಳು ಇರುವುದರಿಂದ ಕೇಂದ್ರ ಸರ್ಕಾರ ಹೊರಡಿಸಿರುವ ಆದೇಶ ಇಲ್ಲಿನ ಪಾಕ್ ಪ್ರಜೆಗಳಿಗೆ ಅನ್ವಯ ವಾಗುವುದಿಲ್ಲ**


**-ಎಂ.ನಾರಾಯಣ, ಎಸ್‌ಪಿ**

ಅದರಲ್ಲಿ ದೇಶದಲ್ಲಿ ನೆಲೆಸಿರುವ ಎಲ್ಲಾ ರೀತಿಯ ಪಾಕ್ ಪ್ರಜೆಗಳೂ ಕೂಡಲೇ ದೇಶ ಬಿಟ್ಟು ಹೋಗುವಂತೆ ಸೂಚನೆ ನೀಡಲಾಗಿದೆ. ಅದೇ ರೀತಿ ದೇಶದ ಎಲ್ಲಾ ರಾಜ್ಯಗಳು ಕೇಂದ್ರ ಸರ್ಕಾರದ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಆದೇಶಿಸಿರುವುದರಿಂದ ಆಯಾ ರಾಜ್ಯಗಳಲ್ಲಿ ನೆಲೆಸಿರುವ ಪಾಕ್ ಪ್ರಜೆಗಳಿಗೆ ದೇಶ ತೊರೆಯುವಂತೆ ನೋಟೀಸ್ ನೀಡಲಾಗುತ್ತಿದೆ.

# ಜಾತಿಗಣತಿ ವರದಿಯಲ್ಲಿ ಗೊಂದಲಗಳಿದ್ದು, ಮರು ಸಮೀಕ್ಷೆ ನಡೆಸಿ: ರಾಜ್ಯ ಸರ್ಕಾರಕ್ಕೆ ಸೋಮಣ್ಣ ಆಗ್ರಹ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಜಾತಿಗಣತಿ ವರದಿಯಲ್ಲಿ ಗೊಂದಲ ಸೃಷ್ಟಿಯಾಗಿದ್ದು, ಮತ್ತೊಮ್ಮೆ ಸಮೀಕ್ಷೆ ನಡೆಸುವಂತೆ ರಾಜ್ಯ ಸರ್ಕಾರಕ್ಕೆ ಕೇಂದ್ರ ಸಚಿವ ವಿ. ಸೋಮಣ್ಣ ಅವರು ಒತ್ತಾಯಿಸಿದ್ದಾರೆ. ಇಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಾಮಾಜಿಕ-ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆ ವರದಿಯನ್ನು ಪಾರದರ್ಶಕವಾಗಿ ಮಾಡಲಾಗಿಲ್ಲ. ಆದರೂ ರಾಜ್ಯ ಸರ್ಕಾರ ಈ ವರದಿಯ ಮೂಲಕ ಜನರ ಭಾವನೆಗಳೊಂದಿಗೆ ಆಟವಾಡುತ್ತಿದೆ ಎಂದು ಕಿಡಿಕಾರಿದರು. ಹಿಂದುಳಿದ ವರ್ಗಗಳ ಆಯೋಗದ ಆಗಿನ ಅಧ್ಯಕ್ಷ ಎಚ್. ಕಾಂತರಾಜು ವರದಿಗೆ ಸಹಿ ಹಾಕದಿದ್ದರೂ, ಪ್ರಸ್ತುತ ವರದಿಯು ಕಾಂತರಾಜು ಆಯೋಗದ ವರದಿಯಂತೆಯೇ ಇದೆ. ಹೀಗಾಗಿ ಹೊಸ ಸಮೀಕ್ಷೆಯ ಅವಶ್ಯಕತೆಯಿದ್ದು, ಸಿದ್ದರಾಮಯ್ಯ ಅವರು ವೈಜ್ಞಾನಿಕವಾಗಿ ಸಮೀಕ್ಷೆ



ನಡೆಸಬೇಕೆಂದು ಆಗ್ರಹಿಸಿದರು. ಬೆಂಗಳೂರಿಗೆ ಎರಡನೇ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಕುರಿತ ಪ್ರಶ್ನೆಗೆ ಉತ್ತರಿಸಿ, ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿಯೂ ಮೂರು ಟರ್ಮಿನಲ್‌ಗಳಿರುವ ಒಂದು ವಿಮಾನ ನಿಲ್ದಾಣವಿದೆ. ಎಲ್ಲಾ ಟರ್ಮಿನಲ್‌ಗಳು ಒಂದೇ ಸ್ಥಳದಲ್ಲಿದ್ದರೆ, ಪ್ರಯಾಣಿಕರಿಗೆ ಸಹಾಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು. ಏತನ್ಮಧ್ಯೆ, ಯಶವಂತಪುರ, ಕಂಟೋನ್ಮೆಂಟ್ ರೈಲು ನಿಲ್ದಾಣಗಳನ್ನು ಪುನರಾಭಿವೃದ್ಧಿ ಮಾಡಲಾಗುತ್ತಿದೆ. ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಬಳಿ ಒಂದು ಸೇರಿದಂತೆ ಬೆಂಗಳೂರಿನಲ್ಲಿ ನಾಲ್ಕು ದಿಕ್ಕುಗಳಲ್ಲಿ ನಾಲ್ಕು ರೈಲ್ವೆ ಟರ್ಮಿನಲ್‌ಗಳ ಅಗತ್ಯವಿದೆ. ಕೇಂದ್ರ ಸರ್ಕಾರ ಈ ಬಗ್ಗೆ ಚಿಂತನೆ ನಡೆಸಲಿದೆ. ತೆಲಂಗಾಣ, ಉತ್ತರ ಪ್ರದೇಶ, ಮಧ್ಯಪ್ರದೇಶ, ಜಮ್ಮು ಮತ್ತು ಕಾಶ್ಮೀರ ಮತ್ತು ಇತರ ರಾಜ್ಯಗಳ ವಿಮಾನ ನಿಲ್ದಾಣಗಳ ಬಳಿ ಟರ್ಮಿನಲ್‌ಗಳನ್ನು ನಿರ್ಮಿಸಿದ್ದೇವೆ. ಬೆಂಗಳೂರಿನಲ್ಲಿ ಜನಸಂಖ್ಯೆ ಹೆಚ್ಚುತ್ತಿದ್ದು, ಜೆ.ಎಚ್. ಪಟೇಲ್ ಮುಖ್ಯಮಂತ್ರಿಯಾಗಿದ್ದಾಗ, ನಾವು ಮೆಟ್ರೋವನ್ನು ಪ್ರಾರಂಭಿಸಿದ್ದೆವು. ಇಂದು ಬೆಂಗಳೂರಿನಲ್ಲಿ ಲಕ್ಷಾಂತರ ಜನರು ಸೇವೆಯನ್ನು ಬಳಸುತ್ತಿದ್ದಾರೆಂದು ತಿಳಿಸಿದರು.

# ಉಪಗ್ರಹ ಆಧಾರಿತ ಟೋಲ್ ಸಂಗ್ರಹಣೆ ಇನ್ನೂ ಕೆಲವು ವರ್ಷ ವಿಳಂಬ

• ಉದಯವಾಹಿನಿ, ಬೆಂಗಳೂರು

ಗ್ಲೋಬಲ್ ನ್ಯಾವಿಗೇಷನ್ ಸ್ಯಾಟಲೈಟ್ ಸಿಸ್ಟಮ್ ಆಧಾರಿತ ಎಲೆಕ್ಟ್ರಾನಿಕ್ ಟೋಲ್ ಸಂಗ್ರಹ ವ್ಯವಸ್ಥೆಯನ್ನು ಶೀಘ್ರದಲ್ಲೇ ಜಾರಿಗೆ ತರಲಾಗದು ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ತಿಳಿಸಿದ್ದಾರೆ. ಈ ನಿಟ್ಟಿನಲ್ಲಿ ಪ್ರಾಯೋಗಿಕ ಅಧ್ಯಯನದ ಭಾಗವಾಗಿದ್ದ ಅಧಿಕಾರಿಗಳು, ಅನೇಕ ವಾಹನಗಳಲ್ಲಿ ಆನ್-ಬೋರ್ಡ್ ಘಟಕಗಳು, ಇಲ್ಲದಿರುವುದು ಮತ್ತು ಅವುಗಳ ನಿಖರವಾದ ಸ್ಥಳವನ್ನು ಹಂಚಿಕೊಳ್ಳುವ ಬಗ್ಗೆ ಕಾಳಜಿಗಳು ಈ ನಿರ್ಧಾರಕ್ಕೆ ಕಾರಣಗಳಾಗಿವೆ ಎಂದು ಹೇಳಿದರು. ಉಪಗ್ರಹ ಆಧಾರಿತ ಟೋಲ್ ಸಂಗ್ರಹ ವ್ಯವಸ್ಥೆಯನ್ನು ಪ್ರಾರಂಭಿಸಲು ಕೆಲವು ವರ್ಷಗಳು ತೆಗೆದುಕೊಳ್ಳಬಹುದು ಎಂದಿದ್ದಾರೆ.

ಫಾಸ್ಟ್‌ಟ್ಯಾಗ್ ಸೌಲಭ್ಯದೊಂದಿಗೆ ಪ್ರಾಯೋಗಿಕ ಅಧ್ಯಯನಕ್ಕಾಗಿ ಕಳೆದ ವರ್ಷ ಬೆಂಗಳೂರು-ಮೈಸೂರು ಪ್ರವೇಶ ನಿಯಂತ್ರಿತ ಹೆದ್ದಾರಿ ಮತ್ತು ಹರಿಯಾಣದ ಪಾಣಿಪತ್-ಹಿಸಾರ್ ಹೆದ್ದಾರಿಯನ್ನು ಆಯ್ಕೆ

☛ ಉದಯವಾಹಿನಿ ಚಿತ್ರ



ಮಾಡಿದ್ದೇವೆ ಎಂದು ಎನ್‌ಎಚ್‌ಎಐ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಅಸ್ತಿತ್ವದಲ್ಲಿರುವ ಟೋಲ್ ಸಂಗ್ರಹ ಸೌಲಭ್ಯಕ್ಕೆ ಹೋಲಿಸಿದರೆ, GNSS-ಆಧಾರಿತ ವ್ಯವಸ್ಥೆಯು ಪ್ರಯಾಣಿಸಿದ ದೂರವನ್ನು ಆಧರಿಸಿ ಶುಲ್ಕವನ್ನು ಮಾತ್ರ ಸಂಗ್ರಹಿಸುತ್ತದೆ. ವಾಹನಗಳು ಹೆದ್ದಾರಿಯ ಜಿಯೋ-ಬೇಲಿಯನ್ನು ಪ್ರವೇಶಿಸಿದಾಗ ಮತ್ತು ನಿರ್ಗಮಿಸುವಾಗ ಆನ್ ಬೋರ್ಡ್ ಘಟಕಗಳು ಸಂದೇಶಗಳನ್ನು ಕಳುಹಿಸುತ್ತವೆ. ಪ್ರಯಾಣದ ದೂರವನ್ನು ಆಧರಿಸಿ, ಟೋಲ್ ಕಡಿತಗೊಳಿಸಲಾಗುತ್ತದೆ, ಸಂಗ್ರಹಿಸಲಾಗುತ್ತದೆ. ಬೆಂಗಳೂರು-ಮೈಸೂರು ಹೆದ್ದಾರಿಯ ಒಂದು ಭಾಗವನ್ನು ಅಧ್ಯಯನಕ್ಕಾಗಿ ಆಯ್ಕೆ ಮಾಡ ಲಾಗಿದೆ, ಭೂ-ಬೇಲಿ ಹಾಕಲಾಗಿದೆ. ಕಳೆದ ವರ್ಷ ಅಧ್ಯಯನ ನಡೆಸಿದ ನಂತರ ಎನ್‌ಎಚ್‌ಎಐ ಅಧಿಕಾರಿಗಳಿಗೆ ವರದಿ ಸಲ್ಲಿಸಲಾಗಿದೆ ಎಂದು ಹೇಳಿದರು. ಕೆಲವು ವಾಹನಗಳು ಮಾತ್ರ ಒಬಿಯುಗಳನ್ನು ಹೊಂದಿರುವ ಕಾರಣ ಯೋಜನೆಯನ್ನು ಶೀಘ್ರದಲ್ಲೇ ಕಾರ್ಯಗತಗೊಳಿಸಲು ಸಾಧ್ಯವಿಲ್ಲ ಎಂದು ಅವರು ಹೇಳಿದರು. ಆಯ್ದ ಟೋಲ್ ಬೂತ್‌ಗಳಲ್ಲಿ ಎನ್‌ಎಚ್‌ಎಐ ಶೀಘ್ರದಲ್ಲೇ ಸ್ವಯಂಚಾಲಿತ ನಂಬರ್ ಪ್ಲೇಟ್ ರೆಕಗ್ನಿಷನ್ ಆಧಾರಿತ ತಡೆರಹಿತ ಟೋಲಿಂಗ್ ವ್ಯವಸ್ಥೆಯನ್ನು ಪರಿಚಯಿಸಲಿದೆ ಎಂದು ಅವರು ಹೇಳಿದರು. ಆದ್ದರಿಂದ ಫಾಸ್ಟ್ಯಾಗ್ ಆಧಾರಿತ ಟೋಲ್ ಸಂಗ್ರಹವು ಮುಂದುವರಿಯುತ್ತದೆ ಎಂದು ಅಧಿಕಾರಿ ಹೇಳಿದರು. NHAI ಶೀಘ್ರದಲ್ಲೇ ದೇಶಾದ್ಯಂತ ಆಯ್ದ ಟೋಲ್ ಬೂತ್‌ಗಳಲ್ಲಿ ಸ್ವಯಂಚಾಲಿತ ನಂಬರ್ ಪ್ಲೇಟ್ ರೆಕಗ್ನಿಷನ್ (NHAI) ಆಧಾರಿತ ತಡೆರಹಿತ ಟೋಲಿಂಗ್ ವ್ಯವಸ್ಥೆಯನ್ನು ಪರಿಚಯಿಸಲಿದೆ ಎಂದು ಅವರು ಹೇಳಿದರು.

ಈ ವ್ಯವಸ್ಥೆಯ ಅಡಿಯಲ್ಲಿ, ವಾಹನದ ಪ್ರವೇಶ, ನಿರ್ಗಮನವನ್ನು ಪತ್ತೆಹಚ್ಚಲು ಕ್ಯಾಮೆರಾಗಳು ಇರುತ್ತವೆ. ಇಲ್ಲಿ, ವಾಹನದ ನಂಬರ್ ಪ್ಲೇಟ್ ಅನ್ನು ಹೈರೆಸಲ್ಯೂಶನ್ ಕ್ಯಾಮೆರಾಗಳು, ರೀಡರ್‌ಗಳು ಸ್ಕ್ಯಾನ್ ಮಾಡುತ್ತವೆ. ಇದು ಟೋಲ್ ಪ್ಲಾಜಾಗಳಲ್ಲಿ ವಾಹನಗಳನ್ನು ನಿಲ್ಲಿಸುವುದನ್ನು ತಪ್ಪಿಸುತ್ತದೆ, ಅವರು ಹೇಳಿದರು.

# ದೇಶಕ್ಕೇನಾದರೂ ಪರವಾಗಿಲ್ಲ, ವೋಟ್ ಬಿದ್ದರೆ ಸಾಕು ಅನ್ನೋ ಮನಸ್ಥಿತಿಯಲ್ಲಿದ್ದಾರೆ ಸಿಎಂ: ಆರ್.ಅಶೋಕ್

• ಉದಯವಾಹಿನಿ,ಬೆಂಗಳೂರು



ಸಿದ್ಧಾಂತವೇ ಇಲ್ಲದ ಸಿದ್ದರಾಮಯ್ಯ ಇಂದು ನಮ್ಮ ಮುಂದೆ ಇದ್ದಾರೆ, ದೇಶಕ್ಕೆ ಏನಾದರೂ ಪರವಾಗಿಲ್ಲ, ಮತ ಬಿದ್ದರೆ ಸಾಕು ಎಂಬ ಮನಸ್ಥಿತಿಗೆ ಸಿಎಂ ಬಂದಿದ್ದಾರೆ ಎಂದು ವಿಪಕ್ಷ ನಾಯಕ ಆರ್.ಅಶೋಕ್ ಕಿಡಿಕಾರಿದ್ದಾರೆ. ವಿಧಾನಸಭೆಯಲ್ಲಿ ಪಹಲ್ಗಾಮ್ ಉಗ್ರರ ದಾಳಿ ಪ್ರಕರಣದಲ್ಲಿ ಯುದ್ಧದ ಅನಿವಾರ್ಯತೆ ಇಲ್ಲವೆಂಬ ಸಿಎಂ ಹೇಳಿಕೆ ವಿಚಾರವಾಗಿ ಮಾತನಾಡಿದ ಅವರು, ಸಿದ್ದರಾಮಯ್ಯ ಮಾನಸಿಕ ಸ್ಥಿತಿ ಪೂರ್ತಿ ಮುಸ್ಲಿಮರ ಮತದ ಬಗ್ಗೆಯೇ ಯೋಚಿಸುವ ರೀತಿ ಆಗಿರುವುದು ದುರದೃಷ್ಟಕರ. ಹಾಗಾದರೆ ಸತ್ತಿರುವವರ ಪ್ರಾಣಕ್ಕೆ ಬೆಲೆಯೇ ಇಲ್ಲವೇ? ಹಮಾಸ್ ಉಗ್ರರು ಬಂದು ತರಬೇತಿ ನೀಡಿ ಕಳುಹಿಸಿದ್ದರು ಎಂಬುದು ಮಾಹಿತಿಗಳ ಮೂಲಕ ಹೊಂದಾಣಿಕೆ ಆಗುತ್ತಿದೆ. ಅದನ್ನು ಸಿದ್ದರಾಮಯ್ಯ ಅವರು ಮಾತ್ರ ಕ್ಷಮಿಸಬಹುದಷ್ಟೇ. ದೇಶಕ್ಕೆ ಏನು ಆದರೂ ಪರವಾಗಿಲ್ಲ, ತಮಗೆ ಮತ ಬಿದ್ದರೆ ಸಾಕು ಎಂಬ ಮನಸ್ಥಿತಿಗೆ ಬಂದಿದ್ದಾರೆ. ಸಿದ್ಧಾಂತವೇ ಇಲ್ಲದ ಸಿದ್ದರಾಮಯ್ಯ ಇಂದು ನಮ್ಮ ಮುಂದೆ ಇದ್ದಾರೆ ಎಂದು ಕಿಡಿಕಾರಿದರು. ನಿಮ್ಮ ಮನೆಯಲ್ಲಿ ಈ ರೀತಿ ಉಗ್ರರು ಬಂದು ಹೊಡೆದು ಹಾಕಿರುತ್ತಿದ್ದರೆ ಈ ರೀತಿ ಹೇಳುತ್ತಿದ್ದರಾ ಹಾಗಾದರೆ ಸತ್ತವರ ಮನೆ ಬಾಗಿಲಿಗೆ ಹಾರ ಹಾಕಲು ಯಾಕೆ ಹೋಗಿದ್ರಿ, ಇಲ್ಲಿ ಬಂದು ಸತ್ತವರು ಸತ್ತರು ಎನ್ನುವುದು ನಾಚಿಕೆಗೇಡಿನ ಸಂಗತಿ. ಮಲ್ಲಿಕಾರ್ಜುನ ಖರ್ಗೆ ಎಲ್ಲರೂ ಒಟ್ಟಾಗಿ ಹೋರಾಡೋಣ ಎಂದಿದ್ದಾರೆ. ಇಲ್ಲಿ ಸಿದ್ದರಾಮಯ್ಯ ಮನೆ ಮುರಿಯುವ ಮಾತಾಡಿದ್ದಾರೆ. ಯಾವುದೇ ಪಾಕಿಸ್ತಾನಿ ಭಾರತದಲ್ಲಿ ಇರಬಾರದು ಎಂದು ಕೇಂದ್ರ ಸರ್ಕಾರ ಸೂಚನೆ ಕೊಟ್ಟಿದೆ.


ಭಟ್ಕಳದಲ್ಲಿ 10ಕ್ಕಿಂತ ಹೆಚ್ಚು ಪಾಕಿಸ್ತಾನದವರು ಇದ್ದಾರೆ. ಆದರೆ ಪಾಕಿಸ್ತಾನದಲ್ಲಿ ಈಗಾಗಲೇ ಭಾರತೀಯರನ್ನು ಹೊರ ಹಾಕಿದ್ದಾರೆ. ಇದರ ಬಗ್ಗೆ ಸಿದ್ದರಾಮಯ್ಯ ಯಾಕೆ ಮಾತನಾಡುತ್ತಿಲ್ಲ. ಕೂಡಲೇ ಭಟ್ಕಳ ದಲ್ಲಿರುವ ಪಾಕಿಸ್ತಾನದವರನ್ನು ಒದ್ದು ಹೊರ ಹಾಕಬೇಕು. ಮೀರ್ ಸಾಧಿಕ್‌ನಂತವರು ನಮ್ಮಲ್ಲೇ ಇದ್ದಾರೆ ಎಂದು ಆರೋಪಿಸಿದರು.

# ಸಂಪ್ರದಾಯ ಮುರಿದು ಸಂಭ್ರಮಾಚರಣೆಗೆ ಸಿದ್ದು ಬ್ರೇಕ್

• ಉದಯವಾಹಿನಿ, ಬೆಂಗಳೂರು

**ಕಾಂಗ್ರೆಸ್ ಸರ್ಕಾರಕ್ಕೆ 2 ವರ್ಷ**

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಮೇ 21-22ಕ್ಕೆ ಎರಡು ವರ್ಷ ಪೂರೈಸುತ್ತಿದೆ. ಇದ್ ವೇಳೆ, ಯಾವುದೇ ಅದ್ದೂರಿ ಆಚರಣೆಗಳು, ಅಭಿನಂದನಾ ಕಾರ್ಯಕ್ರಮಗಳು ಇರುವುದಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಸ್ಪಷ್ಟಪ ಡಿಸಿದ್ದಾರೆ. ಬದಲಾಗಿ, ಅವರು ಎರಡು ದಿನಗಳ ಕಾಲ ಆಡಳಿತ ಯಂತ್ರಕ್ಕೆ ಚುರುಕು ಮುಟ್ಟಿಸಲು ಅಧಿಕಾರಿಗಳ ಜೊತೆ ಮ್ಯಾರಥಾನ್ ಸಭೆ ನಡೆಸಲಿ ದ್ದಾರೆ. ಹಿಂದಿನ ಸಂಪ್ರದಾಯವನ್ನು ಮುರಿದಿ ರುವ ಸಿದ್ದರಾಮಯ್ಯ ಅವರು ಮೇ 21, 22ಕ್ಕೆ ಯಾವುದೇ ಸಂಭ್ರಮಾ ಚರಣೆಮಾಡದೆ, ಸಂಪೂರ್ಣವಾಗಿ ಆಡಳಿತವನ್ನು ಸುಗಮಗೊಳಿಸುವತ್ತ ಗಮನಹರಿಸಿದ್ದಾರೆ. ಡಿಸಿಎಂ ಡಿಕೆ ಶಿವಕುಮಾರ್, ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಮತ್ತು ಉನ್ನತ ಅಧಿಕಾರಿಗಳು, ಎಲ್ಲಾ ಜಿಲ್ಲಾಧಿಕಾರಿಗಳು ಜಿಲ್ಲಾ ಪಂಚಾಯತ್ ಸಿಇಒಗಳೊಂದಿಗೆ ಜಿಲ್ಲಾ ಮಟ್ಟದ ಆಡಳಿತವನ್ನು ಬಿಗಿಗೊಳಿಸಲು ಮತ್ತು ಸಾರ್ವಜನಿಕ ಸೇವೆಗಳ ವಿತರಣೆಯನ್ನು ವೇಗಗೊಳಿಸಲು ಸಿದ್ದರಾಮಯ್ಯ ಮ್ಯಾರಥಾನ್ ಪರಿಶೀಲನೆ ನಡೆಸಲಿದ್ದಾರೆ. ಸರ್ಕಾರಗಳು 2 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಸಂಭ್ರಮಾಚರಣೆ ನಡೆಸುವುದು ವಾಡಿಕೆಯಾಗಿತ್ತು, ಆದರೆ ಇಂತಹ ಸಂಭ್ರಮಾಚರಣೆಗಳು ರಾಜಕೀಯ ದುರಾದೃಷ್ಟಕ್ಕೆ ಕಾರಣವಾದ ಹಿನ್ನೆಲೆಯಲ್ಲಿ ಸಿದ್ದರಾಮಯ್ಯ ಎಚ್ಚರದಿಂದ ಹೆಜ್ಜೆ ಇಡುತ್ತಿದ್ದಾರೆ. ಮಾಜಿ ಸಿಎಂ ಎಸ್ ಬಂಗಾ ರಪ್ಪ ಅವರ ಎರಡು ವರ್ಷದ ಸಂಭ್ರಮದ ಸಾಧನೆಯ



ಹಾದಿಯಲ್ಲಿ ಸಂಭ್ರಮಾಚರಣೆಯ ನಂತರ ಅವರು ಸಿಎಂ ಹುದ್ದೆಯಿಂದ ನಿರ್ಗಮಿಸಿದರು, ಅದಾದ ನಂತರ ಬಿಎಸ್ ಯಡಿಯೂರಪ್ಪ ಅವರು ತಮ್ಮ ಸರ್ಕಾ ರದ ಎರಡನೇ ವಾರ್ಷಿಕೋತ್ಸವದ ದಿನದ ಸಂಜೆ ಕಣ್ಣೀರು ಹಾಕುತ್ತಾ ರಾಜೀನಾಮೆ ನೀಡಬೇಕಾಯಿತು ಎಂಬುದನ್ನು ರಾಜಕೀಯ ವೀಕ್ಷಕರು ನೆನಪಿಸಿಕೊಳ್ಳುತ್ತಾರೆ. ಆದರೆ ಸಿದ್ದರಾಮಯ್ಯ ಅವರಿಗೆ ವಿಧಿಯ ಜೊತೆ ಆಟವಾಡುವ ಮೂಡ್ ಇಲ್ಲ ಎಂದು ಹೇಳಲಾಗುತ್ತಿದೆ. ಆಚರಣೆಗೆ ಸಮಯವಿಲ್ಲ. ಜನರು ಶೀಘ್ರವಾಗಿ ಕೆಲಸ ಮಾಡುವುದುನ್ನು ಬಯಸುತ್ತಾರೆಯೇ ಹೊರತು, ನಾಟಕವಲ್ಲ ಎಂದು ಅವರು ತಮ್ಮ ತಂಡಕ್ಕೆ ತಿಳಿಸಿದ್ದಾರೆ ಎಂದು ವರದಿ ಯಾಗಿದೆ. ಅವರ ಸಂದೇಶ ಸ್ಪಷ್ಟವಾಗಿದೆ ಇದು ಕೆಲಸ ಮಾಡುವ ಸಮಯ, ಸಂಭ್ರಮಾಚರಣೆಗಲ್ಲ ಎಂದು ಸ್ಪಷ್ಟ ಸಂದೇಶ ರವಾನಿಸಿದ್ದಾರೆ. ಡಿಸೆಂಬರ್‌ನಲ್ಲಿ ಡಿಸಿ, ಸಿಇಒಗಳೊಂದಿಗಿನ ಕೊನೆಯ ಸಭೆ ನಡೆದಿತ್ತು ಎಂದು ಸಿಎಂಒ ಮೂಲಗಳು ತಿಳಿಸಿವೆ.

# ಅಧಿಕಾರಿಗಳ ವಿರುದ್ಧ ಸರ್ಕಾರ ಈತನಕ ಯಾವುದೇ ಕ್ರಮ ಕೈಗೊಂಡಿಲ್ಲ

## ಜನಿವಾರ ಕತ್ತರಿಸಿ ತೆಗೆದ ಪ್ರಕರಣ: ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನೋಟಿಸ್

• ಉದಯವಾಹಿನಿ, ಬೆಂಗಳೂರು


ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕೆ ಅವಕಾಶ ಕಲ್ಪಿಸುವ 'ಸಾಮಾನ್ಯ ಪ್ರವೇಶ ಪರೀಕ್ಷೆ' (ಸಿಇಟಿ) ಬರೆಯುವ ಮುನ್ನ ವಿದ್ಯಾರ್ಥಿಗಳು ಧರಿಸಿದ್ದ ಜನಿವಾರವನ್ನು ಬಲವಂತವಾಗಿ ಕತ್ತರಿಸಿ ತೆಗೆಯಲಾಗಿದೆ ಎಂದು ಆಕ್ಷೇಪಿಸಲಾದ ಅರ್ಜಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ, ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ನೋಟಿಸ್ ಜಾರಿಗೊಳಿಸಲು ಹೈಕೋರ್ಟ್ ಆದೇಶಿಸಿದೆ. ಈ ಸಂಬಂಧ, ಅಖಿಲ ಕರ್ನಾಟಕ ಬ್ರಾಹ್ಮಣ ಮಹಾ ಸಭಾ ಅಧ್ಯಕ್ಷ ರಘುನಾಥ್ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ಎನ್.ವಿ. ಅಂಜಾರಿಯಾ ನೇತೃತ್ವದ ವಿಭಾಗೀಯ ನ್ಯಾಯಪೀಠ ಶನಿವಾರ ವಿಚಾರಣೆ ನಡೆಸಿತು.



ವಿಚಾರಣೆ ವೇಳೆ ಅರ್ಜಿದಾರರ ಪರ ಪದಾಂಕಿತ ಹಿರಿಯ ವಕೀಲ ಎಸ್. ಶ್ರೀರಂಗ ಅವರ ವಾದ ಆಲಿಸಿದ ನ್ಯಾಯಪೀಠ ಪ್ರತಿವಾದಿಗಳಾದ, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಪರೀಕ್ಷಾ ಪ್ರಾಧಿಕಾರದ (ಕೆಇಎ) ಕಾರ್ಯ ನಿರ್ವಾಹಕ ಅಧಿಕಾರಿಗೆ ನೋಟಿಸ್ ಜಾರಿಗೊಳಿಸಲು ಆದೇಶಿಸಿತು. ಪ್ರತಿವಾದಿಗಳು ಆಕ್ಷೇಪಣೆ ಸಲ್ಲಿಸುವಂತೆ ನಿರ್ದೇಶಿಸಿದ ನ್ಯಾಯಪೀಠ ವಿಚಾ ರಣೆಯನ್ನು ಜೂ. 9ಕ್ಕೆ ಮುಂದೂಡಿದೆ.

ವಿದ್ಯಾರ್ಥಿಗಳ ಜನಿವಾರವನ್ನು ಬಲವಂತವಾಗಿ ತೆಗೆಸಿದ ಪ್ರಕರಣಗಳು ಬೀದರ್, ಶಿವಮೊಗ್ಗ ಧಾರವಾಡ ಜಿಲ್ಲೆಯಲ್ಲಿ ನಡೆದಿವೆ ಎಂದು ವಿವರಿಸಲಾಗಿದೆ.

ಧಾರ್ಮಿಕ ವಿಧಿ ವಿಧಾನಗಳ ಮೂಲಕ ಶ್ರದ್ದೆ ಮತ್ತು ಭಕ್ತಿಯಿಂದ ಬ್ರಾಹ್ಮಣರು, ಕ್ಷತ್ರಿಯರು,



ವೈಶ್ಯರು ಧರಿಸುವ ಜನಿವಾರವನ್ನು (ಯಜ್ಞೋಪವೀತ) ಬಲವಂತವಾಗಿ ತೆಗೆಸಿರುವುದು ಅವರ ಧಾರ್ಮಿಕ ನಂಬಿಕೆಗಳಿಗೆ ಧಕ್ಕೆ ಉಂಟುಮಾಡಿದೆ. ಈ ಕೃತ್ಯವು ಸಂವಿಧಾನದ 21ಎ, 25, 29(2)ರ ಸ್ಪಷ್ಟ ಉಲ್ಲಂಘನೆಯಾಗಿದೆ. ಇಂತಹ ಸಂವಿಧಾನ ವಿರೋಧಿ ಕ್ರಮಕ್ಕೆ ಕೈಹಾಕಿದ ಅಧಿಕಾರಿಗಳ ವಿರುದ್ಧ ಸರ್ಕಾರ ಈತನಕ ಯಾವುದೇ ಕ್ರಮ ಕೈಗೊಂಡಿಲ್ಲ. ಅಂತೆಯೇ, ಇದರಿಂದ ವಿದ್ಯಾರ್ಥಿಗಳ ಶಿಕ್ಷಣದ ಹಕ್ಕಿಗೆ ವಂಚನೆಯಾಗಿದೆ ಎಂದು ಆಕ್ಷೇಪಿಸಲಾಗಿದೆ.

**ಕೋರಿಕೆ:** ಯಾರು ಪರೀಕ್ಷೆಯಿಂದ ವಂಚಿತರಾಗಿದ್ದಾರೋ ಅಂತಹ ವಿದ್ಯಾರ್ಥಿಗಳಿಗಾಗಿ ಮತ್ತೊಮ್ಮೆ ಸಿಇಟಿ ಪರೀಕ್ಷೆ ನಡೆಸಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಸೂಕ್ತ ನಿರ್ದೇಶನ ನೀಡಬೇಕು. ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸುವ ಪರೀಕ್ಷೆಗಳಿಗೆ ಹಾಜರಾಗುವ ವಿದ್ಯಾರ್ಥಿಗಳ ತಪಾಸಣೆಗೆ ಸೂಕ್ತ ಮಾರ್ಗಸೂಚಿಗಳನ್ನು ರೂಪಿಸುವಂತೆಯೂ ನಿರ್ದೇಶಿಸಬೇಕು. ಜನಿವಾರ ಧರಿಸಿದ್ದ ವಿದ್ಯಾರ್ಥಿಗಳಿಗೆ ಪರೀಕ್ಷೆ ನಿರಾಕರಿಸಿದ ಕ್ರಮವನ್ನು ಅಸಾಂವಿಧಾನಿಕ, ಏಕ ಪಕ್ಷೀಯ, ಅಕ್ರಮ ಎಂದು ಸಾರಬೇಕು. ಜನಿವಾರ ಧರಿಸುವ ವಿದ್ಯಾರ್ಥಿಗಳಿಗೆ ತಾರತಮ್ಯ ಮಾಡಬಾರದು, ಅವರ ಧಾರ್ಮಿಕ ಆಚರಣೆಯ ಹಕ್ಕಿನಲ್ಲಿ ಮಧ್ಯಪ್ರವೇಶ ಮಾಡದಂತೆ ಸೂಕ್ತ ಆದೇಶ ಹೊರಡಿ ಸಬೇಕು ಎಂದು ಅರ್ಜಿದಾರರು ಕೋರಿದ್ದಾರೆ.

**ಅರ್ಜಿಯಲ್ಲಿ ಏನಿದೆ?**

**ರಾಜ್ಯದಲ್ಲಿ ವೃತ್ತಿಪರ ಶಿಕ್ಷಣದ ವಿವಿಧ ಕೋರ್ಸ್‌ಗಳ ಪ್ರವೇಶಕ್ಕೆ ಇದೇ 16 ಮತ್ತು 17ರಂದು ರಾಜ್ಯದ ವಿವಿಧೆಡೆ ಪರೀಕ್ಷೆಗಳನ್ನು ನಡೆಸಲಾಯಿತು. ಈ ಸಂದರ್ಭದಲ್ಲಿ ಪರೀಕ್ಷಾ ಕೊಠಡಿ ಪ್ರವೇಶಿಸುವ ಮುನ್ನ ವಿದ್ಯಾರ್ಥಿಗಳನ್ನು ತಪಾಸಣೆಗೆ ಒಳಪಡಿಸಲಾಗಿತ್ತು. ಈ ವೇಳೆ ಪವಿತ್ರ ಜನಿವಾರ ಧರಿಸಿದ್ದ ವಿದ್ಯಾರ್ಥಿಗಳ ಜನಿವಾರವನ್ನು ಅವರ ಪ್ರತಿರೋಧದ ನಡುವೆಯೂ ಬಲವಂತದಿಂದ ಕತ್ತರಿಸಿ ತೆಗೆಯಲಾಗಿದೆ. ತೆಗೆಯದೇ ಹೋದವರಿಗೆ ಪರೀಕ್ಷೆ ಬರೆಯುವ ಅವಕಾಶ ನಿರಾಕರಿಸಲಾಗಿದೆ, ಎಂದು ಅರ್ಜಿದಾರರು ದೂರಿದ್ದಾರೆ.**

# ಭಯೋತ್ಪಾದಕರ ಸರ್ವನಾಶಕ್ಕೆ ಆಗ್ರಹ

• ಉದಯವಾಹಿನಿ, ಕೋಲಾರ


ಉದಯವಾಹಿನಿ ಚಿತ್ರ

ಕಾಶ್ಮೀರದಲ್ಲಿ ಹಿಂದೂ ಪ್ರವಾಸಿಗರ ಮೇಲೆ ನಡೆದಿರುವ ದಾಳಿ ಖಂಡನೀಯವಾಗಿದ್ದು, ಕೇಂದ್ರ ಸರ್ಕಾರ ಇದಕ್ಕೆ ತಕ್ಕ ಉತ್ತರ ನೀಡ ಬೇಕು, ಘಟನೆಗೆ ಕಾರಣವಾದ ಪಾಪಿ ಉಗ್ರರನ್ನು ಸರ್ವನಾಶ ಮಾಡಬೇಕು ಎಂದು ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಂ.ಮುನೇಗೌಡ ಆಗ್ರಹಿಸಿದರು. ಬೈಕ್ ರ್‍ಯಾಲಿಗೂ ಮುನ್ನ ವಕೀಲರ ಸಂಘದ ಸಭಾಂಗಣದಲ್ಲಿ ಕಾಶ್ಮೀರ ದಾಳಿಯಲ್ಲಿ ಹುತಾತ್ಮರಾದವರಿಗೆ ಮೌನ ಆಚರಣೆಯ ಮೂಲಕ ಶ್ರದ್ಧಾಂಜಲಿ ಸಲ್ಲಿಸಿದ ನಂತರ ಅವರು ಮಾತನಾಡಿದರು. ಭಾರತೀಯರು ಸದಾ ಸಹಿಷ್ಣುಪರತೆ, ಸೌಹಾರ್ದತೆಗೆ ಹೆಸರಾಗಿದ್ದಾರೆ, ನಾವು ಶಾಂತಿಪ್ರಿಯರು ನಿಜ ಆದರೆ ನಮ್ಮ ತಂಟೆಗೆ ಬಂದರೆ ಸುಮ್ಮನಿರುವವರು ಅಲ್ಲ ಎಂಬುದನ್ನು ಪಾಪಿಗಳಿಗೆ ತಿಳಿಸಿಕೊಡಲು ಕೇಂದ್ರ ಕಠಿಣ ನಿರ್ಧಾರಗಳನ್ನು ಕೈಗೊಳ್ಳಬೇಕು, ಇದಕ್ಕೆ ನಮ್ಮ ವಕೀಲ ಸಮುದಾಯ ನಿಮ್ಮೊಂದಿಗೆ ಇರುತ್ತದೆ ಎಂದರು. ಈ ಘಟನೆ ಬಹಳ ನೋವುಂಟು ಮಾಡಿದ್ದು, ಅಮಾಯಕ ಪ್ರವಾಸಿಗರ ಮೇಲೆ ನಡೆದಿರುವ ದಾಳಿ ಪಾಪಿಗಳ ಅಮಾನವೀಯ ವರ್ತನೆಗೆ ಸಾಕ್ಷಿಯಾಗಿದೆ, ಅವರು ನಿಜಕ್ಕೂ ಮನುಷ್ಯರಲ್ಲ, ಅಂತಹ ನೀಚ ಮೃಗಗಳನ್ನು ಸದೆಬಡಿಯಲು ಕೇಂದ್ರ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಬೇಕು ಎಂತಹ ಘಟನೆಗಳು ಮರುಕಳಿಸದಂತೆ ಎಚ್ಚರವಹಿಸಬೇಕು ಎಂದು ಮನವಿ ಮಾಡಿದರು.

ಇಂತಹ ಉಗ್ರರನ್ನು ಪೋಷಿಸುತ್ತಿರುವ ಪಾಕಿಸ್ತಾನಕ್ಕೆ ಭಾರತ ಈಗಾಗಲೇ ತಕ್ಕ ರಾಜತಾಂತ್ರಿಕ ಉತ್ತರ ನೀಡಿದ್ದು, ಮುಂದೆಯೂ ಕಠಿಣ ಕ್ರಮಗಳನ್ನು ಕೈಗೊಳ್ಳಬೇಕು ಎಂದರು. ಈಘಟನೆಗೆ ಕಾರಣರಾದ ನೀಚ ಉಗ್ರಗಾಮಿಗಳನ್ನು ಹುಡುಕಿ ಗುಂಡಿಕ್ಕಿ ಕೊಲ್ಲುವ ಮೂಲಕ ಭಾರತದ ಶಕ್ತಿ ಏನೆಂಬುದನ್ನು ವಿಶ್ವಕ್ಕೆ ತೋರಿಸಬೇಕಾಗಿದೆ ಎಂದ ಅವರು, ಕೇಂದ್ರ ಸರ್ಕಾರದ ನೇತೃತ್ವದಲ್ಲಿ ಇಡೀ ದೇಶವೇ ಹುತಾತ್ಮರಾದವರ ಕುಟುಂಬಗಳ ಜತೆಗಿದೆ ಎಂದರು. ಕೇಂದ್ರ ಸರ್ಕಾರ ಭಾರತೀಯ ಸೇನೆಗೆ ಪೂರ್ಣ ಅಧಿಕಾರ ನೀಡಿ ಇಂತಹ ದೇಶದ್ರೋಹಿಳನ್ನು ಮಟ್ಟಹಾಕಬೇಕು ಎಂದು ಒತ್ತಾಯಿಸಿದರು. ಈ ದಾಳಿಯಲ್ಲಿ ಕರ್ನಾಟಕದ ನಮ್ಮ ಸಹೋದರರೂ ಬಲಿಯಾಗಿದ್ದಾರೆ, ಕಾಶ್ಮೀರದಲ್ಲಿ ಇತ್ತೀಚಿನ ದಿನಗಳಲ್ಲಿ ಭಯೋತ್ಪಾದಕ ಕೃತ್ಯಗಳಿಗೆ ಅವಕಾಶ ಇರಲಿಲ್ಲ, ಕೇಂದ್ರ ಸರ್ಕಾರದ ದಿಟ್ಟಕ್ರಮದಿಂದ 370ನೇ ವಿಧಿಯನ್ನು ತೆಗೆದು ಹಾಕಿ ಕಾಶ್ಮೀರ ಭಾರತದ ಅವಿಭಾಜ್ಯ ಭಾಗ ಎಂದು ಇಡೀ ವಿಶ್ವಕ್ಕೆ ತೋರಿಸಿಕೊಟ್ಟಿರುವುದು ಶ್ಲಾಘನೀಯ ಎಂದರು.

### ಸಂಘ ಪರಿವಾರ ಯಾವತ್ತೂ ಸ್ವಾತಂತ್ರ್ಯ ಹೋರಾಟ ಮಾಡಲಿಲ್ಲ : ಸಿಎಂ ಟೀಕೆ

# ನ್ಯಾಯ ಒದಗಿಸಲು ಹುಟ್ಟಿದ ಪಕ್ಷ ಕಾಂಗ್ರೆಸ್

• ಉದಯವಾಹಿನಿ, ಮೈಸೂರು

ಸಂಘ ಪರಿವಾರ ಯಾವತ್ತೂ ಸ್ವಾತಂತ್ರ್ಯ ಹೋರಾಟಕ್ಕೆ ಬರಲೇ ಇಲ್ಲ. ಈಗ ದೇಶಭಕ್ತಿ ಬಗ್ಗೆ ಮಾತಾಡ್ತಾರೆ. ಸಾವರ್ಕರ್, ಗೋಲ್ವಾಲ್ಕರ್ ಅಂಬೇಡ್ಕರ್ ಅವರ ಸಂವಿಧಾನದ ವಿರುದ್ಧ ಇದ್ದವರು ಎನ್ನುವ ಸ್ಪಷ್ಟ ತಿಳಿವಳಿಕೆ ಕಾರ್ಯಕರ್ತರಿಗೆ ಇರಬೇಕು ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು. ಯುವ ಕಾಂಗ್ರೆಸ್ ಆಯೋಜಿಸಿದ್ದ ಯುವ ಕ್ರಾಂತಿ ಕಾರ್ಯಕರ್ತರ ತರಬೇತಿ ಶಿಬಿರದಲ್ಲಿ ವಿಶೇಷ ಉಪನ್ಯಾಸ ನೀಡಿದ ಅವರು, ಸ್ವಾತಂತ್ರ್ಯ ಹೋರಾಟ ಮತ್ತು ಆಧುನಿಕ ಭಾರತ ನಿರ್ಮಾಣದಲ್ಲಿ ಕಾಂಗ್ರೆಸ್‌ನ ತ್ಯಾಗ-ಬಲಿದಾನ ಮಹತ್ವದ ಪಾತ್ರ ನಿರ್ವಹಿಸಿದೆ. ದೇಶಕ್ಕೆ ನಾಗರಿಕ ಹಕ್ಕು ಮತ್ತು ಸಾಮಾಜಿಕ ನ್ಯಾಯ ಒದಗಿಸಲು ಹುಟ್ಟಿದ ಪಕ್ಷ ಕಾಂಗ್ರೆಸ್. ಸಂಘ ಪರಿವಾರ ಯಾವತ್ತೂ ಸ್ವಾತಂತ್ರ್ಯ ಹೋರಾಟಕ್ಕೆ ಬರಲೇ ಇಲ್ಲ. ಈಗ ದೇಶಭಕ್ತಿ ಬಗ್ಗೆ ಮಾತಾಡ್ತಾರೆ ಎಂದು ವ್ಯಂಗ್ಯವಾಡಿದರು. ಗಾಂಧಿ ಅವರು ಸ್ವಾತಂತ್ರ್ಯ ಹೋರಾಟದ ನೇತೃತ್ವ ವಹಿಸಿದಂತೆ, ಭಾರತದಲ್ಲಿ ಅಂಬೇಡ್ಕರ್ ಅವರ ಸಂವಿಧಾನಕ್ಕೆ ಭದ್ರ ಬುನಾದಿ ಹಾಕಿದವರು ನೆಹರು. ಬಹುತ್ವದ ಭಾರತದ ನೆಲದಲ್ಲಿ ಏಕತೆ ತಂದು ಸಹಿಷ್ಣತೆಯನ್ನು ಆಚರಣೆಗೆ ತರುವಲ್ಲಿ ನೆಹರೂ ಕೊಡುಗೆ ಅಪಾರ ಎಂದರು.

ಮನುಸ್ಮೃತಿ ಪ್ರೇರಿತ ಜಾತಿ ವ್ಯವಸ್ಥೆ ಭಾರತ ಸಮಾಜದಲ್ಲಿ ಜಾತಿ ಆಧಾರದಲ್ಲಿ ಬಿರುಕು ಮೂಡಿಸಿತು. ಈ ಇತಿಹಾಸ ನಿಮಗೆ ಗೊತ್ತಿರಬೇಕು ಎಂದರು. ಯುವ ಕಾಂಗ್ರೆಸ್ ಅಂದರೆ ಭಾರತದ ಸಂವಿಧಾನ ಮತ್ತು ಬಹುತ್ವದ ರಕ್ಷಣೆಗೆ ನಿಂತ ಯುವ ಸೈನ್ಯ, ನಾವು ಏಕೆ ಕಾಂಗ್ರೆಸ್ ಕಟ್ಟುತ್ತಿದ್ದೇವೆ, ಆರ್.ಎಸ್‌ಎಸ್ ಮತ್ತು ಸಂಘ ಪರಿವಾರ ಹೇಗೆ ಭಾರತದ ಬಹುತ್ ಮತ್ತು ಸಂವಿಧಾನ ವಿರೋಧಿ ಎನ್ನುವ ಸ್ಪಷ್ಟತೆ ನಿಮಗೆ ಇರಬೇಕು. ಈ ಸ್ಪಷ್ಟತೆ ಇಲ್ಲದವರು ಬಹಳ ವರ್ಷ ಕಾಂಗ್ರೆಸ್‌ನಲ್ಲಿ ಉಳೀತಾರೆ ಎನ್ನುವುದು ಅನುಮಾನ ಎಂದರು. ಸ್ಥಾತಂತ್ರ, ಸಮಾನತೆ, ಭ್ರಾತೃತ್ವ, ಸಹಿಷ್ಣತೆ, ಸಹಬಾಳ್ವೆ ನಮ್ಮ ಸಂವಿಧಾನದ ಉಸಿರು. ಇದೇ ಭಾರತದ ಉಸಿರು ಕೂಡ ಆಗಿದೆ ಎಂದರು.

ಅಧಿಕಾರ ಬಲಾಡ್ಯರ ಕೈಯಲ್ಲಿ ಇರಬಾರದು. ಜನ ಸಾಮಾನ್ಯರ ಕೈಯಲ್ಲಿ ಇರಬೇಕು ಎಂದು ಅಂಬೇಡ್ಕರ್ ಹೇಳಿದ್ದರು. ದೇವರು ಒಬ್ಬರಿಗೊಂದು ಮತ್ತೊಬ್ಬರಿಗೊಂದು ಮಾಡುವುದಿಲ್ಲ. ದೇವರ ಹೆಸರಲ್ಲಿ ಮೌಢ್ಯಗಳನ್ನು ಬಿತ್ತುವವರ ಬಗ್ಗೆ ಎಚ್ಚರವಿರಲಿ. ಶರಣ ಬಸವಣ್ಣ ಹೇಳಿದ ರೀತಿಯಲ್ಲಿ ದೇವರು ಇದ್ದಾನೆ. ಬಸವಣ್ಣರ ರೀತಿಯಲ್ಲಿ ದೇವರನ್ನು ಕಾಣಬೇಕು. ಮಾಡಬಾರದ ಪಾಪಗಳನ್ನೆಲ್ಲಾ ಮಾಡಿ ದೇವರಿಗೆ ಕೈ ಮುಗಿದರೆ ಪಾಪ ಹೋಗುವುದಿಲ್ಲ ಬಿಜೆಪಿ ದೇವರು, ಧರ್ಮದ ಹೆಸರಲ್ಲಿ ಬರೀ ಸುಳ್ಳು ಹರಡುತ್ತದೆ. ಈ ಬಗ್ಗೆ ದೇಶದ ಜನರ ತಿಳಿವಳಿಕೆ ಹೆಚ್ಚಿಸುವ ಕೆಲಸ ಆಗಬೇಕಿದೆ ಎಂದರು. ಹೀಗಾಗಿ ಇತಿಹಾಸ, ಸಿದ್ಧಾಂತದ ಬಗ್ಗೆ ನಿಮಗೆ ಸ್ಪಷ್ಟತೆ ಇದ್ದರೆ ಮುಂದೆ ಉತ್ತಮ ನಾಯಕರಾಗಿ ಬೆಳೆಯುತ್ತೀರಿ ಎಂದು ಕರೆ ನೀಡಿದರು. ಯುವ ಕಾಂಗ್ರೆಸ್ ಶನಿವಾರ ಇಲ್ಲಿ ಆಯೋಜಿಸಿರುವ ಇಂತಹ ಕಾರ್ಯಾಗಾರಗಳು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ನಡೆಯಬೇಕು ಎಂದು ಕರೆ ನೀಡಿದರು.



> ತನ್ನನ್ನು ಚುನಾವಣೆಯಲ್ಲಿ ಸೋಲಿಸಿದ್ದು ಸಾವರ್ಕರ್ ಮತ್ತು ಡಾಂಗೆ ಎಂದು ಅಂಬೇಡ್ಕರ್ ಅವರೇ ಸ್ಪಷ್ಟವಾಗಿ ಬರೆದಿದ್ದಾರೆ. ನಿಮಗೆ ಸ್ಪಷ್ಟತೆ ಮತ್ತು ಬದ್ಧತೆ ಇದ್ದರೆ ಯಾರು ಏನೇ ಮಾಡಿದರೂ ನೀವು ಬದಲಾಗಲ್ಲ ಎಂದರು. ರಾಜೀವ್ ಗಾಂಧಿ ಅವರು ಕೊಟ್ಟ ಮೀಸಲಾತಿಯನ್ನು ವಿರೋಧಿಸಿ ನ್ಯಾಯಾಲಯದ ಮೆಟ್ಟಿಲೇರಿದ್ದು ಬಿಜೆಪಿಯ ರಾಮಾ ಜೋಯಿಸ್. ಆದರೆ ನ್ಯಾಯಾಲಯ ರಾಜೀವ್ ಗಾಂಧಿ ಅವರು ತಂದ ತಿದ್ದುಪಡಿಯನ್ನು ಎತ್ತಿ ಹಿಡಿದು ಇದು ಸಂವಿಧಾನಬದ್ಧ ಎಂದು ಎತ್ತಿ ಹಿಡಿಯಿತು. ಮೀಸಲಾತಿಯನ್ನು ವಿರೋಧಿಸಿದ್ದ ಬಿಜೆಪಿ ಮಂಡಲ್ ವರದಿಯನ್ನೂ ವಿರೋಧಿಸಿತು
>
> -ಸಿದ್ದರಾಮಯ್ಯ, ಸಿಎಂ

**ಇದು ಸಂವಿಧಾನ ವಿರೋಧಿ**

**ಕಾಂಗ್ರೆಸ್ ಜನರ ಕೈಗೆ ಅಧಿಕಾರ, ಅವಕಾಶಗಳನ್ನು ನೀಡುತ್ತಿದೆ. ಬಿಜೆಪಿ ಬಲಾಢ್ಯರಿಗೆ ಅಧಿಕಾರ ಮತ್ತು ಅವಕಾಶ ನೀಡುತ್ತಿದೆ. ಇದು ಸಂವಿಧಾನ ವಿರೋಧಿ. ಹೀಗಾಗಿ ಬಿಜೆಪಿ ಸಂವಿಧಾನವನ್ನೇ ವಿರೋಧಿಸುತ್ತದೆ, ನಾನು ಎರಡು ಬಾರಿ ಮುಖ್ಯಮಂತ್ರಿಯಾಗಿ ಅಸಮಾನತೆಯನ್ನು ಕಡಿಮೆ ಮಾಡುವ ಕಾರ್ಯಕ್ರಮಗಳನ್ನು ರೂಪಿಸಿ ಜಾರಿ ಮಾಡಿದ್ದೇನೆ. ಸ್ವಾತಂತ್ರ್ಯ ಸಾರ್ಥಕ ಆಗಬೇಕಾದರೆ ಪ್ರತಿಯೊಬ್ಬರೂ ಆರ್ಥಿಕ, ಸಾಮಾಜಿಕ ಸಬಲತೆ ಪಡೆದುಕೊಳ್ಳಬೇಕು. ಕಟ್ಟ ಕಡೆಯ ಮನುಷ್ಯನಿಗೆ ಶಕ್ತಿ ಕೊಡುವುದೇ ಸರ್ವೋದಯದ ಆಶಯ. ಮೌಢ್ಯ, ಕಂದಾಚಾರ, ಕರ್ಮ ಸಿದ್ಧಾಂತವನ್ನು ಕೃತಕವಾಗಿ ಸೃಷ್ಟಿಸಿ ನೀರು ಗೊಬ್ಬರ ಹಾಕಿ ಗಟ್ಟಿ ಮಾಡಿಟ್ಟಿದ್ದಾರೆ.**

## ಮಿನಿ ನ್ಯೂಸ್

### ಪಾಕ್ ಮೂಲದ ಮಹಿಳೆ ನೆಲೆ

• ಉದಯವಾಹಿನಿ, ರಾಮನಗರ

ಪಾಕಿಸ್ತಾನ ಮೂಲದ ಮಹಿಳೆಯೊಬ್ಬರು ರಾಮನಗರದಲ್ಲಿ 20 ವರ್ಷಗಳಿಂದ ನೆಲಸಿದ್ದಾರೆ. 52 ವರ್ಷದ ಮಹಿಳೆ ಸ್ಥಳೀಯ ವ್ಯಕ್ತಿಯೊಬ್ಬರನ್ನು ವಿವಾಹವಾಗಿ ಕುಟುಂಬದೊಂದಿಗೆ ಬದುಕುತ್ತಿದ್ದಾರೆ. ಮಹಿಳೆ ನೆಲೆಸಿರುವುದನ್ನು ಖಚಿತಪಡಿಸಿರುವ ಪೊಲೀಸರು, ಅವರ ಹಿನ್ನೆಲೆ ಸೇರಿದಂತೆ ಹೆಚ್ಚಿನ ಮಾಹಿತಿ ಕಲೆಹಾಕುತ್ತಿದ್ದಾರೆ.

ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದನೆ ಘಟನೆ ಬಳಿಕ, ದೇಶದಲ್ಲಿ ಪಾಕ್ ಪ್ರಜೆಗಳ ಕುರಿತು ಸರ್ಕಾರ ಮಾಹಿತಿ ಕಲೆಹಾಕುತ್ತಿದೆ. ಅದರಂತೆ ಮಹಿಳೆಯೊಬ್ಬರು ರಾಮನಗರದಲ್ಲಿ ನೆಲಸಿರುವುದು ಗೊತ್ತಾಗಿದೆ. ಯಾವ ಕಾರಣಕ್ಕೆ ಭಾರತಕ್ಕೆ ಬಂದಿದ್ದರು? ದೇಶದ ಪೌರತ್ವ ಪಡೆದಿದ್ದಾರೆಯೇ? ವೀಸಾ ಹೊಂದಿದ್ದಾರೆಯೇ? ಅಥವಾ ಅನಧಿಕೃತವಾಗಿ ನೆಲಸಿದ್ದಾರೆಯೇ ಎಂಬುದರ ಮಾಹಿತಿ ಸಂಗ್ರಹಿಸಲಾಗುತ್ತಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಈ ಕುರಿತು ಪ್ರತಿಕ್ರಿಯಿಸಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್. ಶ್ರೀನಿವಾಸಗೌಡ, 'ಜಿಲ್ಲೆಯಲ್ಲಿ ಪಾಕ್ ಮೂಲದ ಮಹಿಳೆ ನೆಲಸಿರುವುದು ನಿಜ. ಅವರ ಕುರಿತ ಮಾಹಿತಿ ಬಹಿರಂಗಪಡಿಸಲಾಗದು ಎಂದರು.

### ಮುಸ್ಲಿಂ ಸಂಘಟನೆಗಳಿಂದ ಪ್ರತಿಭಟನೆ

• ಉದಯವಾಹಿನಿ, ಕುಶಾಲನಗರ

ಪೆಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಉಗ್ರರು ನಡೆಸಿ ಪೈಶಾಚಿಕ ಕೃತ್ಯ ಖಂಡಿಸಿ ಮುಸ್ಲಿಂ ಸಂಘಟನೆ ಪಟ್ಟಣದಲ್ಲಿ ಪ್ರತಿಭಟನೆ ನಡೆಸಲಾಯಿತು. ಇಲ್ಲಿನ ಕಾರ್ಯಪ್ಪ ಸರ್ಕಲ್‌ನಲ್ಲಿ ಜಮಾವಣೆಗೊಂಡ ಕಾರ್ಯಕರ್ತರು ಮುಗ್ಧ ಪ್ರವಾಸಿಗರನ್ನು ಹತ್ಯೆ ಮಾಡಿದ ಉಗ್ರರ ಕೃತ್ಯವನ್ನು ಖಂಡಿಸಿದರು. ಜಾಮಿಯ ಮಸೀದಿ ಅಧ್ಯಕ್ಷ ಮಹಮ್ಮದ್ ಮಾತನಾಡಿ, ಭಯೋತ್ಪಾದನೆ ವಿರುದ್ಧ ನಮ್ಮ ಮುಸ್ಲಿಂ ಬಾಂಧವರ ವಿರೋಧವಿದೆ. ಭಾರತ ದೇಶದಲ್ಲಿ ನಮ್ಮ ಎಲ್ಲಾ ಧರ್ಮದ ಜನರು ಒಂದೇ ಎಂಬ ಭಾವನೆಯಲ್ಲಿ ನಾವು ಬದುಕುತ್ತಿದ್ದೇವೆ. ಈ ದೇಶದ ಕೊನೆಯ ನಾಗರಿಕರಿಗೆ ತೊಂದರೆಯಾದಲ್ಲಿ ನಮ್ಮ ಮುಸ್ಲಿಂ ಸಂಘಟನೆ ನ್ಯಾಯದ ಪರ ಇರುತ್ತದೆ ಎಂದರು.

# ಬಾರ್ ಅಂಡ್ ರೆಸ್ಟೋರೆಂಟ್ ಸ್ಥಳಾಂತರಕ್ಕೆ ಆಗ್ರಹ

• ಉದಯವಾಹಿನಿ, ಮಳವಳ್ಳಿ

ತಾಲ್ಲೂಕಿನ ಮಾಗನೂರು ಗೇಟ್ ಬಳಿಯ ಜನವಸತಿ ಪ್ರದೇಶದಲ್ಲಿ ತೆರೆದಿರುವ ಬಾರ್ ಅಂಡ್ ರೆಸ್ಟೋರೆಂಟ್ ನನ್ನು ಕೂಡಲೇ ಸ್ಥಳಾಂತರ ಮಾಡಬೇಕು ಎಂದು ಮಾಗನೂರು ಗ್ರಾಮಸ್ಥರು ಆಗ್ರಹಿಸಿದರು. ಪಟ್ಟಣದ ಕರ್ನಾಟಕ ಪ್ರಾಂತ ರೈತ ಸಂಘದ ಕಚೇರಿಯಲ್ಲಿ ಸಂಘದ ಪದಾಧಿಕಾರಿಗಳೊಂದಿಗೆ ಸುದ್ದಿಗೋಷ್ಠಿಯಲ್ಲಿ ಗ್ರಾಮದ ಮನು ಮಾತನಾಡಿ, ಬಾರ್ ಅಂಡ್ ರೆಸ್ಟೋರೆಂಟ್ ತೆರೆದಿರುವ ಕಟ್ಟಡದ ಮಾಲೀಕರು ಸ್ಥಳೀಯರಿಗೆ ಅಲ್ಲಿ ಕೆಫೆ ಆರಂಭಿಸುವುದಾಗಿ ಸುಳ್ಳು ಮಾಹಿತಿ ನೀಡಿ ಮದ್ಯದಂಗಡಿಗೆ ಬಾಡಿಗೆಗೆ ನೀಡಿದ್ದಾರೆ. ಕಟ್ಟಡದ ಸುತ್ತಮುತ್ತ ವಾಸದ ಮನೆಗಳು ಇರುವುದರಿಂದ ಮಹಿಳೆಯರು ಮನೆಯಿಂದ ಹೊರಬಾರದ ಪರಿಸ್ಥಿತಿ ಇದೆ. ಪಕ್ಕದಲ್ಲಿಯೇ ರೈತರ ಜಮೀನುಗಳಿದ್ದು, ಅದನ್ನು ಸ್ಥಳಾಂತರ ಮಾಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಈಗಾಗಲೇ ಮನವಿ ಸಲ್ಲಿಸಲಾಗಿದೆ ಎಂದು ತಿಳಿಸಿದರು.

ಕರ್ನಾಟಕ ಪ್ರಾಂತ ರೈತ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಎನ್.ಎಲ್.ಭರತ್ ರಾಜ್ ಮಾತನಾಡಿ, ಬಾರ್‌ನಿಂದಾಗಿ ಗಲಾಟೆ ಉಂಟಾಗುತ್ತಿದೆ. ಮಹಿಳೆಯರು ರಸ್ತೆ ಬದಿಯಲ್ಲಿ ತಿರುಗಾಡದಂತಾಗಿದೆ. ಸಮೀಪದಲ್ಲಿಯೇ ಸರ್ಕಾರಿ ಶಾಲೆ ಇದೆ. ಮಾಗನೂರು, ಶೆಟ್ಟಹಳ್ಳಿ ಬಸ್ ನಿಲ್ದಾಣಕ್ಕೆ ಬರುವ ಮಹಿಳೆಯರು, ಮಕ್ಕಳಿಗೂ ಕುಡುಕರಿಂದ ಭಯದ ವಾತಾವರಣ ನಿರ್ಮಾಣವಾಗಿದೆ. ಕೂಡಲೇ ಬಾರ್ ಅಂಡ್ ರೆಸ್ಟೋರೆಂಟ್ ಸ್ಥಳಾಂತರ ಮಾಡಬೇಕು ಇಲ್ಲದಿದ್ದರೇ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು.

# ವಿಕಲಚೇತನ ಅನುದಾನ: ಕ್ರಿಯಾ ಯೋಜನೆಗೆ ಒತ್ತಾಯ

• ಉದಯವಾಹಿನಿ, ಬಾಗೇಪಲ್ಲಿ


ಉದಯವಾಹಿನಿ ಚಿತ್ರ

ಪುರಸಭೆಯಲ್ಲಿ ವಿಕಲಚೇತನರಿಗೆ ಮೀಸಲಿಟ್ಟ ಶೇಕಡಾ 5 ರಷ್ಟು ಅನುದಾನವನ್ನು ವಿಕಲಚೇತನರ ಕಲ್ಯಾಣಕ್ಕೆ ಬಳಸಲು ಕ್ರಿಯ ಯೋಜನೆ ಸಿದ್ದಪಡಿಸಿ, ವಿಕಲಚೇತನರಿಗೆ ನ್ಯಾಯ ಒದಗಿಸಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ ಸಂಘಟನೆಗಳ ಒಕ್ಕೂಟ ತಾಲ್ಲೂಕು ಅಧ್ಯಕ್ಷ ಬಿ.ಎ.ಬಾಬಾಜಾನ್ ಆಗ್ರಹಿಸಿದರು. ಕರ್ನಾಟಕ ರಕ್ಷಣಾ ವೇದಿಕೆ, ವಿಕಲ ಚೇತನರ ಸಂಘ, ಕರ್ನಾಟಕ ರಾಜ್ಯ ರೈತಸಂಘ, ಹಸಿರು ಸೇನೆ ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಪುರಸಭೆ ಮುಂಭಾಗದಲ್ಲಿ ಪ್ರತಿಭಟನೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಮಾತನಾಡಿದ ಅವರು ಪುರಸಭೆ ಅನುದಾನದಲ್ಲಿ ವಿಕಲಚೇತನರಿಗೆ ಮೀಸಲಿಟ್ಟ ಶೇಕಡ 5 ರಷ್ಟು ಅನುದಾನವನ್ನು ಸದುಪಯೋಗ ಮಾಡಿಲ್ಲ. ಸರ್ಕಾರವು ವಿಕಲಚೇತನರಿಗೆ ಕಲ್ಯಾಣಕ್ಕಾಗಿ ಶೇಕಡ 5 ರಷ್ಟು ಅನುದಾನ ಮೀಸಲು ಇಟ್ಟಿದ್ದರೂ ವಿಕಲಚೇತನರಿಗೆ ವಿದ್ಯಾರ್ಥಿ ವೇತನ, ದ್ವಿವಚಕ್ರ ವಾಹನ, ವಿವಿಧ ಸಲಕರಣೆಗಳು, ಆರೋಗ್ಯ ಸಮಸ್ಯೆಗಳಿಗೆ ಅನುದಾನವನ್ನು ವಿಕಲಚೇತನರಿಗೆ ಬಾಗೇಪಲ್ಲಿ ಪುರಸಭೆ ಅಧಿಕಾರಿಗಳು ನೀಡದೇ ವಂಚನೆ ಮಾಡಿ, ವಿಕಲಚೇತನರಿಗೆ ಅನ್ಯಾಯ ಮಾಡುತ್ತಿದ್ದಾರೆ.

ಅದ್ದರಿಂದ ಈ ಕೂಡಲೇ ಪುರಸಭೆಯಲ್ಲಿ ವಿಕಲಚೇತನರಿಗೆ ಮೀಸಲ್ಲಿಟ್ಟ ಶೇಕಡಾ 5 ರಷ್ಟು ಅನುದಾನವನ್ನು ವಿಕಲಚೇತನರ ಕಲ್ಯಾಣಕ್ಕೆ ಬಳಸಲು ಕ್ರಿಯ ಯೋಜನೆ ಸಿದ್ದಪಡಿಸಿ, ವಿಕಲಚೇತನರಿಗೆ ನ್ಯಾಯ ಒದಗಿಸಬೇಕು ಎಂದರು. ನಕಲಿ ಖಾತೆಗಳನ್ನು ಪರಿಶೀಲಿಸಿ ತ್ವರಿತವಾಗಿ ಬಡವರ ಖಾತೆಗಳನ್ನು ಮಾಡಿಕೊಡಬೇಕು ಎಂದು ಆಗ್ರಹಿಸಿದರು.

ಬಾಗೇಪಲ್ಲಿ ಪುರಸಭೆ ಮುಖ್ಯಾಧಿಕಾರಿ ಶ್ರೀನಿವಾಸ್ ರವರಿಗೆ ಮನವಿಪತ್ರ ಸಲ್ಲಿಸಲಾಯಿತು.

### ಪೆಹಲ್ಗಾಮ್ ಹತ್ಯೆ ಮಾಜಿ ಸೈನಿಕರ ಖಂಡನೆ

• ಉದಯವಾಹಿನಿ, ವಿರಾಜಪೇಟೆ

ಪಹಲ್ಗಾಮ್ ಕೃತ್ಯವನ್ನು ಕೊಡಗು ಮಾಜಿ ಸೈನಿಕರ ಸಹಕಾರ ಸಂಘ ತೀವ್ರವಾಗಿ ಖಂಡಿಸುತ್ತದೆ ಎಂದು ಸಂಘದ ಅಧ್ಯಕ್ಷ ಚಪ್ಪಂಡ ಹರೀಶ್ ಉತ್ತಯ್ಯ ಅವರು ಹೇಳಿದರು. ಪಟ್ಟಣದ ಪ್ರೆಸ್‌ಕ್ಲಬ್‌ನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಈ ಹಿಂದೆಯೂ ಕೂಡ ಭಾರತದ ಮೇಲೆ ಅನೇಕ ರೀತಿಯ ಭಯೋತ್ಪಾದಕ ದಾಳಿ ನಡೆಸಲಾಗಿದೆ. ಪುಲ್ವಾಮ ದಾಳಿಯಲ್ಲಿ ದೇಶದ ಯೋಧರು ಹುತಾತ್ಮರಾದಾಗ ಕೇಂದ್ರ ಸರ್ಕಾರ ದಿಟ್ಟ ಪ್ರತಿಕಾರ ಕ್ರಮ ಕೈಗೊಂಡಿತ್ತು. ಅಂತೆ ಪಹಲ್ಲಾಮ್‌ನಲ್ಲಿ ಅಮಾಯಕರ ಮೇಲಿನ ದಾಳಿಗೆ ತಕ್ಕ ಉತ್ತರ ಭಾರತ ನೀಡಲೇಬೇಕು. ಭಾರತ ನುಡಿದಂತೆ ಹುಡುಕಿ ಉಗ್ರವಾದಿಗಳ ಬೇಟೆಯಾಡಬೇಕು. ಆ ಮೂಲಕ ಈ ಬಾರಿ ನರಿ ಬುದ್ದಿ ಪಾಕಿಸ್ತಾನಕ್ಕೆ ಮೋದಿ ನುಡಿದಂತೆ ಮರೆಯಲಾಗದ ಪಾಠವಾಗಬೇಕು. ಮೃತರ ಸಾವಿಗೆ ತಕ್ಕ ಉತ್ತರ ನೀಡಬೇಕಿದೆ ಎಂದರು. ಅಲ್ಲಿನ ಪ್ರಕೃತಿ ಪ್ರತಿಕೂಲ ವಾತಾವರಣ ಸೈನಿಕರಿಗೂ ಕಾರ್ಯ ಚರಣೆಗೆ ಸವಾಲಾಗಿರುತ್ತದೆ.

ಆದರೆ, ಸ್ಥಳೀಯರ ನೆರವಿನೊಂದಿಗೆ ನುಸುಳಿ ಬರುವ ಉಗ್ರವಾದಿಗಳಿಗೆ ಅಲ್ಲಿ ಆಶ್ರಯ ದೊರೆಯುತ್ತದೆ. ಇದೀಗ ನಮ್ಮ ಸೈನಿಕರಿಗೆ ದಿಟ್ಟ ಉತ್ತರ ನೀಡುವ ಸಮಯ ಒದಗಿ ಬಂದಿದ್ದು ಉಗ್ರವಾದ ಮತ್ತು ಅದನ್ನು ಪೋಷಿಸುವ ಪಾಕಿಸ್ತಾನಕ್ಕೆ ದಿಟ್ಟ ಉತ್ತರ ದೊರೆಯುವುದು ಈ ಬಾರಿ ನಿಶ್ಚಿತ. ಅದರಿಂದ ನಾವೆಲ್ಲ ಒಂದಾಗಿ ನಿಂತು ದೇಶದ ಹಿತ ಕಾಯಬೇಕು. ದೇಶದ ಸೈನಿಕರಿಗೆ ಸ್ಪೂರ್ತಿ ನೀಡಬೇಕು ಎಂದರು.

# ಭೂರಹಿತರಿಗೆ ಭೂಮಿ ನೀಡಲು ಒತ್ತಾಯಿಸಿ ಪ್ರತಿಭಟನೆ

• ಉದಯವಾಹಿನಿ, ಮಡಿಕೇರಿ


ಉದಯವಾಹಿನಿ ಚಿತ್ರ

ಭೂರಹಿತ ಬಡ ವರ್ಗಕ್ಕೆ ನಿವೇಶನ ಒದಗಿಸುವಂತೆ ಒತ್ತಾಯಿಸಿ ಆಲ್ ಇಂಡಿಯ ಬಹುಜನ ಸಮಾಜ ಪಾರ್ಟಿ ನೇತೃತ್ವದಲ್ಲಿ ನೂರಾರು ಮಂದಿ ನಗರದಲ್ಲಿ ಶುಕ್ರವಾರ ಪ್ರತಿಭಟನೆ ನಡೆಸಿದರು. ಇಲ್ಲಿನ ಫೀಲ್ಡ್ ಮಾರ್ಷಲ್ ಕಾರ್ಯಪ್ಪ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿಯವರೆಗೂ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿದ ಅವರು, ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಘೋಷಣೆಗಳನ್ನು ಕೂಗಿದರು. ನಮ್ಮ ಭೂಮಿ ನಮ್ಮ ಹಕ್ಕು, ಭಿಕ್ಷೆ ಅಲ್ಲ, ಭಿಕ್ಷೆ ಅಲ್ಲ ಎಂಬ ಘೋಷಣೆಗಳು ಹೆಚ್ಚು ಕೇಳಿ ಬಂದವು. ಈ ವೇಳೆ ಮಾತನಾಡಿದ ಪಕ್ಷದ ರಾಜ್ಯ ಘಟಕದ ಅಧ್ಯಕ್ಷ ಮಾರಸಂದ್ರ ಮುನಿಯಪ್ಪ, ಸರ್ಕಾರ ಬಡವರಿಗೆ ನಿವೇಶನ ನೀಡಬೇಕು ಎಂದು ಒತ್ತಾಯಿಸಿದರು.

ಈ ವೇಳೆ ಮಾತಾಡಿದ ಇತರ ಮುಖಂಡರು, ಕೊಡಗು ಜಿಲ್ಲೆಯಲ್ಲಿ ನಿವೇಶನ ರಹಿತರು ಹೆಚ್ಚಿನ ಕಷ್ಟವನ್ನು ಅನುಭವಿಸುತ್ತಿದ್ದು, ಸರ್ಕಾರ ಅವುಗಳಿಗೆ ಸ್ಪಂದಿಸುತ್ತಿಲ್ಲ ಎಂದರು. ಕೇವಲ ನಿವೇಶನ ಮಾತ್ರ ವಲ್ಲ, ವ್ಯವಸಾಯ ಮಾಡುವುದಕ್ಕೂ ಭೂಮಿ ಇಲ್ಲ. ಮಾತ್ರವಲ್ಲ, ಹಲವು ಕಡೆ ಕನಿಷ್ಠ ಪಕ್ಷ ಸ್ಮಶಾನದ ಭೂಮಿಯೂ ಬಡವರಿಗೆ ಇಲ್ಲ ಎಂದು ಕಿಡಿಕಾರಿದರು. ಕೊಡಗು ಜಿಲ್ಲೆಯಲ್ಲಿ ಶ್ರೀಮಂತರಿಗೊಂದು ನೀತಿ, ಬಡವರಿಗೊಂದು ನೀತಿ ಇದೆ ಎಂದು ಆರೋಪಿಸಿದ ಮುಖಂಡರು, ಅದಕ್ಕೆ ಉದಾಹರಣೆಗಾಗಿ ಈಚೆಗೆ ಸರ್ಕಾರ ಜಾರಿಗೊಳಿಸಿದ 1ರಿಂದ 25 ಎಕರೆವರೆಗಿನ ಭೂಮಿಯನ್ನು ಒತ್ತುವರಿದಾರರಿಗೆ ಗುತ್ತಿಗೆಗೆ ನೀಡುವ ನಿರ್ಧಾರವನ್ನು ಪ್ರಸ್ತಾಪಿಸಿದರು.

**ಗುತ್ತಿಗೆಗೆ ನೀಡುವುದು ಎಷ್ಟು ಸರಿ**

**ಇದು ನಿಜಕ್ಕೂ ತಾರತಮ್ಯದಿಂದ ಕೂಡಿದ ನಿರ್ಧಾರ. ಸಾವಿರಾರು ಮಂದಿ ನಿವೇಶನ ಇಲ್ಲದೇ ಇರುವಾಗ ಒತ್ತುವರಿ ಮಾಡಿರುವ ಭೂಮಾಲೀಕರಿಗೆ ಜಾಗವನ್ನು ಗುತ್ತಿಗೆಗೆ ನೀಡುವುದು ಎಷ್ಟು ಸರಿ ಎಂದು ಪ್ರಶ್ನಿಸಿದರು. ತಕ್ಷಣವೇ ಈ ನಿರ್ಧಾರವನ್ನು ವಾಪಸ್ ಪಡೆದು ಒತ್ತುವರಿ ಭೂಮಿಯನ್ನೆಲ್ಲ ತೆರವು ಮಾಡಿ, ಅದನ್ನು ಭೂರಹಿತರಿಗೆ ಹಂಚಿಕೆ ಮಾಡಬೇಕು ಎಂದು ಆಗ್ರಹಿಸಿದರು.**

# ಕಡ್ಡಾಯವಾಗಿ ಡ್ರೈವಿಂಗ್ ಲೈಸನ್ಸ್ ಪಡೆಯಬೇಕು

• ಉದಯವಾಹಿನಿ, ಕೆಜಿಎಫ್


ಉದಯವಾಹಿನಿ ಚಿತ್ರ

ವಾಹನ ಒಡಿಸುವ ಸಂದರ್ಭದಲ್ಲಿ ಎಲ್ಲಾರು ಕಡ್ಡಾಯವಾಗಿ ವಾಹನ ಪರವಾನಿಗಿಯನ್ನು ಹೊಂದಿರಬೇಕು ಇಲ್ಲದಿದ್ದರೆ ದಂಡವನ್ನು ಹಾಕಬೇಕುತ್ತದೆ ಕೆಜಿಎಫ್ ನಗರದಲ್ಲಿ 3 ರಿಂದ 4 ಸಾವಿರ ಆಟೋ ಚಾಲಕರು ಇದ್ದು ಹಲವು ಆಟೋ ಚಾಲಕರು ವಾಹನ ಪರವಾನಿಗಿಯನ್ನು ಪಡೆದಿಲ್ಲ ಇಂತಹ ಪ್ರಕರಣಗಳನ್ನು ಪತ್ತೆ ಹಚ್ಚಿ ದಂಡ ಸಹ ಹಾಕಲಾಗಿದೆ, ವಾಹನ ಸೀಜ್ ಮಾಡಲಾಗಿದೆ, ಒಂದು ವೇಳೆ ವಾಹನ ಅಪಘಾತಕ್ಕೆ ಒಳಗಾದ ವೇಳೆ ನಿಮಗೆ ಇನ್‌ಶುರೇನ್ಸ್ ಇದ್ದರೆ ನಿಮಗೆ ಅನುಕೂಲವಾಗಲಿದೆ ಇಲ್ಲದಿದ್ದರೆ ಸಂಕಷ್ಟಕ್ಕೆ ಸಿಲುಕಬೇಕಾದ ಪರಿಸ್ಥಿತಿ ನಿರ್ಮಾಣವಾಗಲಿದೆ ಆದ್ದರಿಂದ ಎಲ್ಲರು ಲೈಸನ್ಸ್ ಪಡೆಯಬೇಕು ಎಂದು ಕೆಜಿಎಫ್ ಸಾರಿಗೆ ಅಧಿಕಾರಿ ಪಾಷ ಹೇಳಿದರು. ನಗರದ ಆಂಡ್ರಸನ್‌ಪೇಟೆ ಆಟೋ ನಿಲ್ದಾಣದಲ್ಲಿ ಡಾ. ಅಂಬೇಡ್ಕರ್ ಆಟೋ ಯೂನಿಯನ್ ಅಧ್ಯಕ್ಷ ರಾಜಕುಮಾರ್ ಅಧ್ಯಕ್ಷತೆಯಲ್ಲಿ ಉಚಿತ ಡ್ರೈವಿಂಗ್ ಲೈಸನ್ಸ್ ವಿತರಣಾ ಕಾರ್ಯಕ್ರಮದಲ್ಲಿ ಭಾಗ ವಹಿಸಿ ಮಾತನಾಡಿ ಕಾರ್ಮಿಕ ಇಲಾಖೆಯಿಂದ ಹತ್ತು ಹಲವು ಯೋಜನೆಗಳು ಇದ್ದು ನಾನು ಎಲ್ಲವನ್ನು ನಿಮಗೆ ಮಾಹಿತಿ ನೀಡಲಿದ್ದು ಸರ್ಮಪಕವಾಗಿ ಸದ್ಬಳಕೆ ಮಾಡಿಕೊಳ್ಳಿ ಎಂದು ಹೇಳಿದರು. ಇದೇ ವೇಳೆ ಆಟೋ ಯೂನಿಯನ್ ಅಧ್ಯಕ್ಷ ರಾಜಕುಮಾರ್ ಮಾತನಾಡಿ ಕೆಜಿಎಫ್ ನಗರದಲ್ಲಿ ಕಡು ಬಡವರೇ ಅಧಿಕ ಸಂಖ್ಯೆಯಲ್ಲಿ ಇದ್ದು ಹೊಟ್ಟೆ ಪಾಡಿಗಾಗಿ ಆಟೋ ಒಡಿಸುತ್ತಿದ್ದಾರೆ ಅವರಿಗೆ ಲೈಸನ್ಸ್ ಪಡೆಯಲು ಸಾಧ್ಯವಾಗದ ಪರಿಸ್ಥಿತಿಯಲ್ಲಿ ಇದ್ದು ಅವರಿಗೆ ನಮ್ಮ ಸಂಘಟನೆವತಿಯಿಂದ ಉಚಿತವಾಗಿ ವಿತರಿಸುತ್ತಿದ್ದೇವೆ ಕಾರ್ಮಿಕ ಇಲಾಖೆಯಿಂದ ಆಟೋ ಚಾಲಕರಿಗೆ ಲಬ್ಯವಾ ಗುವ ಸೌಲತ್ತುಗಳನ್ನು ಮನೆ ಭಾಗಿಲಿಗೆ ತಲುಪಿಸಲಾಗುವುದು ಎಂದು ಹೇಳಿದರು.

# ರಾಮನಹಳ್ಳಿ ಡೇರಿ ಅಧ್ಯಕ್ಷರಾಗಿ ಅನಿಲ್ ಆಯ್ಕೆ

• ಉದಯವಾಹಿನಿ, ಬಿಡದಿ


ಉದಯವಾಹಿನಿ ಚಿತ್ರ

ಇಲ್ಲಿನ ರಾಮನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರಾಗಿ ಕಾಂಗ್ರೆಸ್ ಬೆಂಬಲಿತ ಎಸ್. ಅನಿಲ್, ಉಪಾಧ್ಯಕ್ಷರಾಗಿ ಅರುಣ್ ಕುಮಾರ್ ಆಯ್ಕೆಯಾಗಿದ್ದಾರೆ. ಎಸ್. ಸುರೇಶ್, ರಾಧಾ ಶಿವರಾಂ ರಾಜೀನಾಮೆಯಿಂದ ತೆರವಾಗಿದ್ದ ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನಕ್ಕೆ ಸಂಘದ ಕಚೇರಿಯಲ್ಲಿ ಇತ್ತೀಚೆಗೆ ಚುನಾವಣೆ ಜರುಗಿತು. ಅಧ್ಯಕ್ಷ ಸ್ಥಾನಕ್ಕೆ ಎಸ್. ಅನಿಲ್ ಹಾಗೂ ಜೆಡಿಎಸ್ ಬೆಂಬಲಿತ ಅಭ್ಯರ್ಥಿ ಸಿದ್ದೇಶಯ್ಯ ನಾಮಪತ್ರ ಸಲ್ಲಿಸಿದ್ದರು.

ಉಪಾಧ್ಯಕ್ಷ ಸ್ಥಾನಕ್ಕೆ ಅರುಣ್‌ಕುಮಾರ್ ಹಾಗೂ ಜೆಡಿಎಸ್ ಬೆಂಬಲಿತ ಜಯರತ್ನಮ್ಮ ಸ್ಪರ್ಧಿಸಿದ್ದರು. ಚುನಾವಣೆಯಲ್ಲಿ ಸಂಘದ ಒಟ್ಟು 12 ನಿರ್ದೇಶಕರು ಮತ ಚಲಾಯಿಸಿದರು. ಅಂತಿಮವಾಗಿ ಕಾಂಗ್ರೆಸ್ ಬೆಂಬಲಿತ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನದ ಅಭ್ಯರ್ಥಿಗಳು ತಲಾ 7 ಮತ ಪಡೆದು ಗೆದ್ದರು. ಜೆಡಿಎಸ್ ಬೆಂಬಲಿತ ಪ್ರತಿಸ್ಪರ್ಧಿಗಳು ತಲಾ 5 ಮತಗಳನ್ನು ಪಡೆದು ಸೋತರು.

ಚುನಾವಣಾಧಿಕಾರಿಯಾಗಿ ಸಹಕಾರ ಇಲಾಖೆ ಅಧಿಕಾರಿ ಪುರುಷೋತ್ತಮ್ ಕಾರ್ಯನಿರ್ವಹಿಸಿದರು.

ಸಂಘದ ಸಿಇಒ ಎಸ್. ರಮೇಶ್, ನಿರ್ದೇಶಕರಾದ ಎಸ್. ಸುರೇಶ್, ರಾಧಾ ಶಿವರಾಂ, ಶಿವಶಂಕರ್, ಶಿವ ನಂಜಯ್ಯ, ಶಿವಪ್ಪ, ಗೋಪಹಳ್ಳಿ ಗ್ರಾ.ಪಂ. ಉಪಾಧ್ಯಕ್ಷ ಆರ್.ಎ. ಗೋಪಾಲ್, ಸದಸ್ಯರಾದ ರಾಮಚಂದ್ರ, ಸರೋಜಮ್ಮ ನಾಗರಾಜು, ರಾಧಾಕುಮಾರ್, ಸುಜಾತ ತಾಯಪ್ಪ, ಮುಖಂಡರಾದ ಅಪ್ಪಾಜಿಗೌಡ, ಪುಟ್ಟರಾಜು ಹಾಗೂ ಇತರರು ನೂತನ ಅಧ್ಯಕ್ಷ-ಉಪಾಧ್ಯಕ್ಷರನ್ನು ಅಭಿನಂದಿಸಿದರು.

# ಶೂಟೌಟ್ ಪ್ರಕರಣ: ತಪ್ಪಿಸ್ಥರಿಗೆ ಕಠಿಣ ಶಿಕ್ಷೆಗೆ ಒತ್ತಾಯ

• ಉದಯವಾಹಿನಿ, ಚಿಕ್ಕಬಳ್ಳಾಪುರ


ಉದಯವಾಹಿನಿ ಚಿತ್ರ

ಚಿಕ್ಕಬಳ್ಳಾಪುರ ಜಿಲ್ಲೆಯ ಇತಿಹಾಸದಲ್ಲಿಯೇ ಕಂಡು ಕೇಳರಿಯದಂತೆ ಮಂಚೇನಹಳ್ಳಿ ತಾಲ್ಲೂಕಿನ ಕನಗಾನಕೊಪ್ಪ ಗ್ರಾಮದ ಬಳಿ ನಿನ್ನೆ ನಡೆದ ಶೂಟ್ ಔಟ್ ಪ್ರಕರಣ ಕಾಂಗ್ರೆಸಿಗರನ್ನು ಕೆರಳಿ ಕೆಂಡವಾಗಿಸಿದ್ದು ಈ ಪ್ರಕರಣದ ಪ್ರಮುಖ ಆರೋಪಿಗಳನ್ನು ಅತ್ಯಂತ ಕಠಿಣವಾಗಿ ಶಿಕ್ಷಿಸಬೇಕು. ಎಂದು ಒತ್ತಾಯಿಸಿ ಜಿಲ್ಲಾಧಿಕಾರಿಗಳ ಕಚೇರಿಯ ಮುಂದೆ ತೀವ್ರ ಪ್ರತಿಭಟನೆ ನಡೆಸಿದರು. ಪ್ರತಿಭಟನೆಯ ನೇತೃತ್ವ ವಹಿಸಿದ್ದ ಹಿರಿಯ ನಗರ ಸಭೆ ಸದಸ್ಯ, ಹಿರಿಯ ಕಾಂಗ್ರೆಸ್ ಮುಖಂಡ ಎಸ್‌ಎಂ ರಫೀಕ್ ರವರು ಮಾತನಾಡಿ ಚಿಕ್ಕಬಳ್ಳಾಪುರ ಮತ್ತು ಅಖಂಡ ಕೋಲಾರ ಜಿಲ್ಲೆ, ಶಾಂತಿ ಮತ್ತು ಸೌಹಾರ್ದತೆಗೆ ಹೆಸರಾದ ಜಿಲ್ಲೆಯಾಗಿದ್ದು ಇಂತಹ ಜಿಲ್ಲೆಯಲ್ಲಿ ಈ ರೀತಿಯ ಪ್ರಕರಣ ನಡೆದಿರುವುದು ಸರ್ಕಾರ ಮತ್ತು ಪೊಲೀಸ್ ಇಲಾಖೆ ತೀವ್ರವಾಗಿ ಇದನ್ನು ಪರಿಗಣಿಸಿ ತಪ್ಪಿತಸ್ಥರು ಯಾರೇ ಆಗಿದ್ದರು ಅವರ ಹಿಂದಿರುವವರು ಎಷ್ಟೇ ಪ್ರಭಾವಿತರಾಗಿದ್ದರು ಅವರ ಎಡೆಮುರಿ ಕಟ್ಟಿ ಕಾನೂನಿನ ವಶಕ್ಕೆ ಪಡೆದುಕೊಂಡು ತೀವ್ರವಾಗಿ ಶಿಕ್ಷೆ ಬೇಕು ಎಂದರು.

ಈ ಹಿಂದೆ ಜಮೀನು ಮನೆ ಸ್ಥಿರ ಆಸ್ತಿ ವಿಚಾರದಲ್ಲಿ ಸಣ್ಣಪುಟ್ಟ ಗಲಭೆಗಳು ಆಗುತ್ತಿತ್ತು ಕೇವಲ ದೊಣ್ಣೆ ಕಟ್ಟಿಗೆಗಳಿಂದ ಹೊಡೆದಾಡಿಕೊಂಡು ನಂತರ ಪರಿಸ್ಥಿತಿ ತಣ್ಣಗಾಗುತ್ತಿತ್ತು ಆದರೆ ಈ ರೀತಿ ಪಿಸ್ತೂಲ್ ಬಳಕೆ ಗುಂಡು ಹಾರಿಸುವುದು ಇದೆ ಪ್ರಥಮ ಬಾರಿ ಆಗಿರುವುದು ತೀವ್ರ ಆತಂಕ ತಂದ ವಿಷಯವಾಗಿದೆ ಎಂದರು. ಚಿಕ್ಕಬಳ್ಳಾಪುರ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕುಬೇರ ಅಚ್ಚು ಪ್ರತಿಭಟನಾಕಾರರನ್ನು ಉದ್ದೇಶಿಸಿ ಮಾತನಾಡಿ ಈ ಪ್ರಕರಣ ಗಂಭೀರ ಪ್ರಕರಣವಾಗಿದ್ದು ಇಲ್ಲಿ ಶಾಂತಿ ಮತ್ತು ಕಾನೂನು ಸುವ್ಯವಸ್ಥೆ ಬಲಪಡಿಸಬೇಕು ಈ ನಿಟ್ಟಿನಲ್ಲಿ ಪೊಲೀಸರು ಯಾವುದೇ ಕಾರಣಕ್ಕೂ ಈ ಪ್ರಕರಣದಲ್ಲಿ ನೇರ ಬಾಗಿಯಾದವರ ವಿರುದ್ಧ ಕನಿಕರ ತೋರಿಸದೆ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಪ್ರತಿಭಟನಾಕಾರರು ಈ ಪ್ರಕರಣದಲ್ಲಿ ಸಂಸದ ಡಾ. ಕೆ ಸುಧಾಕರ್ ಅವರ ಪಾತ್ರ ಇರುವುದು ಖಚಿತವಾಗಿದೆ ಅವರ ವಿರುದ್ಧವು ಸಹ ಹೊಲ್ಲಿಸಿಲ್ಲಕೆ ಕ್ರಮ ಕೈಗೊಳ್ಳಬೇಕು ಎಂದು ಡಾಕ್ಟರ್ ಕೆ ಸುಧಾಕರ್ ಅವರ ವಿರುದ್ಧ ದಿಕ್ಕಾರದ ಘೋಷಣೆಗಳನ್ನು ಕೂಗಿ ತಮ್ಮ ಪ್ರತಿಭಟನೆ ವ್ಯಕ್ತಪಡಿಸಿ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಅರ್ಪಿಸಿದರು.

### ರಸ್ತೆಗೆ ಕಸ ಸುರಿದು ಪೌರ ಕಾರ್ಮಿಕರಿಗೆ ನಿಂದನೆ; ದೂರು

• ಉದಯವಾಹಿನಿ, ರಾಮನಗರ

ನಗರಸಭೆಯಿಂದ ಸರಿಯಾಗಿ ಕಸ ಸಂಗ್ರಹಿಸುತ್ತಿಲ್ಲ ಎಂದು ಪೌರ ಕಾರ್ಮಿಕರನ್ನು ನಿಂದಿಸಿ ಹಲ್ಲೆಗೆ ಯತ್ನಿಸಿದ ಆರೋಪದ ಮೇಲೆ, ಅಂಗಡಿಯೊಂದರ ಮಾಲೀಕ ಹಾಗೂ ಇತರರ ವಿರುದ್ಧ ಪೌರ ಕಾರ್ಮಿಕರೊಬ್ಬರು ನಗರದ ಟೌನ್ ಪೊಲೀಸ್ ಠಾಣೆಗೆ ಶನಿವಾರ ದೂರು ಕೊಟ್ಟಿದ್ದಾರೆ. ಪೌರ ಕಾರ್ಮಿಕ ಕೊಲ್ಲಾಪುರಿ ಹೂವಾಡಿಗರ ಬೀದಿಯಲ್ಲಿ ಕಸ ಸಂಗ್ರಹಿಸಿ ವಿಲೇವಾರಿ ಮಾಡುವ ಕೆಲಸ ನಿರ್ವಹಿಸುತ್ತಿದ್ದರು. ಈ ವೇಳೆ, ಎ.ಎನ್ ಅಂಗಡಿ ಮಾಲೀಕರು, ಇತರರು, ಸರಿಯಾಗಿ ಕಸ ತೆಗೆಯುತ್ತಿಲ್ಲ ಎಂದು ಜಾತಿಸೂಚಕ ಪದಗಳನ್ನು ಬಳಸಿ ನಿಂದಿಸಿದ್ದಾರೆ. ಕಸವನ್ನು ರಸ್ತೆ ಮೇಲೆ ಸುರಿದು, ನನ್ನ ಮೇಲೂ ಎಸೆದು ಕರ್ತವ್ಯಕ್ಕೆ ಅಡ್ಡಿಪಡಿಸಿ ಬೆದರಿಕೆ ಹಾಕಿದ್ದಾರೆ ಎಂದು ಕೊಲ್ಲಾಪುರಿ ದೂರಿನಲ್ಲಿ ಆರೋಪಿಸಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿದ ಟೌನ್ ಠಾಣೆ ಪೊಲೀಸರು, ಪೌರ ಕಾರ್ಮಿಕ ಕೊಟ್ಟಿರುವ ದೂರಿನಲ್ಲಿ ಘಟನೆ ಕುರಿತು ಸರಿಯಾದ ಮಾಹಿತಿ ಇರಲಿಲ್ಲ. ಹಾಗಾಗಿ, ನಿಖರ ಮಾಹಿತಿಯೊಂದಿಗೆ ದೂರು ಕೊಡಿ ಎಂದು ಸೂಚಿಸಿದೆವು. ಸರಿ ಎಂದು ಹೋದವರು ಮತ್ತೆ ಬಂದಿಲ್ಲ' ಎಂದರು.

### ಟಿಎಪಿಸಿಎಂಎಸ್ ಗದ್ದುಗೆ ಯಾರ ಮಡಿಲಿಗೆ ಎನ್‌ಡಿಎ ಕಾಂಗ್ರೆಸ್‌ಗೆ ಮತ್ತೊಂದು ಪ್ರತಿಷ್ಠೆ ಸಮರ

# ಚಿಕ್ಕಬಳ್ಳಾಪುರ ಟಿಎಪಿಸಿಎಂಎಸ್ ಚುನಾವಣೆ ಇಂದು

• ಉದಯವಾಹಿನಿ, ಚಿಕ್ಕಬಳ್ಳಾಪುರ

ವಿಧಾನಸಭೆ ಚುನಾವಣೆ ನಂತರ ಸತತ ಸೋಲಿನ ಕಹಿಯನ್ನೇ ಕಾಣುತ್ತಿರುವ ಕಾಂಗ್ರೆಸ್ ಪಕ್ಷಕ್ಕೆ ಮತ್ತೊಂದು ಪ್ರತಿಷ್ಠಿತ ಚುನಾವಣೆಯ ಗೆಲುವಿನ ಸವಾಲು ಎದುರಾಗಿದೆ. ಕಾಂಗ್ರೆಸ್ ಪಕ್ಷದ ಹಿಡಿತದಲ್ಲಿರುವ ಟಿಎಪಿಸಿಎಂಎಸ್ ಈ ಬಾರಿ ಯಾರ ತೆಕ್ಕೆಗೆ ಸೇರಲಿದೆ ಎಂಬುದು ಕುತೂಹಲ ಕೆರಳಿಸಿದೆ. ಏ.27 ರಂದು ತಾಲ್ಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘದ ಆಡಳಿತ ಮಂಡಳಿ ನಿರ್ದೇಶಕರ ಚುನಾವಣೆ ನಗರದ ಜೂನಿಯರ್ ಕಾಲೇಜಿನಲ್ಲಿ ನಡೆಯಲಿದೆ. ನೇರವಾಗಿ ಪಕ್ಷದ ಚಿಹ್ನೆಯಡಿ ಚುನಾವಣೆಗೆ ಸ್ಪರ್ಧಿಸುವಂತಿಲ್ಲ. ಆದರೂ ಬೆಂಬಲಿತ ಅಭ್ಯರ್ಥಿಗಳೆಂದು ಕಾಂಗ್ರೆಸ್, ಬಿಜೆಪಿ-ಜೆಡಿಎಸ್ ಮೈತ್ರಿ ಪಕ್ಷಗಳ ನಡುವೆ ದೊಡ್ಡ ಮಟ್ಟದ ಚುನಾವಣೆ ಕಸರತ್ತು ನಡೆದಿದೆ.

**3558 ಮತದಾರರು:** ಷೇರುದಾರರಿಂದ ಆಯ್ಕೆಯಾಗುವ 9 ನಿರ್ದೇಶಕ ಸ್ಥಾನಗಳಿಗೆ ಬಿಜೆಪಿ-ಜೆಡಿಎಸ್ ಮೈತ್ರಿಯಿಂದ ಒಟ್ಟು 9 ಅಭ್ಯರ್ಥಿಗಳು ಕಣಕ್ಕೆ ಇಳಿದಿದ್ದಾರೆ. ಕಾಂಗ್ರೆಸ್ ಪಕ್ಷದಿಂದ 8 ಅಭ್ಯರ್ಥಿಗಳು ಸ್ಪರ್ಧೆಗೆ ಇಳಿದಿದ್ದಾರೆ. ಎರಡೂ ಪಕ್ಷಗಳಿಗೂ ಬಂಡಾಯದ ಬಿಸಿ ತಟ್ಟಿದ್ದು ಇಬ್ಬರು ಅಭ್ಯರ್ಥಿಗಳು ಯಾವ ಪಕ್ಷದ ಬೆಂಬಲ ಇಲ್ಲದೆ ಸ್ವತಂತ್ರವಾಗಿ ಸ್ಪರ್ಧೆಗೆ ಇಳಿದಿದ್ದಾರೆ. ಷೇರುದಾರರಿಂದ ಆಯ್ಕೆಯಾಗುವ 9 ಸ್ಥಾನಗಳಿಗೆ 3,558 ಮಂದಿ ಮತದಾರರು ಮತ ಚಲಾವಣೆ ಮಾಡಲು ಅರ್ಹರಾಗಿದ್ದಾರೆ.

**ಸಹಕಾರ ಸಂಘಗಳಲ್ಲಿ ಮೈತ್ರಿ ಬಲ:** ವ್ಯವಸಾಯೋತ್ಪನ್ನ ಸಹಕಾರ ಸಂಘಗಳಿಂದ 5 ನಿರ್ದೇಶಕ ಆಯ್ಕೆಗೆ ಅವಕಾಶವಿದ್ದು ಬಿಜೆಪಿ-ಜೆಡಿಎಸ್ ಮೈತ್ರಿ ಬೆಂಬಲಿತರಾಗಿ 7, ಕಾಂಗ್ರೆಸ್ ಬೆಂಬಲಿತರಾಗಿ ಒಬ್ಬರು ಸ್ಪರ್ಧೆಯಲ್ಲಿದ್ದಾರೆ. ಒಟ್ಟು 15 ಸಹಕಾರ ಸಂಘಗಳ ಪ್ರತಿನಿಧಿಗಳು ಮತ ಚಲಾವಣೆ ಮಾಡಲಿದ್ದು, ಕಾಂಗ್ರೆಸ್‌ನಿಂದ ಒಬ್ಬರೇ ಸ್ಪರ್ಧೆಯಲ್ಲಿಇರುವುದರಿಂದ ಮತದಾನದ ದಿನ ಬಿಜೆಪಿ 5 ಮಂದಿಯನ್ನು ಅಂತಿಮಗೊಳಿಸುವ ಸಾಧ್ಯತೆ ಇದೆ. 15 ಸಹಕಾರ ಸಂಘಗಳ ಪೈಕಿ 12 ಸಹಕಾರ ಸಂಘಗಳಲ್ಲಿ ಮೈತ್ರಿ ಪಕ್ಷದ ಬೆಂಬಲಿತರು ಅಧಿಕಾರದಲ್ಲಿದ್ದಾರೆ.

**ಕಾಂಗ್ರೆಸ್ ಕಸರತ್ತು:** ಪ್ರತಿಷ್ಠಿತ ಪಿಎಲ್‌ಡಿ ಬ್ಯಾಂಕ್ ಚುನಾವಣೆ, ನಗರಸಭೆ ಅಧ್ಯಕ್ಷ-ಉಪಾಧ್ಯಕ್ಷ ಚುನಾವಣೆಯಲ್ಲೂ ಕೈಸುಟ್ಟು ಕೊಂಡಿರುವ ಕಾಂಗ್ರೆಸ್ ಪಕ್ಷ ಟಿಎಪಿಸಿಎಂಎಸ್‌ನಲ್ಲಿ ತನ್ನ ಪಾರುಪತ್ಯ ಮುಂದುವರಿಸಲು ಹೊರಟಿದೆ. ಕಾಂಗ್ರೆಸ್ ಪಾಳಯದಲ್ಲಿಈಗಾಗಲೇ ಹಲವು ಸುತ್ತಿನ ಸಭೆಗಳು ನಡೆದಿವೆ. ಶಾಸಕ ಪ್ರದೀಪ್ ಈಶ್ವರ್ ನೇತೃತ್ವದಲ್ಲಿಸಭೆ ನಡೆಸಿದ್ದು, ಮುಖಂಡರಿಗೆ ಚುನಾವಣೆ ನಡೆಸುವ ಜವಾಬ್ದಾರಿ ನೀಡಿದ್ದಾರೆ. ಆದರೆ ಸಂಪನ್ಮೂಲದ್ದೇ ಈಗ ಮುಖಂಡರಿಗೆ ದೊಡ್ಡ ತಲೆನೋವಾಗಿ ಪರಿಣಮಿಸಿದೆ.

**ಕ್ಲೀನ್‌ಸ್ವೀಪ್ ಗುರಿ:** ಬಿಜೆಪಿ - ಜೆಡಿಎಸ್ ಪಾಳಯದಲ್ಲಿಈಗಾಗಲೇ ನಾನಾ ಸಭೆಗಳನ್ನು ನಡೆಸಿದ್ದು, ಕ್ಲೀನ್ ಸ್ವೀಪ್ ಮಾಡುವ ತಯಾರಿ ನಡೆಸಿದ್ದಾರೆ. ಹಲವು ಸುತ್ತಿನ ಸಭೆಗಳನ್ನು ಮಾಡಿ ಟಿಎಪಿಸಿಎಂಎಸ್‌ನ ಪ್ರತಿ ಮತದಾರರನ್ನು ಭೇಟಿ ಮಾಡಿ ಮನವೊಲಿಸುವ ಕಸರತ್ತು ನಡೆದಿದೆ. ಸಂಸದ ಡಾ.ಕೆ.ಸುಧಾಕರ್ ಅವರೇ ಮುಖಂಡರ ಸಭೆಗಳನ್ನು ನಡೆಸಿ ತಾವೇ ಖುದ್ದು ನಿಗಾ ವಹಿಸಿದ್ದು ಟಿಎಪಿಸಿಎಂಎಸ್ ತಮ್ಮ ತೆಕ್ಕೆಗೆ ತೆಗೆದುಕೊಳ್ಳುವ ವಿಶ್ವಾಸದಲ್ಲಿದ್ದಾರೆ.


ಉದಯವಾಹಿನಿ ಚಿತ್ರ

**ಕಾಂಗ್ರೆಸ್ ಉಳಿಸಿಕೊಳ್ಳುತ್ತಾ? ಮೈತ್ರಿ ಗೆದ್ದು ಬೀಗುತ್ತಾ?**

> **ಬಿಜೆಪಿ - ಜೆಡಿಎಸ್ ಮೈತ್ರಿ ಬೆಂಬಲದಿಂದ ಸ್ಪರ್ಧಿಸಿರುವ ಅಷ್ಟೂ ಅಭ್ಯರ್ಥಿಗಳು ಜಯಗಳಿಸಬೇಕು. ಟಿಎಪಿಸಿಎಂಎಸ್ ಚುನಾವಣೆಯಲ್ಲಿನಮ್ಮ ಬೆಂಬಲಿತರ ಗೆಲುವಿಗೆ ಪ್ರತಿಯೊಬ್ಬರೂ ಶ್ರಮಿಸಬೇಕು. ಆ ನಿಟ್ಟಿನಲ್ಲಿಈಗಾಗಲೇ ಹಲವು ಸಭೆಗಳನ್ನು ನಡೆಸಲಾಗಿದ್ದು, ನಮ್ಮ ಅಭ್ಯರ್ಥಿಗಳೆಲ್ಲರೂ ಜಯಗಳಿಸುವ ವಿಶ್ವಾಸವಿದೆ**
>
> **-ಡಾ.ಕೆ.ಸುಧಾಕರ್, ಸಂಸದ**

**ಜೆಡಿಎಸ್‌ಗೆ 3 ಸ್ಥಾನ**

**ಒಟ್ಟು 14 ನಿರ್ದೇಶಕ ಸ್ಥಾನಗಳ ಪೈಕಿ ಜೆಡಿಎಸ್ 5-6 ಸೀಟುಗಳಿಗೆ ಬೇಡಿಕೆ ಇಟ್ಟಿತ್ತು. ಕೊನೆಗೆ 3 ಸ್ಥಾನ ಬಿಟ್ಟು ಕೊಟ್ಟಿದ್ದು, ಸಹಕಾರ ಸಂಘ ಸಂಸ್ಥೆಗಳ 'ಎ' ವರ್ಗದಲ್ಲಿ ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಕೊಳವನಹಳ್ಳಿ ಮುನಿರಾಜು, ಷೇರುದಾರರಿಂದ ಆಯ್ಕೆಯಾಗುವ ಮಹಿಳಾ ಮೀಸಲು ಕ್ಷೇತ್ರದಿಂದ ಅಡ್ಡಗಲ್ ಸುಮ, ಹಿಂದುಳಿದ ವರ್ಗ 'ಎ' ಕ್ಷೇತ್ರದಿಂದ ಜಕ್ಕಲಮಡಗು ಎಂ.ಲಕ್ಷ್ಮೀನರಸಪ್ಪ ಸ್ಪರ್ಧೆಯಲ್ಲಿದ್ದಾರೆ. ಈಗಾಗಲೇ ಹಲವಾರು ಸಭೆಗಳನ್ನು ಮಾಡಿದ್ದೇವೆ. ಮತದಾರರ ಮನೆ ಮನೆಗೂ ಭೇಟಿ ನೀಡಿ ಮತಯಾಚನೆ ಮಾಡಿದ್ದೇವೆ. ಈ ಬಾರಿಯೂ ಮತದಾರರು ನಮ್ಮ ಬೆಂಬಲಿತ ಅಭ್ಯರ್ಥಿಗಳ ಕೈಹಿಡಿಯುವ ನಿರೀಕ್ಷೆ ಇದೆ.**

### ಪಹಲ್ಗಾಮ್ ಕೃತ್ಯ ಖಂಡಿಸಿ ತುರುವೇಕೆರೆಯಲ್ಲಿ ಶಾಂತಿ ಮೆರವಣಿಗೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ತುರುವೇಕೆರೆ

ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದನಾ ಕೃತ್ಯ ಖಂಡನೀಯ. ಕೃತ್ಯಕ್ಕೆ ಕುಮ್ಮಕ್ಕು ನೀಡಿರುವ ಪಾಕಿಸ್ತಾನದ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಇದು ಸಕಾಲ ಎಂದು ಪಟ್ಟಣದಲ್ಲಿ ಪ್ರತಿಭಟನಾ ನಿರತರು ಆಗ್ರಹಿಸಿದರು. ಪಟ್ಟಣದಲ್ಲಿರುವ ನಾಲ್ಕು ಮಸೀದಿಗಳಲ್ಲಿ ಶುಕ್ರವಾರದ ಪ್ರಾರ್ಥನೆ ನಂತರ ಬಾಣಸಂದ್ರ ವೃತ್ತದಲ್ಲಿ ಸಮಾವೇಶಗೊಂಡ ನೂರಾರು ಮುಸ್ಲಿಂಮರು ತಹಶೀಲ್ದಾರ್‌ಗೆ ಮನವಿ ಸಲ್ಲಿಸಿದರು.

ಮುಸ್ಲಿಂ ಮುಖಂಡ ಜಫ್ರುಲ್ಲಾ ಮಾತನಾಡಿ, ದೇಶದ ಏಕತೆಗೆ ಧಕ್ಕೆ ಬಂದರೆ ಕೈಕಟ್ಟಿ ಕೂರುವ ಪ್ರಶ್ನೆಯೇ ಇಲ್ಲ. ಕಾಶ್ಮೀರದಲ್ಲಿ ನಡೆದ ಕೃತ್ಯ ನಾಗರಿಕರನ್ನು ತಲೆತಗ್ಗಿಸುವಂತೆ ಮಾಡಿದೆ. ಇದೊಂದು ಅನಾಗರಿಕರು ಮಾಡುವ ಕೃತ್ಯ. ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಬಾಣಸಂದ್ರ ರಸ್ತೆ ವೃತ್ತದಿಂದ ತಾಲ್ಲೂಕು ಕಚೇರಿವರೆಗೆ ಪ್ರತಿಭಟನೆ ಮಾಡಿದರು. ಒಂದು ನಿಮಿಷ ಸಂತಾಪ ಸೂಚಿಸಲಾಯಿತು.

# ಶೋಷಣೆ ನೀಗಲು ಸಮಾಜವಾದಿ ಕ್ರಾಂತಿ ಅನಿವಾರ್ಯ: ಎಐಡಿಎಸ್ಒ

• ಉದಯವಾಹಿನಿ ಹಾಸನ

ಭಗತ್ ಸಿಂಗ್ ಮತ್ತು ನೇತಾಜಿ ಅವರ ಕನಸಿನ ಸಮಾಜವಾದಿ ಭಾರತ ನಿರ್ಮಿಸಲು ಸಜ್ಜಾಗಬೇಕಿದೆ. ಶೋಷಣೆ ಸಂಪೂರ್ಣವಾಗಿ ನಿರ್ಮೂಲನೆ ಮಾಡಬೇಕೆಂಬುದು ಅವರ ನಿಲುವಾಗಿತ್ತು ಎಂದು ಎಐಡಿಎಸ್ ಒ ರಾಜ್ಯ ಘಟಕದ ಉಪಾಧ್ಯಕ್ಷೆ ಸಿ.ಎಂ. ಅಪೂರ್ವಾ ತಿಳಿಸಿದರು.

ವ್ಯಕ್ತಿತ್ವ ವಿಕಸನ ಶಿಬಿರ

ನಗರದ ಎಐಡಿಎಸ್ಒ ಕಚೇರಿಯ ವಿದ್ಯಾಸಾಗರ್ ಹಾಲ್‌ನಲ್ಲಿ ಆರಂಭವಾದ ಎರಡು ದಿನಗಳ ಜಿಲ್ಲಾ ಮಟ್ಟದ ವ್ಯಕ್ತಿತ್ವ ವಿಕಸನ ಶಿಬಿರದಲ್ಲಿ ಅವರು ಮಾತನಾಡಿದರು. ಶಿಕ್ಷಣದ ವ್ಯಾಪಾರೀಕರಣ. ಹೆಣ್ಣು ಮಕ್ಕಳ ಮೇಲಿನ ಅಪರಾಧಗಳು, ರೈತ ಕಾರ್ಮಿಕರ ಸಾವು ಮಿತಿಮೀರಿದೆ. ಈ ಎಲ್ಲಾ ಸಮಸ್ಯೆ ತೊಡೆದು ಹಾಕಬೇಕಾದರೆ, ಸಮಾಜವಾದಿ ಭಾರತದಿಂದ ಮಾತ್ರವೇ ಸಾಧ್ಯ ಎಂದು ಭಗತ್ ಸಿಂಗ್ ಮತ್ತು ನೇತಾಜಿ ನಂಬಿದ್ದರು. ಅವರ ಕನಸಿನ ಭಾರತ ನಿರ್ಮಾಣ ಮಾಡಲು ವಿದ್ಯಾರ್ಥಿ ಯುವ ಸಮುದಾಯ ಸಜ್ಜಾಗಬೇಕು' ಎಂದು ಸಲಹೆ ನೀಡಿದರು.

ಭಾರತದ ನವೋದಯ ಕಾಲದಲ್ಲಿ ವಿದ್ಯಾಸಾಗರ್, ರಾಜಾರಾಮ್ ಮೋಹನ್ ರಾಯ್, ಸಾವಿತ್ರಿ ಬಾಯಿ ಫುಲೆ, ಜ್ಯೋತಿರಾವ್ ಫುಲೆ ಇದ್ದರು. ಭಾರತದ ಸ್ವಾತಂತ್ರ್ಯ ಚಳವಳಿಯಲ್ಲಿ ಮುಂಚೂಣಿಯಲ್ಲಿದ್ದ ನೇತಾಜಿ ಮತ್ತು ಭಗತ್ ಸಿಂಗ್ ಸ್ವಾತಂತ್ರ್ಯ ಸಂಗ್ರಾಮದ ನೈಜ ಗುರಿಯನ್ನು ನಿಖರವಾಗಿ ಸಾರಿದ್ದರು. ರಷ್ಯಾದಲ್ಲಿ ನಡೆದ ಕ್ರಾಂತಿ, ಭಾರತದ ಕ್ರಾಂತಿಕಾರಿಗಳ ಮೇಲೆ ಗಾಢ ಪ್ರಭಾವ ಬೀರಿತ್ತು. ಭಗತ್ ಸಿಂಗ್ ಮತ್ತು ನೇತಾಜಿ ಇಬ್ಬರೂ ರಷ್ಯಾ ಮಾದರಿ ಸಮಾಜವಾದಿ ಭಾರತ ನಿರ್ಮಿಸಬೇಕೆಂಬ ಆಶಯ ಹೊಂದಿದ್ದರು. ಮಾನವನಿಂದ, ಮಾನವನ ಶೋಷಣೆ ಸಂಪೂರ್ಣವಾಗಿ ನಿರ್ಮೂಲನೆ ಮಾಡಬೇಕೆಂಬುದು ಅವರ ನಿಲುವಾಗಿತ್ತು. ಭಾರತದಲ್ಲಿ ಕ್ರಾಂತಿ ನೆರವೇರಬೇಕು. ಆ ಕ್ರಾಂತಿಯನ್ನು ಕಾರ್ಮಿಕರು ಮತ್ತು ರೈತರು ನೆರವೇರಿಸಬೇಕೆಂದು ಅವರು ಕನಸನ್ನು ಕಂಡಿದ್ದರು' ಎಂದು ವಿವರಿಸಿದರು. ಅವರ ಕನಸು ಕನಸಾಗಿಯೇ ಉಳಿದಿದೆ.


ಉದಯವಾಹಿನಿ ಚಿತ್ರ

ಯಾವ ಕ್ರಾಂತಿ, ಜನತೆಗೆ ಸ್ವಾತಂತ್ರ್ಯವನ್ನು ತಂದುಕೊಟ್ಟು ಶೋಷಣೆ ಅಸಾಧ್ಯಗೊಳಿಸುತ್ತದೆಯೋ, ಅಂತಹ ಕ್ರಾಂತಿಯ ಸಂದೇಶವನ್ನು ವಿದ್ಯಾರ್ಥಿಗಳು ಹಾಗೂ ಯುವಜನರು ದೇಶದ ಮೂಲೆಮೂಲೆಗೂ ಒಯ್ಯಬೇಕು. ಕೋಟ್ಯಂತರ ಮರ್ದಿತ ಜನರಿಗೆ ತಲುಪಿಸಬೇಕು. ಶೋಷಣೆಗೆ ಮುಕ್ತಾಯ ಹಾಡಲು ಸಮಾಜವಾದಿ ಕ್ರಾಂತಿ ಅನಿವಾರ್ಯ ಎಂದು ಭಗತ್ ಸಿಂಗ್ ನಂಬಿದ್ದರು' ಎಂದು ಹೇಳಿದರು.

## ಒಂದು ಬೈಕ್ ಕಳ್ಳತನ: 16 ಬೈಕ್ ಕಳವು, ಪ್ರಕರಣ ಬಯಲಿಗೆ

• ಉದಯವಾಹಿನಿ ಶಿಕಾರಿಪುರ

ಪಟ್ಟಣದಲ್ಲಿ ನಡೆದ ಬೈಕ್ ಕಳವು ಪ್ರಕರಣ ಬೇಧಿಸಲು ಹೊರಟ ಪೊಲೀಸರಿಗೆ 16 ಬೈಕ್ ಕಳವು ಪ್ರಕರಣ ಬೆಳಕಿಗೆ ಬಂದಿದ್ದು, 20.5 ಲಕ್ಷ ಮೌಲ್ಯದ 16 ಬೈಕ್‌ಗಳನ್ನು ವಶಕ್ಕೆ ಪಡೆಯಲಾಗಿದೆ.

ತರೀಕೆರೆ ತಾಲ್ಲೂಕು ದೊಡ್ಡಲಿಂಗೇನಹಳ್ಳಿಯ ಪ್ರತಾಪ್ (33), ಜಗಳೂರು ತಾಲ್ಲೂಕು ಬಿಳಚೋಡು ಗ್ರಾಮದ ಭೋಜರಾಜ (32) ಬಂಧಿತರು. ಪಟ್ಟಣದ ಸುಬೇದಾರ್ ಕೇರಿ ನಿವಾಸಿ ಫೈಜಾನ್‌ಬಾಷಾ ಅವರ ಪಲ್ಸರ್ ಬೈಕ್ ಈಚೆಗೆ ಕಳವಾಗಿತ್ತು. ಆರೋಪಿಗಳು ಅದನ್ನು ಕದ್ದೊಯ್ಯುವಾಗ ರಾತ್ರಿ ಬೀಟ್‌ನಲ್ಲಿದ್ದ ಪಟ್ಟಣ ಠಾಣೆ ಪಿಎಸ್ಐ ಶರತ್ ಹಾಗೂ ಸಿಬ್ಬಂದಿ ಅನುಮಾನದ ಮೇಲೆ ವಿಚಾರಣೆ ನಡೆಸಿದಾಗ, ಕಳ್ಳತನ ಪ್ರಕರಣ ಬಯಲಿಗೆ ಬಂದಿದೆ.

ಆರೋಪಿಗಳನ್ನು ಬಂಧಿಸಿ ವಿಚಾರಣೆ ಒಳಪಡಿಸಿದಾಗ, ಆರೋಪಿಗಳಿಬ್ಬರು 16 ಬೈಕ್ ಕಳ್ಳತನ ಪ್ರಕರಣದಲ್ಲಿ ಭಾಗಿಯಾಗಿರುವುದು ಬೆಳಕಿಗೆ ಬಂದಿದೆ. ಎಲ್ಲಾ ಪ್ರಕರಣಗಳ ಬೈಕ್‌ಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಪಟ್ಟಣದಲ್ಲಿ ಕಳ್ಳತನವಾದ ಬೈಕ್ ಪಲ್ಸರ್ ಆಗಿದ್ದರೆ, ಇನ್ನುಳಿದವು ಬುಲೆಟ್ ಬೈಕ್‌ಗಳಾಗಿರುವುದು ವಿಶೇಷ.

ಅರಸೀಕರೆ, ತರೀಕೆರೆ, ಚನ್ನರಾಯಪಟ್ಟಣ, ಶಿರಾ. ಚಿತ್ರದುರ್ಗ, ಜಗಳೂರು, ಕೂಡ್ಲಿಗಿ, ಕೊಟ್ಟೂರು, ಹಗರಿಬೊಮ್ಮನಹಳ್ಳಿ, ಹೊಸಪೇಟೆ, ಬೆಂಡಗೆರೆ, ಮುನಿರಾಬಾದ್, ಮುಂಡರಗಿ, ಹೂವಿನಹಡಗಲಿ ಠಾಣೆಯಲ್ಲಿ ಬೈಕ್ ಕಳ್ಳತನ ಪ್ರಕರಣ ದಾಖಲಾಗಿವೆ. ಡಿವೈಎಸ್‌ಪಿ ಕೇಶವ್, ವೃತ್ತ ನಿರೀಕ್ಷ ರುದ್ರೇಶ್ ಮಾರ್ಗದರ್ಶನದಲ್ಲಿ ಪ್ರಕರಣ ತನಿಖೆ ಕೈಗೊಳ್ಳಲಾಗಿತ್ತು. ತನಿಖಾ ತಂಡದ ಕಾರ್ಯಕ್ಕೆ ಶಿವಮೊಗ್ಗ ಎಸ್‌ಪಿ ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

### ಜಮೀನಿನ ಬಹುಪಾಲು ಪ್ರದೇಶವನ್ನು ಕೊಳಚೆ ನೀರು ಆವರಿಸಿಕೊಳ್ಳುತ್ತಿದ್ದು, ಮಣ್ಣಿನ ಫಲವತ್ತತೆ ಕ್ಷೀಣಿಸುತ್ತಿದೆ

# ಸವಣೂರಿನ ಕೊಳಚೆ: ಜಮೀನು–ಕೆರೆಯಲ್ಲಿ 'ವಿಷ', ಸಾಂಕ್ರಾಮಿಕ ರೋಗದ ಭೀತಿ

• ಉದಯವಾಹಿನಿ ಹಾವೇರಿ

ಜಿಲ್ಲೆಯ ಸವಣೂರು ಪಟ್ಟಣದಲ್ಲಿ ಸಂಗ್ರಹವಾಗುವ ಕೊಳಚೆ ನೀರನ್ನು ಗಟಾರಗಳ ಮೂಲಕ ತ್ಯಾಜ್ಯದ ಸಮೇತ ನೇರವಾಗಿ ಹೊರಗೆ ಬಿಡಲಾಗುತ್ತಿದ್ದು, ಅದೇ ನೀರು ಜಮೀನು ಹಾಗೂ ಕೆರೆ ಸೇರಿ ಅಲ್ಲಿಯ ನೀರು ಸಹ ವಿಷಮಯವಾಗುತ್ತಿದೆ.

ಕೊಳಚೆ ನೀರು ಸಂಸ್ಕರಣೆ ಹಾಗೂ ಸೂಕ್ತ ರೀತಿಯ ವಿಲೇವಾರಿಗೆ ಯೋಜನೆ ರೂಪಿಸುವಂತೆ ಹಲವು ವರ್ಷಗಳಿಂದ ಜನರು ಆಗ್ರಹಿಸುತ್ತಿದ್ದು. ಅವರ ಯಾತನೆಗೆ ಇದುವರೆಗೂ ಪರಿಹಾರ ಸಿಕ್ಕಿಲ್ಲ. ಸುಮಾರು 5.49 ಚ. ಕಿ.ಮೀ ವಿಸ್ತೀರ್ಣ ಹೊಂದಿರುವ ಸವಣೂರು ಪಟ್ಟಣದ ಮನೆಗಳು ಹಾಗೂ ಇತರೆ ಸ್ಥಳಗಳಿಂದ. ಕೊಳಚೆ ನೀರನ್ನು ಗಟಾರುಗಳ ಮೂಲಕ ಹೊರಗೆ ಬಿಡಲಾಗುತ್ತಿದೆ. ಮೋತಿ ತಲಾಬ್ ಕೆರೆಗೆ ಹೊಂದಿಕೊಂಡು ಹಾಗೂ ಅಕ್ಕ ಪಕ್ಕದ ಸ್ಥಳದಲ್ಲಿ ದೊಡ್ಡ ಗಟಾರ ನಿರ್ಮಿಸಲಾಗಿದೆ. ಅದೇ ಗಟಾರ ನೀರು, ಸಮೀಪದ ಹುರುಳಿಕುಪ್ಪಿ ಗ್ರಾಮದ ದೊಡ್ಡ ಕೆರೆ ಹಾಗೂ ಅಕ್ಕ ಪಕ್ಕದ ಸಣ್ಣ ಕೆರೆಗಳಿಗೆ ಸೇರುತ್ತಿದೆ.

ಸವಣೂರಿನಿಂದ ಹುರಳಿಕುಪ್ಪಿ ಗ್ರಾಮದ ನಡುವಿನ ಪ್ರದೇಶದಲ್ಲಿರುವ ಜಮೀನುಗಳಿಗೂ ಕೊಳಚೆ ನೀರು ನುಗ್ಗುತ್ತಿದೆ. ಜಮೀನಿನಲ್ಲಿ ಬೆಳೆದಿರುವ ಎಲೆಬಳ್ಳಿ, ಗೋವಿನ ಜೋಳ ಹಾಗೂ ಇತರೆ ಬೆಳೆಯು ವಿವಿಧ ರೋಗಗಳಿಗೆ ತುತ್ತಾಗಿ ಇಳುವರಿ ಕಡಿಮೆಯಾಗುತ್ತಿದೆ. ಜಮೀನಿನ ಬಹುಪಾಲು ಪ್ರದೇಶವನ್ನು ಕೊಳಚೆ ನೀರು ಆವರಿಸಿಕೊಳ್ಳುತ್ತಿದ್ದು, ಇದರಿಂದ ಮಣ್ಣಿನ ಫಲವತ್ತತೆ ನಿಧಾನವಾಗಿ ಕ್ಷೀಣಿಸುತ್ತಿದೆ. ಕೊಳಚೆ ನೀರಿನ ಜೊತೆಯಲ್ಲಿ ಪ್ಲಾಸ್ಟಿಕ್ ಹಾಗೂ ಇತರೆ ತ್ಯಾಜ್ಯವೂ ಹೆಚ್ಚಿನ ಪ್ರಮಾಣದಲ್ಲಿ ಕೆರೆಗೆ ಸೇರುತ್ತಿದೆ. ಕೊಳಚೆ ನೀರಿನಿಂದ ಬೇಸತ್ತಿರುವ ಜಮೀನುಗಳ ಮಾಲೀಕರು ಹಾಗೂ ಹುರುಳಿಕುಪ್ಪಿ ಗ್ರಾಮಸ್ಥರು, ನಮ್ಮೂರಿಗೆ ಕೊಳಚೆ ನೀರು ಬಾರದಂತೆ ತಡೆಯಿರಿ' ಎಂದು ಸವಣೂರು ಪುರಸಭೆ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳಿಗೆ ಪದೇ ಪದೇ ಮನವಿ ಸಲ್ಲಿಸುತ್ತಿದ್ದಾರೆ. ಏನಾದರೂ ಹೊಸ ಯೋಜನೆ ಮಾಡೋಣ' ಎನ್ನುತ್ತಲೇ ಅಧಿಕಾರಿಗಳು ಜನಪ್ರತಿನಿಧಿಗಳು ದಿನದೂಡುತ್ತಿದ್ದಾರೆ.


ಉದಯವಾಹಿನಿ ಚಿತ್ರ

ಶಾಸಕರಿಗೆ ಹಲವು ಬಾರಿ ಮನವಿ

ಮಳೆಗಾಲದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಕೊಳಚೆ ನೀರು ಸಂಗ್ರಹವಾಗಿ ಗಟಾರದ ಮೂಲಕ ಹರಿಯುತ್ತದೆ. ಚಳಿಗಾಲ ಹಾಗೂ ಬೇಸಿಗೆ ಕಾಲದಲ್ಲಿಯೂ ಕೊಳಚೆ ನೀರಿನ ಹರಿಯುವಿಕೆಯೂ ಕಂಡುಬರುತ್ತದೆ. ಎಲ್ಲಾ ಕಾಲದಲ್ಲಿಯೂ ಕೊಳಚೆ ನೀರು ಜಮೀನು ಹಾಗೂ ಕೆರೆಯತ್ತ ಹರಿಯುತ್ತಿರುವುದರಿಂದ, ಗುಣಮಟ್ಟದ ಜಮೀನು ಹಾಗೂ ಕೆರೆಯ ನೀರು ಸಹ ವಿಷವಾಗುತ್ತಿರುವುದಾಗಿ ಗ್ರಾಮಸ್ಥರು ಆತಂಕ ವ್ಯಕ್ತಪಡಿಸುತ್ತಿದ್ದಾರೆ.

ಸವಣೂರು ಪಟ್ಟಣದಿಂದ ಸುಮಾರು 10 ವರ್ಷಗಳಿಂದ ಕೊಳಚೆ ನೀರನ್ನು ನಮ್ಮೂರಿನತ್ತ ಬಿಡುತ್ತಿದ್ದಾರೆ. ಇದನ್ನು ಶಾಶ್ವತವಾಗಿ ತಡೆಯುವಂತೆ ಪ್ರತಿ ಬಾರಿಯೂ ಆಗ್ರಹಿಸುತ್ತಿದ್ದೇವೆ. ನಮ್ಮ ಮನವಿಗೆ ಯಾರೊಬ್ಬರೂ ಸ್ಪಂದಿಸುತ್ತಿಲ್ಲ' ಎಂದು ಹುರುಳಿಕುಪ್ಪಿ ಗ್ರಾಮಸ್ಥರು ದೂರಿದರು.

ಮಾಜಿ ಮುಖ್ಯಮಂತ್ರಿಯೂ ಆಗಿರುವ ಶಿಗ್ಗಾವಿ ಸವಣೂರು ವಿಧಾನಸಭಾ ಕ್ಷೇತ್ರದ ಹಿಂದಿನ ಶಾಸಕ ಬಸವರಾಜ ಬೊಮ್ಮಾಯಿ ಅವರಿಗೆ ಹಲವು ಬಾರಿ ಮನವಿ ಸಲ್ಲಿಸಲಾಗಿತ್ತು. ಆದರೆ, ಅವರು ಯಾವುದೇ ಕ್ರಮ ಕೈಗೊಳ್ಳಲಿಲ್ಲ. ಈಗ ಹೊಸದಾಗಿ ಶಾಸಕರಾಗಿರುವ ಯಾಸೀರ ಅಹ್ಮದ್ ಖಾನ್ ಪಠಾಣ ಅವರಿಗೂ ಮನವಿ ಸಲ್ಲಿಸಲಾಗಿದೆ.

ಪುರಸಭೆ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳಿಗೆ ಆಗಾಗ ಮಾಹಿತಿ ನೀಡುತ್ತಲೇ ಇದ್ದೇವೆ. ಪರಿಹಾರ ಮಾತ್ರ ಸಿಕ್ಕಿಲ್ಲ' ಎಂದು ಅಳಲು ತೋಡಿಕೊಂಡರು. 'ಪ್ರತಿ ಚುನಾವಣೆ ಸಂದರ್ಭದಲ್ಲೂ ಅಭ್ಯರ್ಥಿಗಳ ಎದುರು ಕೊಳಚೆ ನೀರು ತಡೆಯುವ ಬೇಡಿಕೆ ಮುಂದಿಡಲಾಗುತ್ತಿದೆ. ಆಯ್ಕೆಯಾದರೆ ಸಮಸ್ಯೆ ಬಗೆಹರಿಸುವುದಾಗಿ ಹೇಳುವ ಜನಪ್ರತಿನಿಧಿಗಳು, ಅದಾದ ನಂತರ ಸಮಸ್ಯೆಯನ್ನೇ ಮರೆಯುತ್ತಿದ್ದಾರೆ. ಇದರಿಂದ ಗ್ರಾಮಸ್ಥರು ಸಾಕಷ್ಟು ಸಮಸ್ಯೆ ಅನುಭವಿಸುವಂತಾಗಿದೆ' ಎಂದು ಹೇಳಿದರು.

**ಎಸ್‌ಟಿಪಿ ಘಟಕಕ್ಕೆ 10 ಎಕರೆ ಜಾಗ**

'ಸವಣೂರಿನಲ್ಲಿ ವ್ಯವಸ್ಥಿತವಾಗಿ ಒಳಚರಂಡಿ ವ್ಯವಸ್ಥೆ ರೂಪಿಸಲು ಸದ್ಯದಲ್ಲೇ ಕೆಲಸ ಆರಂಭವಾಗಲಿದೆ. ಕೊಳಚೆ ನೀರು ಶುದ್ಧೀಕರಣ ಘಟಕ (ಎಸ್‌ಪಿ) ನಿರ್ಮಾಣಕ್ಕೆ ಕಳಲಗೊಂಡ ಬಳಿ 10 ಎಕರೆ ಜಮೀನು ಪಡೆಯಲಾಗಿದೆ' ಎಂದು ಸವಣೂರು ಪುರಸಭೆ ಮುಖ್ಯಾಧಿಕಾರಿ ನೀಲಪ್ಪ ಹಾದಿಮನಿ ತಿಳಿಸಿದರು. ಕೊಳಚೆ ನೀರು ಸಮಸ್ಯೆ ಬಗ್ಗೆ ಪ್ರತಿಕ್ರಿಯಿಸಿದ ಅವರು 'ಹುರುಳಿಕುಪ್ಪಿ ಗ್ರಾಮದತ್ತ ಕೊಳಚೆ ನೀರು ಹರಿಯುವುದು ಗಮನದಲ್ಲಿದೆ. ಹಲವು ವರ್ಷಗಳಿಂದ ಈ ಸಮಸ್ಯೆಯಿದ್ದು ಇದಕ್ಕೆ ಪರಿಹಾರ ಕಂಡುಕೊಳ್ಳಲು ಯೋಜನೆ ರೂಪಿಸಲಾಗಿದೆ' ಎಂದರು. 'ಸವಣೂರಿನ ಒಳಚರಂಡಿ ನೀರನ್ನು ಎಸ್‌ಟಿಪಿಗೆ ಹರಿಸಲಾಗುವುದು. ಅಲ್ಲಿಯೇ ಕೊಳಚೆ ನೀರು ಶುದ್ಧೀಕರಣ ಮಾಡಲಾಗುವುದು. ಅದರಿಂದ ಹೊರ ಬಂದ ನೀರು ಕೃಷಿಗೆ ಯೋಗ್ಯವಾಗಿದ್ದರೆ ಅದನ್ನು ಕಾಲುವೆಗಳ ಮೂಲಕ ಜಮೀನುಗಳಿಗೆ ಹರಿಸಲಾಗುವುದು' ಎಂದು ಹೇಳಿದರು.

**ಸುಮಾರು 130 ಕಿ.ಮೀ. ಗಟಾರ**

'ಸವಣೂರು ಪಟ್ಟಣದ ಒಳಭಾಗದಲ್ಲಿ ಸುಮಾರು 130 ಕಿ.ಮೀ. ಗಟಾರ ನಿರ್ಮಿಸಲಾಗಿದೆ. ಇದರಲ್ಲಿ ಸಂಗ್ರಹವಾಗುವ ಬಹುಪಾಲು ನೀರನ್ನು ಹುರುಳಿಕುಪ್ಪಿ ಗ್ರಾಮದತ್ತ ಬಿಡಲಾಗುತ್ತಿದೆ' ಎಂದು ಗ್ರಾಮಸ್ಥರು ಹೇಳಿದರು. ಕಲ್ಯಾಣ ಮಂಟಪಗಳಿವೆ, ಮೀನು ಮಾಂಸದ ಮಾರುಕಟ್ಟೆಯೂ ಇದೆ. ನಿತ್ಯವೂ ಹೆಚ್ಚಿನ ಪ್ರಮಾಣದಲ್ಲಿ ತ್ಯಾಜ್ಯ ಉತ್ಪಾದನೆಯಾಗುತ್ತದೆ. ಕೊಳಚೆ ನೀರಿನ ಜೊತೆಯಲ್ಲಿ ತ್ಯಾಜ್ಯವೂ ಹುರುಳಿಕುಪ್ಪಿ ಗ್ರಾಮದತ್ತ ಬರುತ್ತಿದೆ' ಎಂದು ಗ್ರಾಮಸ್ಥರು ತಿಳಿಸಿದರು.

## 7ನೇ ಸುತ್ತಿನ ಕಾಲುಬಾಯಿ ರೋಗ ಲಸಿಕಾ ಅಭಿಯಾನದ ಪೋಸ್ಟರ್ ಬಿಡುಗಡೆ

• ಉದಯವಾಹಿನಿ ಕಾರಟಗಿ

ತಾಲ್ಲೂಕಿನ ಸಿದ್ದಾಪುರ ಹೋಬಳಿಯಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಶ್ರೀಮತಿ ಶಿವಗಂಗಾ ಗಂಡ ಪಂಪಾಪತಿ ಇವರ ಸಹಯೋಗದಲ್ಲಿ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ 7ನೇ ಸುತ್ತಿನ ಕಾಲುಬಾಯಿ ರೋಗ ಲಸಿಕಾ ಅಭಿಯಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಪೋಸ್ಟರ್ ಅನ್ನು ಸಿದ್ದಾಪುರ ಪಶು ಸಂಗೋಪನಾ ಇಲಾಖೆಯ ಆವರಣದಲ್ಲಿ ಗೋಮಾತೆಗೆ ಪೂಜೆ ಸಲ್ಲಿಸಿ ಶನಿವಾರ ಲಸಿಕೆ ಹಾಕುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಪೋಸ್ಟರ್ ಅನ್ನು ಬಿಡುಗಡೆ ಮಾಡಲಾಯಿತು.

ಬಳಿಕ ಪಶು ವೈದ್ಯಧಿಕಾರಿ ಸರ್ದಾರ್ ಅಲಿ ಮಾತನಾಡಿ ರಾಷ್ಟ್ರೀಯ ಜಾನುವಾರು ರೋಗಗಳ ನಿಯಂತ್ರಣ ಯೋಜನೆಯಡಿ ಜಿಲ್ಲೆಯಲ್ಲಿರುವ ಜಾನುವಾರುಗಳಿಗೆ ಕಾಲುಬಾಯಿ ರೋಗದ ವಿರುದ್ಧ 7ನೇ ಸುತ್ತಿನ ಕಾಲುಬಾಯಿ ರೋಗ ಲಸಿಕೆ ಹಾಗೂ ಚರ್ಮಗಂಟು ರೋಗದ ವಿರುದ್ಧ ಲಸಿಕೆಯನ್ನು ಹಾಕಲು ಏಪ್ರಿಲ್ 26 ರಿಂದ ಜೂನ್ 09ರವರೆಗೆ ಹಮ್ಮಿಕೊಳ್ಳಲಾಗಿದೆ.


ಉದಯವಾಹಿನಿ ಚಿತ್ರ

ಕಡ್ಡಾಯವಾಗಿ ಲಸಿಕೆ ಹಾಕಿಸಿ

ಜಾನುವಾರುಗಳಿಗೆ ಕಾಲು ಬಾಯಿ ರೋಗ ಹಾಗೂ ಚರ್ಮಗಂಟು ರೋಗ ತಡೆಗಟ್ಟಲು ಎಲ್ಲಾ ರೈತ ಬಾಂದವರು ಕಡ್ಡಾಯವಾಗಿ ಲಸಿಕೆ ಹಾಕಿಸಿ ಮತ್ತು ಯಾವುದೇ ಕಾರಣಕ್ಕೂ ನಿರ್ಲಕ್ಷ್ಯ ವಹಿಸಬಾರದು ಈ ಖಾಯಿಲೆ ಒಂದು ಜಾನುವಾರಿಂದ ಮತ್ತೊಂದು ಜಾನುವಾರುಗಳಿಗೆ ಹರಡುವ ಸಾಧ್ಯತೆ ಇರುತ್ತದೆ.

ರೈತಭಾಂದವರು ಕಡ್ಡಾಯವಾಗಿ ತಮ್ಮ ಜಾನುವಾರುಗಳಿಗೆ ಲಸಿಕೆ ಕೊಡಿಸುವ ಮೂಲಕ ಜಾಗೃತಿ ವಹಿಸಿಬೇಕು. ಕಾಲುಬಾಯಿ ರೋಗದ ವಿರುದ್ಧ ಎಲ್ಲಾ ದನ, ಎಮ್ಮೆ ಮತ್ತು ಕರುಗಳಿಗೆ ಉಚಿತವಾಗಿ ಲಸಿಕೆಯನ್ನು ನೀಡಲಾಗುತ್ತಿದೆ. ಲಸಿಕಾದಾರರು ನಿಮ್ಮ ಗ್ರಾಮಕ್ಕೆ ನಿಮ್ಮ ಮನೆ ಬಾಗಿಲಿಗೆ ಭೇಟಿ ನೀಡಿ ಜಾನುವಾರುಗಳಿಗೆ ಲಸಿಕೆ ಹಾಕಲಿದ್ದಾರೆ. ದಯವಿಟ್ಟು ನಿರ್ಲಕ್ಷ್ಯ ವಹಿಸದೆ ಅವರಿಗೆ ಸಹಕರಿಸಿ ತಪ್ಪದೇ ನಿಮ್ಮ ಜಾನುವಾರುಗಳಿಗೆ ಕಾಲುಬಾಯಿ ರೋಗ ಹಾಗೂ ಚರ್ಮಗಂಟು ರೋಗದ ವಿರುದ್ಧ ಲಸಿಕೆಯನ್ನು ಹಾಕಿಸಿ, ರೋಗ ಬಾರದಂತೆ ಜಾನುವಾರುಗಳನ್ನು ರಕ್ಷಿಸಿ, ಆರ್ಥಿಕ ನಷ್ಟ ತಡೆಯಿರಿ. ರಾಜ್ಯವನ್ನು ಕಾಲುಬಾಯಿ ರೋಗ ಮುಕ್ತ ವಲಯವನ್ನಾಗಿಸುವ ಸಂಕಲ್ಪ ಮಾಡೋಣ ಎಂದರು. ಡಾ. ಆದರ್ಶ್, ಡಾ . ವಿಶ್ವನಾಥ್,ಸಜಾನುವಾರು ಅಧಿಕಾರಿ ಸರ್ದಾರ್ ಅಲಿ,ಕಿರಿಯ ಪಶು ವೈದ್ಯಕೀಯ ಪರೀಕ್ಷಕ ಅಮರ, ಪಂಪಾಪತಿ ,ವೀರಭದ್ರಪ್ಪ, ಕೆಎಂಎಫ್ ಯಮನೂರ ಸಿಂಗನಾಳ್,,ಪ್ರಶಾಂತ,ಮೇಲಗಿರಿಯಪ್ಪ,ಪಶು ಸಖಿ ಅನ್ನಪೂರ್ಣ ಮತ್ತು ಹುಲಿಗೆಮ್ಮ ಹಾಗೂ ಗ್ರಾಮಸ್ಥರಾದ ಗಾದಿಲಿಂಗಯ್ಯ ಸ್ವಾಮಿ ಇದ್ದರು.

## ಪ್ರಾಥಮಿಕ ಶಿಕ್ಷಣದಿಂದಲೆ ಮೌಲ್ಯಾಧಾರಿತ ಶಿಕ್ಷಣ ಪಠ್ಯ ಕ್ರಮ ಅವಶ್ಯಕ

• ಉದಯವಾಹಿನಿ ಕಲಬುರಗಿ

ಇಂದಿನ ಶೈಕ್ಷಣಿಕ ವ್ಯವಸ್ಥೆಯಲ್ಲಿ ಪ್ರಾಥಮಿಕ ಶಿಕ್ಷಣದಿಂದಲೆ ನೈತಿಕ ಹಾಗೂ ಮೌಲ್ಯಾಧಾರಿತ ಶಿಕ್ಷಣ ವಿಷಯದ ಅಗತ್ಯವಿದೆ ಎಂದು ಭೂತಾನ್ ರಾಯಲ್ ಯುನಿವರ್ಸಿಟಿಯ ಮಾಜಿ ಪ್ರಾಧ್ಯಾಪಕ ಪ್ರೊ. ಉಮೇಶ್ ಜಾಧವ್ ಹೇಳಿದರು.

ಅವರು ಪಿಡಿಎ ಇಂಜಿನಿಯರಿಂಗ್ ಕಾಲೇಜಿನ ಸ್ಯಾಕ್ ಸಭಾಂಗಣದಲ್ಲಿ ಅಖಿಲ ಭಾರತೀಯ ತಾಂತ್ರಿಕ ಶಿಕ್ಷಣ ಪರಿಷತ್ ವತಿಯಿಂದ ನಡೆದ ಸಾರ್ವತ್ರಿಕ ಮಾನವ ಮೌಲ್ಯಗಳ ನಿರ್ವಹಣಾ ಅಭಿವೃದ್ಧಿ ಕಾರ್ಯಕ್ರಮದಲ್ಲಿ ಎರಡನೆ ದಿನದಂದು ನಡೆದ ಕುಟುಂಬದಲ್ಲಿ ಸಾಮರಸ್ಯ, ನಂಬಿಕೆ ಗೌರವ ಎಂಬ ವಿಷಯ ಕುರಿತು ಮಾತನಾಡುತ್ತಿದ್ದರು

ಇಂದಿನ ವಿದ್ಯಾರ್ಥಿಗಳಿಗೆ ಕುಟುಂಬ,ಪರಸ್ಪರ ಸಂಬಂಧಗಳು, ಸಾಮರಸ್ಯ ಮತ್ತು ಗೌರವ ಎಂಬುದನ್ನು ಪ್ರಾಥಮಿಕ ಶಿಕ್ಷಣ ಹಂತದಿಂದಲೇ ತಿಳಿಸಿಕೊಡಬೇಕಾದ ಅನಿವಾರ್ಯತೆ ಸೃಷ್ಟಿಯಾಗಿದೆ

ಕುಟುಂಬದಲ್ಲಿ ಸಾಮರಸ್ಯ ಎಂದರೆ ಎಲ್ಲರೂ ಚೆನ್ನಾಗಿ ಹೊಂದಿಕೊಳ್ಳುವುದು, ಪರಸ್ಪರ ಬೆಂಬಲಿಸುವುದು ಮತ್ತು ಒಬ್ಬರನೊಬ್ಬರು ನಂಬಿಕೆಯಿಂದ ಧನಾತ್ಮಕವಾದ ಯೋಚನೆಗಳಿಂದ ಕೂಡಿದ ಚರ್ಚೆಗಳಿಂದ ಮನೆಯಲ್ಲಿ ಸಂತೋಷ, ಶಾಂತಿಯುತ ವಾತಾವರಣವಿರುತ್ತದೆ


ಉದಯವಾಹಿನಿ ಚಿತ್ರ

ಪರಿಣಾಮಕಾರಿ ಸಂವಹನವು ಕುಟುಂಬದೊಳಗಿನ ಸಾಮರಸ್ಯದ ಮೂಲಾಧಾರವಾಗಿದೆ. ಮುಕ್ತ ಮತ್ತು ಪ್ರಾಮಾಣಿಕ ಸಂವಹನವು ವಿಶ್ವಾಸವನ್ನು ಬೆಳೆಸುತ್ತದೆ, ತಿಳುವಳಿಕೆಯನ್ನು ಉತ್ತೇಜಿಸುತ್ತದೆ ಮತ್ತು ಸಂಘರ್ಷಗಳನ್ನು ಸೌಹಾರ್ದಯುತವಾಗಿ ಪರಿಹರಿಸುತ್ತದೆ

ಕುಟುಂಬದೊಳಗೆ ಸಾಮರಸ್ಯವನ್ನು ಕಾಪಾಡಿಕೊಳ್ಳಲು ಪರಸ್ಪರ ಗೌರವವು ಅತ್ಯಗತ್ಯ. ಪ್ರತಿಯೊಬ್ಬ ಕುಟುಂಬದ ಸದಸ್ಯರನ್ನು ಅವರ ಪ್ರತ್ಯೇಕತೆ, ಅಭಿಪ್ರಾಯಗಳು ಮತ್ತು ಕೊಡುಗೆಗಳಿಗಾಗಿ ಗೌರವಿಸಬೇಕು. ಪರಸ್ಪರರ ಗಡಿಗಳು, ಆಯ್ಕೆಗಳು ಮತ್ತು ವೈಯಕ್ತಿಕ ಸ್ಥಳವನ್ನು ಗೌರವಿಸುವುದು ಭದ್ರತೆ ಮತ್ತು ಸ್ವೀಕಾರದ ಭಾವನೆಯನ್ನು ಬೆಳೆಸುತ್ತದೆ ಎಂದು ಹೇಳಿದರು ಒಟ್ಟಾರೆಯಾಗಿ ಇಂದಿನ ಪ್ರಾಥಮಿಕ ಶಿಕ್ಷಣ ವ್ಯವಸ್ಥೆಯಿಂದಲೆ ಮೌಲ್ಯ ಶಿಕ್ಷಣ ಆವಶ್ಯಕತೆ ಇದೆ ಎಂದು ಪ್ರತಿಪಾದಿಸಿದರು.

> ಭಾವನೆಗಳು ನಿರ್ದಿಷ್ಟವಾಗಿರುತ್ತವೆ ಮತ್ತು ಸಂಬಂಧದಲ್ಲಿ 'ಮೌಲ್ಯಗಳನ್ನು ಹೊಂದಿರುತ್ತವೆ. ಒಬ್ಬರೊಂದಿಗಿನ ಇನ್ನೊಬ್ಬರ ಭಾವನೆಗಳು ನಿರ್ದಿಷ್ಟವಾಗಿರುತ್ತವೆ, ಅವುಗಳನ್ನು ಗುರುತಿಸಬಹುದು, ಅರ್ಥಮಾಡಿಕೊಳ್ಳಬಹುದು ಮತ್ತು ಸಂತೋಷಪಡಿಸಬಹುದು. ನಾವು ಅವುಗಳನ್ನು ಅರ್ಥಮಾಡಿಕೊಳ್ಳದಿದ್ದರೆ,ನಮಗೆ ಸಮಸ್ಯೆಗಳಿವೆ, ನಾವು ಎಂದಿಗೂ ಇನ್ನೊಬ್ಬರನ್ನು ತೃಪ್ತಿಪಡಿಸಲು ಸಾಧ್ಯವಿಲ್ಲ ಎಂದು ನಮಗೆ ಅನಿಸುತ್ತದೆ ಮತ್ತು ಇದು ನಮ್ಮ ಹತ್ತಿರದ ಸಂಬಂಧಗಳಲ್ಲಿಯೂ ಸಹ ನಮ್ಮನ್ನು ದ್ವೇಷದಿಂದ ಕಾಣುವಂತೆ ಮಾಡುತ್ತದೆ
>
> – ಪ್ರೊ. ಉಮೇಶ್ ಜಾಧವ್

## ರೈಲ್ವೇ ಅಭಿವೃದ್ಧಿಗೆ ಮನವಿ

• ಉದಯವಾಹಿನಿ ಬಳ್ಳಾರಿ

ಈ ಭಾಗದಲ್ಲಿ ಓಡಾಡುತ್ತಿದ್ದ ಕೆಲ ರೈಲುಗಳನ್ನು ಬಂದ್ ಮಾಡಲಾಗಿದೆ ಅವನ್ನು ಪುನಃ ಆರಂಭಿಸಬೇಕು. ಒಂದೇ ಭಾರತ್ ಸೇರಿದಂತೆ ಹೊಸ ರೈಲುಗಳನ್ನು ಆರಂಭಿಸಬೇಕು. ನೆನೆಗುದಿಗೆ ಬಿದ್ದಿರುವ ಬಳ್ಳಾರಿ ರೈಲು ನಿಲ್ದಾಣದ ಅಭಿವೃದ್ಧಿ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಬೇಕು ಎಂದು ಹುಬ್ಬಳ್ಳಿ ರೈಲ್ವೇ ವಿಭಾಗದ ಬಳಕೆದಾರರ ಸಲಹಾ ಸಮಿತಿಯ ಸದಸ್ಯರಾದ ಆರ್.ಗೋಪಾಲಕೃಷ್ಣ, ಸೊಂತ ಗಿರಿಧರ ಅವರು ಹೊಬ್ಬಳ್ಳಿಯಲ್ಲಿನ ವಿಭಾಗೀಯ ರೈಲ್ವೇ ಮ್ಯಾನೇಜರ್ ಬಿ.ಮೀನಾ ಅವರನ್ನು ಭೇಟಿ ಮಾಡಿ ಮನವಿ ಮಾಡಿದ್ದಾರೆ. ಸದ್ಯದಲ್ಲೇ ಬಳ್ಳಾರಿಗೆ ಆಗಮಿಸಿ ರೈಲ್ವೇ ನಿಲ್ದಾಣದ ಅಭಿವೃದ್ಧಿ ಕಾಮಗಾರಿ ಪರಿಶೀಲನೆ ಮಾಡುವುದಾಗಿ ಹೇಳಿದ್ದಾರಂತೆ.

## ಸಿಡಿಲಿಗೆ ಜೋಡೆತ್ತು ಬಲಿ

• ಉದಯವಾಹಿನಿ ಔರಾದ್

ಸಿಡಿಲು ಬಡಿದ ಪರಿಣಾಮ ತಾಲೂಕಿನ ಮಮದಾಪೂರ ಗ್ರಾಮದಲ್ಲಿ ಎರಡು ಎತ್ತುಗಳು ಬಲಿಯಾದ ಘಟನೆ ಮಧ್ಯಾಹ್ನ ನಡೆದಿದೆ. ರೈತ ಹಾವಯ್ಯ ಸ್ವಾಮಿ ಎಂಬವರಿಗೆ ಸೇರಿದ ಎತ್ತುಗಳು ಮೃತಪಟ್ಟಿವೆ. 1.20 ಲಕ್ಷ ರೂ. ಬೆಲೆ ಇರಬಹುದು ಎಂದು ಅಂದಾಜಿಸಲಾಗಿದೆ. ಘಟನಾ ಸ್ಥಳಕ್ಕೆ ಕಂದಾಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ. ಈ ಕುರಿತಂತೆ ಔರಾದ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.ಲಕ್ಷಾಂತರ ರೂಪಾಯಿ ಬೆಲೆ ಬಾಳುವ ಎತ್ತುಗಳನ್ನು ಕಳೆದುಕೊಂಡ ರೈತ ಸಂಕಷ್ಟಕ್ಕೆ ಸಿಲುಕಿದ್ದು ಕೂಡಲೇ ಸೂಕ್ತ ಪರಿಹಾರಕ್ಕೆ ಗ್ರಾಮದ ಮುಖಂಡರು ಆಗ್ರಹಿಸಿದ್ದಾರೆ.

## 1ರಿಂದ ಕುದುರೆಮುಖ ಚಾರಣ ಅವಕಾಶ

• ಉದಯವಾಹಿನಿ ಚಿಕ್ಕಮಗಳೂರು

ಕುದುರೆಮುಖ ವನ್ಯಜೀವಿ ವಿಭಾಗದ ನೇತ್ರಾವತಿ ಪೀಕ್, ಕುದುರೆಮುಖ ಪೀಕ್, ನರಸಿಂಹ ಪರ್ವತ, ಹಿಡ್ಲುಮನೆ ಜಲಪಾತ, ಕೊಡಚಾದ್ರಿ, ಚಾರಣ ಪಥಗಳನ್ನು ಮೇ 1ರಿಂದ ಪ್ರವಾಸಿಗರಿಗೆ ಮುಕ್ತ ಗೊಳಿಸಲಾಗುತ್ತಿದೆ. ಪ್ರವಾಸಿಗರು ಆನ್‌ಲೈನ್ ಮೂಲಕ ಕಾಯ್ದಿರಿಸಬಹುದು ಎಂದು ಕುದುರೆಮುಖ ವನ್ಯಜೀವಿ ವಿಭಾಗದ ಪ್ರಕಟಣೆ ತಿಳಿಸಿದೆ.


ಉದಯವಾಹಿನಿ ಚಿತ್ರ

## ಮಲೇರಿಯಾ ನಿರ್ಮೂಲನೆ ಪ್ರತಿಯೊಬ್ಬರ ಜವಾಬ್ದಾರಿ

• ಉದಯವಾಹಿನಿ ಹೊಸಪೇಟೆ

ಮಲೇರಿಯಾ ನಿರ್ಮೂಲನೆ ಪ್ರತಿಯೊಬ್ಬ ಸಾರ್ವಜನಿಕರ ಜವಾಬ್ದಾರಿಯಾಗಬೇಕು. ಈ ನಿಟ್ಟಿನಲ್ಲಿ ಸ್ವಯಂ ರಕ್ಷಣಾ ಕ್ರಮಗಳನ್ನು ಪಾಲಿಸಿದರೇ ನಿಯಂತ್ರಣ ಸುಲಭ ಸಾಧ್ಯ ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಜಂಬಯ್ಯ ಹೇಳಿದರು.

ನಗರದ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಆವರಣದಲ್ಲಿ ಜಿಲ್ಲಾಡಳಿತ, ಜಿಪಂ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದಲ್ಲಿ ವಿಶ್ವ ಮಲೇರಿಯಾ ದಿನಾಚರಣೆ ನಿಮಿತ್ತ ಏರ್ಪಡಿಸಿದ ಜಿಲ್ಲಾ ಮಟ್ಟದ ಜಾಗೃತಿ ಜಾಥಾವನ್ನು ಹಸಿರು ನಿಶಾನೆ ಪ್ರದರ್ಶಿಸಿ ಚಾಲನೆ ನೀಡಿ ಶುಕ್ರವಾರ ಅವರು ಮಾತನಾಡಿದರು. ಸೋಂಕಿತ ಅನಾಫಿಲಿಸ್ ಹೆಣ್ಣು ಸೊಳ್ಳೆ ಕಚ್ಚುವುದರಿಂದ ಮಲೇರಿಯಾ ಹರಡುತ್ತದೆ. ಸಾರ್ವಜನಿಕರು ಮಲೇರಿಯಾ ನಿಯಂತ್ರಣಕ್ಕೆ ಸ್ವಯಂ ರಕ್ಷಣಾ ಕ್ರಮಗಳನ್ನು ಪಾಲಿಸಿದರೇ ಗರಿಷ್ಠ ಮಟ್ಟದಲ್ಲಿ ನಿಯಂತ್ರಣ ಸಾಧ್ಯವಾಗಲಿದೆ. ಮನೆಗಳಲ್ಲಿ ಸೊಳ್ಳೆ ಪರದೆ ಬಳಕೆ, ಸೊಳ್ಳೆ ಬತ್ತಿ, ಮುಲಾಮು ಬಳಕೆ, ಬೇವಿನ ಎಲೆ, ಸಾಂಬ್ರಾಣಿ, ಧೂಪದ ಹೊಗೆ ಹಾಕುವುದು. ಕಿಟಿಕಿ ಬಾಗಿಲುಗಳ ಮೂಲಕ ಸೊಳ್ಳೆಗಳು ಮನೆಯೊಳಗೆ ಬಾರದಂತೆ ಕ್ರಮ ವಹಿಸುವುದು. ಮೈತುಂಬ ಬಟ್ಟೆ ಧರಿಸುವುದು ಸೇರಿದಂತೆ ಮನೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಕಲುಷಿತ ನೀರು ನಿಲ್ಲದಂತೆ ನೈರ್ಮಲ್ಯ ಕಾಪಾಡಬೇಕು. ಪ್ರತಿ 3 ದಿನಗಳಿಗೊಮ್ಮೆ ಕುಡಿಯುವ ನೀರು, ಬಳಸುವ ನೀರು ಬದಲಿಸಬೇಕು. ಮಳೆಯ ನೀರು ನಿಲ್ಲುವಂತಹ ಅನುಪಯುಕ್ತ ವಸ್ತುಗಳನ್ನು ವಿಲೇವಾರಿ ಮಾಡಬೇಕಿದೆ. ಚಳಿಜ್ವರ, ನಡುಕ, ಮೈ ಬೆವರುವಿಕೆ, ತಲೆನೋವು ಸೇರಿ ಯಾವುದೇ ಜ್ವರ ಬಂದರೂ ನಿರ್ಲಕ್ಷಿಸದೇ, ಸ್ವಯಂ ಚಿಕಿತ್ಸೆ ಮಾಡಿಕೊಳ್ಳದೇ ತಕ್ಷಣ ವೈದ್ಯರನ್ನು ಭೇಟಿ ಮಾಡಿ ಸಲಹೆ ಪಡೆಯಬೇಕು. ರಕ್ತ ಪರೀಕ್ಷೆಯಿಂದ ಮಲೇರಿಯಾ ಪತ್ತೆಯಾಗಲಿದೆ ಎಂದರು.


ಉದಯವಾಹಿನಿ ಚಿತ್ರ

## ಪ್ರಚೋದನಕಾರಿ ಫೇಸ್‌ಬುಕ್ ಪೋಸ್ಟ್ ನಿಚ್ಚು ವಿರುದ್ಧ ಪ್ರಕರಣ

• ಉದಯವಾಹಿನಿ ಮಂಗಳೂರು

ಉಳ್ಳಾಲ ತಾಲ್ಲೂಕಿನ ಉಳ್ಳಾಲ್ತಿ ನಿವಾಸಿ ಶ್ರೀ ಸತೀಶ್ ಕುಮಾರ್ ಎಂಬವರು ನೀಡಿದ ದೂರಿನ ಆಧಾರದ ಮೇಲೆ ಕೊಣಾಜೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ನಿಚ್ಚು ಮಂಗಳೂರು'' ಎಂಬ ಫೇಸ್ ಬುಕ್ ಬಳಕೆದಾರರು ಸಾರ್ವಜನಿಕ ಶಾಂತಿಯನ್ನು ಕದಡುವ ಉದ್ದೇಶದಿಂದ ಪ್ರಚೋದನಕಾರಿ ಪೋಸ್ಟ್ ಅನ್ನು ಹಾಕಿದ್ದಾರೆ ಎಂದು ದೂರಿನಲ್ಲಿ ತಿಳಿಸಲಾಗಿದೆ.



ದೂರುದಾರರು ಪೋಸ್ಟ್‌ನ ಸ್ಕ್ರೀನ್ ಶಾಟ್‌ಗಳು ಮತ್ತು ಬಳಕೆದಾರರ ಪ್ರೊಫೈಲ್‌ನ ವಿವರಗಳನ್ನು ಸಾಕ್ಷ್ಯವಾಗಿ ಸಲ್ಲಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಭಾರತೀಯ ನ್ಯಾಯ ಸಂಹಿತೆ (ಬಿಎನ್ ಎಸ್), 2023 ರ ಕಲಂ 192 ಮತ್ತು 353(1)(ಬಿ) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಈ ಬಗ್ಗೆ ತನಿಖೆ ಮುಂದುವರೆದಿದೆ ಎಂದು ಮಂಗಳೂರು ನಗರ ಪೊಲೀಸರು ತಿಳಿಸಿದ್ದಾರೆ.

## ತ್ಯಾಜ್ಯ ವಿಲೇವಾರಿ ಘಟಕ ಸ್ಥಳಾಂತರಿಸಲು ಆಗ್ರಹ

• ಉದಯವಾಹಿನಿ ಕಾರವಾರ

ತಾಲ್ಲೂಕಿನ ಚಿತ್ತಾಕುಲ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಕಾಕರತಳೆ ಕೆರೆ ಸಂರಕ್ಷಿಸಬೇಕು ಮತ್ತು ಅದರ ಪಕ್ಕದಲ್ಲಿರುವ ಘನ ತ್ಯಾಜ್ಯ ವಿಲೇವಾರಿ ಘಟಕ ಸ್ಥಳಾಂತರಿಸಬೇಕು ಎಂದು ಒತ್ತಾಯಿಸಿ ಶನಿವಾರ ಸಾಂಕೇತಿಕ ಉಪವಾಸ ಸತ್ಯಾಗ್ರಹ ನಡೆಸಲಾಯಿತು.

ಸದಾಶಿವಗಡ ಗ್ರಾಮಸ್ಥರು ಮತ್ತು ಸನಾತನ ಧರ್ಮ ರಕ್ಷಣಾ ವೇದಿಕೆಯ ಸದಸ್ಯರು ಜಂಟಿಯಾಗಿ ಹಲವು ತಾಸುಗಳವರೆಗೆ ಚಿತ್ತಾಕುಲ ಗ್ರಾಮ ಪಂಚಾಯಿತಿಯ ಘನ ತ್ಯಾಜ್ಯ ವಿಲೇವಾರಿ ಘಟಕದ ಸಮೀಪ ಧರಣಿ ನಡೆಸಿದರು. ನಾಲ್ಕು ವರ್ಷಗಳಿಂದ ತ್ಯಾಜ್ಯ ವಿಲೇವಾರಿ ಘಟಕ ಸ್ಥಳಾಂತರಿಸುವಂತೆ ಒತ್ತಾಯಿಸುತ್ತಿದ್ದರೂ ಗ್ರಾಮ ಪಂಚಾಯಿತಿ ಸ್ಪಂದಿಸಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆ ನೇತೃತ್ವ ವಹಿಸಿದ್ದ ಸನಾತನ ಧರ್ಮ ರಕ್ಷಣಾ ವೇದಿಕೆಯ ಸಂಸ್ಥಾಪಕ ಅಧ್ಯಕ್ಷ ಗಜೇಂದ್ರ ನಾಯ್ಕ, 'ಕಾಕರತಳ ಕೆರೆ ಈ ಭಾಗದಲ್ಲಿ ಅಂತರ್ಜಲ ವೃದ್ಧಿಗೆ ಪೂರಕವಾಗಿದೆ. ಆದರೆ, ಈಗ ಇದೇ ಕೆರೆಯನ್ನು ಕಲುಷಿತಗೊಳಿಸಲಾಗುತ್ತಿದೆ. ಗ್ರಾಮ ಪಂಚಾಯಿತಿಯ ಘನ ತ್ಯಾಜ್ಯ ವಿಲೇವಾರಿ ಘಟಕ ನಿರ್ಮಾಣವಾದ ಬಳಿಕ ಸಮಸ್ಯೆ ಹೆಚ್ಚಿದೆ. ಸ್ಥಳೀಯರು ಮತ್ತು ಹೊರಗಿನ ಜನರು ಕಸಗಳನ್ನು ಕೆರೆಗೆ ಎಸೆಯುತ್ತಿದ್ದಾರೆ' ಎಂದು ಆರೋಪಿಸಿದರು.


ಉದಯವಾಹಿನಿ ಚಿತ್ರ

ತ್ಯಾಜ್ಯ ವಿಲೇವಾರಿ ಘಟಕದ ಪಕ್ಕದಲ್ಲೇ ಮೀನು ಮಾರುಕಟ್ಟೆ, ಪ್ರಾಥಮಿಕ ಆರೋಗ್ಯ ಕೇಂದ್ರ. ಅಂಗನವಾಡಿ, ಸರ್ಕಾರಿ ಶಾಲೆ, ಹತ್ತಾರು ಮನೆಗಳಿವೆ. ಅಲ್ಲಿಯೇ ಕೆರೆಯೂ ಇದ್ದು, ನೀರು ಕಲುಷಿತಗೊಳ್ಳುತ್ತಿದೆ. ಇದು ಜನರ ಆರೋಗ್ಯದ ಮೇಲೆ ಪರಿಣಾಮ ಬೀರಲಿದ್ದು, ಕೂಡಲೆ ತ್ಯಾಜ್ಯ ವಿಲೇವಾರಿ ಘಟಕ ಸ್ಥಳಾಂತರಿಸಬೇಕು' ಎಂದು ಒತ್ತಾಯಿಸಿದರು.

### ನಿಗದಿತ ಕಾಲಮಿತಿಯೊಳಗೆ ಉತ್ತಮ ಗುಣಮಟ್ಟದಿಂದ ರಸ್ತೆ ನಿರ್ಮಾಣ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ತಾಕೀತು

# 5 ಕೋಟಿ ರೂ.ವೆಚ್ಚದ ದ್ವಿಪಥ ರಸ್ತೆ ಕಾಮಗಾರಿಗೆ ಡಾ.ಬೆಲ್ದಾಳೆ ಚಾಲನೆ

• ಉದಯವಾಹಿನಿ ಬೀದರ್

ದಕ್ಷಿಣ ವಿಧಾನಸಭೆ ಕ್ಷೇತ್ರದಲ್ಲಿ ಬರುವ ನಗರದ ಹೊರವಲಯದ ಚಿಟ್ಟಾ ಕ್ರಾಸ್‌ನಿಂದ ಚಿಟ್ಟಾ ಗ್ರಾಮಕ್ಕೆ ಸಂಪರ್ಕಿಸುವ 5 ಕೋಟಿ ರೂ. ವೆಚ್ಚದ ಸುಸಜ್ಜಿತ ದ್ವಿಪಥ ರಸ್ತೆ ಕಾಮಗಾರಿಗೆ ಕ್ಷೇತ್ರದ ಶಾಸಕರಾದ ಡಾ.ಶೈಲೇಂದ್ರ ಬೆಲ್ದಾಳೆ ಅವರು ಸಂಜೆ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಶಾಸಕರು, ಚಿಟ್ಟಾ ಕ್ರಾಸ್ ನಿಂದ ಚಿಟ್ಟಾವರೆಗಿನ 1 ಕಿಲೋಮೀಟರ್ ರಸ್ತೆ ಅಗಲಗೊಳಿಸಿ, ದ್ವಿಪಥವಾಗಿ ಅಭಿವೃದ್ಧಿಪಡಿಸಬೇಕು ಎಂಬುದು ಸ್ಥೀಯರ ಮುಖ್ಯ ಬೇಡಿಕೆಯಾಗಿತ್ತು. ಇದಕ್ಕೆ ಸ್ಪಂದಿಸಿ 5 ಕೋಟಿ ರೂ. ವೆಚ್ಚದಲ್ಲಿ ಈ ರಸ್ತೆ ಯೋಜನೆ ಕೈಗೆತ್ತಿಕೊಳ್ಳಲಾಗಿದೆ. ಉತ್ತಮ ದ್ವಿಪಥ ರಸ್ತೆ ಜೊತೆಗೆ ಮಧ್ಯೆ ಡಿವೈಡರ್( ರಸ್ತೆ ವಿಭಜಕ), ಎರಡೂ ಕಡೆಗೆ ಬೆಳಗುವ ರಸ್ತೆ ವಿಭಜಕಗಳಲ್ಲಿ ಸಾಲು ವಿದ್ಯುತ್ ಬೀದಿ ದೀಪಗಳಿರಲಿವೆ. ಈ ರಸ್ತೆಯು ಈ ಮಾರ್ಗದ ಸುಂದರೀಕರಣ ಹೆಚ್ಚಿಸಲಿದೆ ಎಂದರು.

ಬೀದರ್ ನಗರದಿಂದ ಬೀದರ್ ದಕ್ಷಿಣ ಕ್ಷೇತ್ರಕ್ಕೆ ಸಂಪರ್ಕ ಕಲ್ಪಿಸುವ ಪ್ರಮುಖ ರಸ್ತೆ ಇದಾಗಿದೆ. ಈ ಭಾಗವು ನಗರದ ಹಲವು ವಿಸ್ತರಣೆ ಬಡಾವಣೆಗೂ ಸಂಪರ್ಕಿಸುವ ಕಾರಣದಿಂದ ವಾಹನ ದಟ್ಟಣೆ ಹೆಚ್ಚಾಗಿದೆ. ಈ ಮುಂಚೆ ಚಿಕ್ಕ ರಸ್ತೆಯಿದ್ದು, ಅದು ಸಹ ಹಾಳಾಗಿದ್ದರಿಂದ ಅಪಘಾತ ಹೆಚ್ಚುತ್ತಿದ್ದವು. ಇದಕ್ಕೆಲ್ಲ ಶಾಶ್ವತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಹೈಟೆಕ್ ರಸ್ತೆ ಕಾಮಗಾರಿಗಾಗಿ 5 ಕೋಟಿ ರೂ. ಅನುದಾನ ಕಲ್ಪಿಸಿ ಕಾಮಗಾರಿಗೆ ಚಾಲನೆ ನೀಡಲಾಗಿದೆ. ನಿಗದಿತ ಕಾಲಮಿತಿಯೊಳಗೆ ಉತ್ತಮ ಗುಣಮಟ್ಟದಿಂದ ರಸ್ತೆ ನಿರ್ಮಾಣ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.


ಉದಯವಾಹಿನಿ ಚಿತ್ರ

> ಚಿಟ್ಟಾ ಗ್ರಾಮ ನನಗೆ ರಾಜಕೀಯ ಜನ್ಮ ಕೊಟ್ಟ ಕ್ಷೇತ್ರ. ಚಿಟ್ಟಾ ಕ್ಷೇತ್ರದ ಜನರು ಮೊದಲ ಬಾರಿ ನನಗೆ ಜಿಪಂ ಸದಸ್ಯನಾಗಿ ಆಯ್ಕೆ ಮಾಡಿ ಸಾರ್ವಜನಿಕ ಸೇವೆಗೆ ಅವಕಾಶ ಕಲ್ಪಿಸಿದರು ವುದು ನಮ್ಮ ತಾಯಿ ಶಕುಂತಲಾ ಬೆಲ್ದಾಳೆ ಅವರು ಜಿಪಂ ಸದಸ್ಯರಾಗಿದ್ದು ಸ್ಮರಣೀಯ. ಇಂದು ಎಲ್ಲರ ಆಶೀರ್ವಾದಿಂದ ಕ್ಷೇತ್ರದ ಶಾಸಕನಾಗಿ ನಿಮ್ಮ ಸೇವೆಯಲ್ಲಿ ತೊಡಗಿದ್ದೇನೆ. ಚಿಟ್ಟಾ ಸೇರಿ ಕ್ಷೇತ್ರಕ್ಕೂ ನನಗೂ ಭಾವನಾತ್ಮಕ ಸಂಬಂಧ ಬೆಸೆದಿದೆ –ಡಾ.ಶೈಲೇಂದ್ರ ಬೆಲ್ದಾಳೆ, ದಕ್ಷಿಣ ಶಾಸಕರು

ಶೀಘ್ರದಲ್ಲೇ ಕೆಲಸ ಶುರು

ಮಳೆ ಬಂದರೆ ಇದೇ ಮಾರ್ಗದ ವಿವಿಧ ಕಡೆಗಳಲ್ಲಿ ನೀರು ಸಂಗ್ರಹವಾಗಿ ವಾಹನ ಸವಾರರಿಗೆ, ಶಾಲಾ, ಕಾಲೇಜು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಪರದಾಡುವ ಸ್ಥಿತಿ ನಿರ್ಮಾಣವಾಗುತ್ತಿತ್ತು. ನಾನು ಖುದ್ದು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಸಮಸ್ಯೆ ತಿಳಿದುಕೊಂಡಿದ್ದೇನೆ. ಇದಕ್ಕೂ ಪರಿಹಾರ ಕಲ್ಪಿಸಲು 1 ಕೋಟಿ ರೂ.ವೆಚ್ಚದಲ್ಲಿ ಸಣ್ಣ ಸೇತುವೆ ನಿರ್ಮಾಣಕ್ಕೂ ಸಹ ಅನುದಾನ ಬಿಡುಗಡೆ ಮಾಡಲಾಗಿದೆ. ಶೀಘ್ರದಲ್ಲೇ ಈ ಕೆಲಸ ಶುರುವಾಗಲಿದೆ ಎಂದು ಹೇಳಿದರು.

**ರಸ್ತೆಗಳ ಸುಧಾರಣೆಗೆ ಒತ್ತು**

ಬೀದರ್ ದಕ್ಷಿಣ ಕ್ಷೇತ್ರ ಸಂಪೂರ್ಣ ಹಳ್ಳಿಗಳಿಂದ ಕೂಡಿದೆ. ವಿವಿಧ ಯೋಜನೆಯಡಿ ಅನುದಾನ ತಂದು ಸಂಪರ್ಕ ವ್ಯವಸ್ಥೆ ಬಲಪಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಹದಗೆಟ್ಟ ಗ್ರಾಮೀಣ ರಸ್ತೆಗಳ ಸುಧಾರಣೆಗೆ ಒತ್ತು ನೀಡಲಾಗಿದೆ. ಬರುವ ಮೂರು ವರ್ಷದೊಳಗೆ ಕ್ಷೇತ್ರದ ಎಲ್ಲ ಗ್ರಾಮಕ್ಕೂ ಉತ್ತಮ ಸಂಪರ್ಕ ಕಲ್ಪಿಸಲು ಯೋಜನೆ ರೂಪಿಸಿ ಪ್ರಮಾಣಿಕವಾಗಿ ಶ್ರಮಿಸುತ್ತಿದ್ದೇನೆ ಎಂದು ಹೇಳಿದರು.

ಗುರುನಾಥ ರಾಜಗೀರಾ, ಪೀರಪ್ಪ ಯರನಳ್ಳಿ, ಶಶಿಧರ ಹೊಸಳ್ಳಿ, ಚಂದ್ರಯ್ಯ ಸ್ವಾಮಿ, ಸಂಜುಕುಮಾರ ಕೋಳಿ, ಬಾಬುರಾವ ಮಲ್ಕಾಪುರೆ ಉಪಸ್ಥಿತರಿದ್ದರು.

## ಪಾಕಿಸ್ತಾನೀಯರ ವಿರುದ್ಧದ ಪೋಸ್ಟರ್ ವೈರಲ್





**ಇಂದೋರ್:** ಇಪ್ಪತ್ತಾರು ಮಂದಿ ಹಿಂದೂಗಳ ಸಾವಿಗೆ ಕಾರಣವಾದ ಪಹಲ್ಗಾಮ್ ಉಗ್ರರ ದಾಳಿಯನ್ನು ಖಂಡಿಸಿ ದೇಶಾದ್ಯಂತ ಪ್ರತಿಭಟನೆ ಮುಂದುವರೆದಿರುವಂತೆಯೇ ಪಾಕಿಸಾನೀಯರ ವಿರುದ್ಧದ ಪೋಸ್ಟರ್‌ವೊಂದು ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕವಾಗಿ ವೈರಲ್ಲಾಗುತ್ತಿದೆ.

ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ದೇಶಾದ್ಯಂತ ಆಕ್ರೋಶ ಪ್ರತಿಭಟನೆ ಭುಗಿಲೆದ್ದಿದೆ. ಜನ ಬೀದಿಗಿಳಿದು ಪಾಕಿಸ್ತಾನಿ ಪ್ರಾಯೋಜಿತ ಉಗ್ರ ದಾಳಿಯನ್ನು ಒಕ್ಕೊರಲಿನಿಂದ ಖಂಡಿಸುತ್ತಿದ್ದಾರೆ. ಏತನ್ಮಧ್ಯೆ ಉತ್ತರ ಪ್ರದೇಶದ ಇಂದೋರ್‌ನಲ್ಲಿ ಪ್ರಖ್ಯಾತ ಫುಡ್ ಸ್ಟ್ರೀಟ್ ನಲ್ಲಿ ಪಾಕಿಸ್ತಾನಿಯರು ಮತ್ತು ಹಂದಿಗಳಿಗೆ ಪ್ರವೇಶವಿಲ್ಲ ಎಂಬ ಪೋಸ್ಟರ್ ಇದೀಗ ಭಾರಿ ಚರ್ಚೆಗೆ ಕಾರಣವಾಗಿದೆ. ಇಂದೋರ್‌ನ ಐಕಾನಿಕ್ ಛಪ್ಪನ್ ತುಕಾನ್ ಫುಡ್ ಸ್ಟ್ರೀಟ್ ರಸ್ತೆಯಲ್ಲಿರುವ ಆಹಾರ ಮಳಿಗೆಯ ಮೇಲೆ ಪಾಕಿಸ್ತಾನವನ್ನು ಗುರಿಯಾಗಿಟ್ಟುಕೊಂಡು ಹಾಕಲಾದ ಪೋಸ್ಟರ್‌ಗಳು ವ್ಯಾಪಕವಾಗಿ ಹರಡಿದಾಡುತ್ತಿವೆ. ಈ ಅಂಗಡಿಯಲ್ಲಿ ಹಂದಿಗಳು ಮತ್ತು ಪಾಕಿಸ್ತಾನಿ ನಾಗರಿಕರ ಪ್ರವೇಶವನ್ನು ನಿಷೇಧಿಸಲಾಗಿದೆ ಎಂದು ಒಂದು ದೊಡ್ಡ ಫಲಕದಲ್ಲಿ ಬರೆಯಲಾಗಿದೆ.

### ಅಲ್ಲಾಮಾ ಇಕ್ಬಾಲ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಭಾರಿ ಬೆಂಕಿ

## ಪಾಕ್ ಸೇನಾ ವಿಮಾನದ ಟೈರ್ ಸ್ಫೋಟ, ವಿಮಾನಗಳ ಹಾರಾಟ ಸ್ಥಗಿತ




ಕೆಲಕಾಲ ಆತಂಕದ ವಾತಾವರಣ

**ಪಾಕಿಸ್ತಾನ:** ಇಲ್ಲಿನ ಲಾಹೋರ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಶನಿವಾರರಂದು ಬೆಂಕಿ ಕಾಣಿಸಿಕೊಂಡಿದ್ದು, ಘಟನೆಯಿಂದಾಗಿ ಎಲ್ಲಾ ವಿಮಾನಗಳ ಹಾರಾಟವನ್ನು ರದ್ದುಗೊಳಿಸಲಾಗಿದೆ. ಪಾಕಿಸ್ತಾನ ಸೇನೆಯ ವಿಮಾನ ಲ್ಯಾಂಡಿಂಗ್ ಆಗುವಾಗ ಟೈರ್ ಸ್ಫೋಟಗೊಂಡು ಬೆಂಕಿ ಹೊತ್ತಿ ಕೊಂಡಿದೆ ಎಂದು ತಿಳಿದು ಬಂದಿದೆ. ಬೆಂಕಿಯನ್ನು ನಿಯಂತ್ರಿಸಲು ಅಗ್ನಿ ಶಾಮಕ ದಳದವರು ತಕ್ಷಣ ಸ್ಥಳಕ್ಕೆ ಧಾವಿಸಿದರು. ಘಟನೆಯಿಂದಾಗಿ ರನ್‌ವೇಯನ್ನು ತಾತ್ಕಾಲಿಕವಾಗಿ ಮುಚ್ಚಲಾಗಿದೆ.

- ಅಲ್ಲಾಮಾ ಇಕ್ಬಾಲ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಭಾರಿ ಬೆಂಕಿ
- ವಿಮಾನ ನಿಲ್ದಾಣದಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣ
- ದೇಶದಲ್ಲಿ ಕಳಪೆ ಮೂಲಸೌಕರ್ಯ, ಭದ್ರತಾ ಮಾನದಂಡಗಳ ನಿರ್ಲಕ್ಷ್ಯ ಎಂದ ಜನ

ಲಾಹೋರ್‌ನ ಅಲ್ಲಾಮಾ ಇಕ್ಬಾಲ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬೆಂಕಿ ಕಾಣಿಸಿಕೊಂಡಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ವಿಮಾನ ನಿಲ್ದಾಣದಲ್ಲಿರುವ ಜನರು ಹೊಗೆಯಿಂದ ತೊಂದರೆ ಅನುಭವಿಸುತ್ತಿರುವುದು ವಿಡಿಯೋದಲ್ಲಿ ಸ್ಪಷ್ಟವಾಗಿ ಕಾಣಿಸುತ್ತದೆ.

**ಲಾಹೋರ್ ವಿಮಾನ ನಿಲ್ದಾಣ ಹೊತ್ತಿ ಉರಿಯುತ್ತಿದೆ:** ಕಪಾಡಿಯಾ ಎಂಬುವವರು ಎಕ್ಸ್ ಖಾತೆಯಲ್ಲಿ 32 ಸೆಕೆಂಡುಗಳ ವಿಡಿಯೋ ಹಂಚಿಕೊಂಡಿದ್ದು, ಆಕಾಶದ ತುಂಬೆಲ್ಲ ಕಪ್ಪು ಹೊಗೆ ತುಂಬಿರುವುರು ಕಾಣುತ್ತಿದೆ. ಯಾವುದೇ ಸಾವು ನೋವು ದಾಖಲಾಗಿಲ್ಲ. ಲಾಹೋರ್ ವಿಮಾನ ನಿಲ್ದಾಣ ಹೊತ್ತಿ ಉರಿಯುತ್ತಿದೆ ಎಂದು ಟ್ವಿಟರ್‌ನಲ್ಲಿ ಸುಧೀರ್ ಎಂಬುವವರು ಪೋಸ್ಟ್ ಹಂಚಿಕೊಂಡಿದ್ದಾರೆ. ಪಾಕಿಸ್ತಾನದ ಅಲ್ಲಾಮಾ ಇಕ್ಬಾಲ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬೆಂಕಿ ಕಾಣಿಸಿಕೊಂಡಿದ್ದು ಇದೇ ಮೊದಲಲ್ಲ. ಈ ಹಿಂದೆ ಕೂಡ ವಿಮಾನ ನಿಲ್ದಾಣದಲ್ಲಿ ಬೆಂಕಿ ಕಾಣಿಸಿಕೊಂಡ ಬಗ್ಗೆ ವರದಿಯಾಗಿದೆ. ಇದು ದೇಶದಲ್ಲಿ ಕಳಪೆ ಮೂಲ ಸೌಕರ್ಯ ಮತ್ತು ಭದ್ರತಾ ಮಾನದಂಡಗಳ ನಿರ್ಲಕ್ಷ್ಯವನ್ನು ಎತ್ತಿ ತೋರಿಸುತ್ತದೆ. ವಿಮಾನ ನಿಲ್ದಾಣದಲ್ಲಿ ಪದೇ ಪದೇ ಬೆಂಕಿ ಕಾಣಿಸಿಕೊಳ್ಳುತ್ತಿರುವುದು ಆತಂಕಕಾರಿ ವಿಷಯವಾಗಿದೆ. ಈ ಬಗ್ಗೆ ಸರ್ಕಾರ ಮತ್ತು ವಿಮಾನ ನಿಲ್ದಾಣದ ಅಧಿಕಾರಿಗಳು ಗಮನಹರಿಸಬೇಕು. ಭವಿಷ್ಯದಲ್ಲಿ ಇಂತಹ ಘಟನೆಗಳು ನಡೆಯದಂತೆ ಎಚ್ಚರಿಕೆ ವಹಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

### 2024 ಮೇ 9 ರಂದು ಅವಘಡ ನಡೆದಿತ್ತು

ಕಳೆದ ವರ್ಷ ಮೇ 9 ರಂದು, ಲಾಹೋರ್ ವಿಮಾನ ನಿಲ್ದಾಣದ ವಲಸೆ ಕೌಂಟರ್‌ನ ಸೀಲಿಂಗ್‌ನಲ್ಲಿ ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಕಾಣಿಸಿಕೊಂಡಿತ್ತು. ಇದರಿಂದ ವಿಮಾನ ನಿಲ್ದಾಣದ ವಲಸೆ ವ್ಯವಸ್ಥೆಗೆ ಅಡ್ಡಿಯಾಯಿತು. ಈ ಘಟನೆಯಿಂದ ವಿಮಾನ ನಿಲ್ದಾಣದಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ಪ್ರಯಾಣಿಕರು ಮತ್ತು ವಿಮಾನ ನಿಲ್ದಾಣದ ಸಿಬ್ಬಂದಿ ಸುರಕ್ಷಿತ ಸ್ಥಳಗಳಿಗೆ ಧಾವಿಸಿದರು. ಬೆಂಕಿಯನ್ನು ನಂದಿಸಲು ಅಗ್ನಿಶಾಮಕ ದಳದವರು ಶ್ರಮಿಸಿದರು.

### ಪಹಲ್ಗಾಮ್ ದಾಳಿಯಲ್ಲಿ ಎಲ್‌ಇಟಿ ಮುಖ್ಯಸ್ಥ ಪಾತ್ರ

ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭೀಕರ ಭಯೋತ್ಪಾದಕ ದಾಳಿಯಲ್ಲಿ, ಲಷ್ಕರ್-ಎ-ತೊಯ್ಬಾ (ಎಲ್‌ಇಟಿ) ಸಂಘಟನೆಯ ಮುಖ್ಯಸ್ಥ ಹಫೀಜ್ ಸಯೀದ್‌ನ ಪಾತ್ರ ಇರುವುದು ಬಯಲಾಗಿದೆ. ಪಹಲ್ಗಾಮ್ ದಾಳಿಯ ಯೋಜನೆಯಲ್ಲಿ ಹಫೀಜ್ ಸಯೀದ್ ಪ್ರಮುಖ ಪಾತ್ರ ನಿರ್ವಹಿಸಿದ್ದಾನೆ ಎಂದು ಭಾರತದ ಗುಪ್ತಚರ ಸಂಸ್ಥೆಗಳು ಆರೋಪ ಮಾಡಿವೆ.

2019ರಲ್ಲಿ ಜಮ್ಮು ಮತ್ತು ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನ ನೀಡುವ ಆರ್ಟಿಕಲ್ 370 ರದ್ದುಗೊಳಿಸಿದ ಬಳಿಕ, ಕಣಿವೆಯಲ್ಲಿ ಭಯೋತ್ಪಾದಕ ಚಟುವಟಿಕೆಗಳನ್ನು ತೀವ್ರಗೊಳಿಸಲು ಹಫೀಜ್ ಸಯೀದ್ ಎಲ್‌ಇಟಿಗೆ ನಿರ್ದೇಶನ ನೀಡುತ್ತಿದ್ದಾನೆ ಎಂದು ಗುಪ್ತಚರ ಇಲಾಖೆ ಬಹಿರಂಗಪಡಿಸಿದೆ.

## ಮಿನಿ ನ್ಯೂಸ್

### ನಾನು ಭಾರತದ ಸೊಸೆ ಪಾಕ್‌ಗೆ ಹೋಗಲ್ಲ : ಸೀಮಾ ಹೈದರ್



**ನೋಯ್ಡಾ:** ನಾನು ಪಾಕಿಸ್ತಾನದ ಮಗಳು, ಆದರೆ ಈಗ ನಾನು ಭಾರತದ ಸೊಸೆ ಹೀಗಾಗಿ ನಾನು ಇಲ್ಲಿ ಉಳಿದುಕೊಳ್ಳಲು ಎಲ್ಲಾ ರೀತಿಯ ಅರ್ಹತೆ ಪಡೆದುಕೊಂಡಿದ್ದೇನೆ ಎಂದು ಸೀಮಾ ಹೈದರ್ ಹೇಳಿಕೊಂಡಿದ್ದಾರೆ. ಭಾರತದ ಪ್ರೇಮಿ ಸಚಿನ್ ಮೀನಾ ಅವರನ್ನು ವರಿಸಲು ಪಾಕ್ ತೊರೆದು ಭಾರತಕ್ಕೆ ಬಂದು ಇದೀಗ ಸಚಿನ್ ಅವರನ್ನು ವಿವಾಹವಾಗಿರುವ ಸೀಮಾ ಹೈದರ್ ಈ ಹೇಳಿಕೆ ನೀಡಿದ್ದಾರೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಪ್ರತೀಕಾರದ ಕ್ರಮಗಳ ಭಾಗವಾಗಿ ಪಾಕಿಸ್ತಾನಿ ಪ್ರಜೆಗಳಿಗೆ ವೀಸಾ ಸೇವೆಗಳನ್ನು ಸರ್ಕಾರ ಸ್ಥಗಿತಗೊಳಿಸಿದ ನಂತರ ಗಡೀಪಾರು ಮಾಡುವ ಭಯದಲ್ಲಿದ್ದಾರೆ ಎಂದು ಸೀಮಾ ಹೈದರ್ ಹೇಳುತ್ತಾರೆ. ನಾಲ್ಕು ಮಕ್ಕಳ ತಾಯಿಯಾಗಿದ್ದ ಸೀಮಾ ಹೈದರ್ 2023 ರಲ್ಲಿ ತನ್ನ ಭಾರತೀಯ ಪ್ರೇಮಿ ಸಚಿನ್ ಮೀನಾ ಅವರನ್ನು ಮದುವೆಯಾಗಲು ಪಾಕಿಸ್ತಾನವನ್ನು ತೊರೆದಾಗ ಸುದ್ದಿಯಾಗಿದ್ದರು. ಆಕೆ ಈಗಾಗಲೇ ಸಿಂಧ್ ಪ್ರಾಂತ್ಯದಲ್ಲಿ ಮದುವೆಯಾಗಿದ್ದರು ಆದರೆ ತನ್ನ ನಾಲ್ಕು ಮಕ್ಕಳೊಂದಿಗೆ ನೇಪಾಳದ ಮೂಲಕ ಅಕ್ರಮವಾಗಿ ಭಾರತವನ್ನು ಪ್ರವೇಶಿಸಿದ್ದಳು.

### ತಿರುವನಂತಪುರ: ಹಲವು ಹೊಟೇಲ್‌ಗಳಿಗೆ ಬಾಂಬ್ ಬೆದರಿಕೆ ಇಮೇಲ್

**ತಿರುವನಂತಪುರ:** ಕೇರಳ ರಾಜ್ಯ ರಾಜಧಾನಿಯ ವಿವಿಧ ಹೋಟೆಲ್‌ಗಳಿಗೆ ಇಮೇಲ್ ಮೂಲಕ ಬಾಂಬ್ ಬೆದರಿಕೆ ಸಂದೇಶಗಳು ಬಂದಿದ್ದು, ಪೊಲೀಸರು ಬಾಂಬ್ ನಿಷ್ಕ್ರಿಯ ಘಟಕಗಳು ಮತ್ತು ಶ್ವಾನ ದಳಗಳನ್ನು ನಿಯೋಜಿಸಿ ತಪಾಸಣೆ ನಡೆಸಿದ್ದಾರೆ.

ಬಾಂಬ್ ಬೆದರಿಕೆ ಬಂದ ಎಲ್ಲಾ ಹೋಟೆಲ್‌ಗಳಲ್ಲಿ ತಪಾಸಣೆ ನಡೆಸಲಾಗುತ್ತಿದೆ ಎಂದು ಕಂಟೋನ್ಮೆಂಟ್ ಪೊಲೀಸ್ ಠಾಣೆಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.ಇಲ್ಲಿಯವರೆಗೆ ಏನೂ ಪತ್ತೆಯಾಗಿಲ್ಲ. ತಪಾಸಣೆ ನಡೆಯುತ್ತಿದೆ ಎಂದು ಹೇಳಿದ್ದಾರೆ.

ತಿರುವನಂತಪುರ ನಗರದ ಹೃದಯಭಾಗದಲ್ಲಿರುವ ಹಿಲ್ಟನ್ ಹೋಟೆಲ್ ಸೇರಿದಂತೆ ವಿವಿಧ ಹೋಟೆಲ್‌ಗಳಲ್ಲಿ ಐಇಡಿ ಸ್ಫೋಟಗಳು ಸಂಭವಿಸುತ್ತವೆ ಎಂದು ಹೇಳಲಾದ ಬೆದರಿಕೆ ಇಮೇಲ್‌ನ ಮೂಲವನ್ನು ಪೊಲೀಸರು ಪರಿಶೀಲಿಸುತ್ತಿದ್ದಾರೆ. ಕಳೆದ ಎರಡು ತಿಂಗಳುಗಳಲ್ಲಿ, ರಾಜ್ಯಾದ್ಯಂತ ಜಿಲ್ಲಾ ಕಲೆಕ್ಟರೇಟ್‌ಗಳು ಮತ್ತು ಕಂದಾಯ ವಿಭಾಗೀಯ ಅಧಿಕಾರಿಗಳ ಕಚೇರಿಗಳಿಗೆ ಮತ್ತು ಇತ್ತೀಚೆಗೆ ಕೇರಳ ಹೈಕೋರ್ಟ್‌ಗೆ ಇಮೇಲ್ ಮೂಲಕ ಬಾಂಬ್ ಬೆದರಿಕೆ ಸಂದೇಶಗಳು ಬಂದಿವೆ.

ವ್ಯಾಪಕ ತಪಾಸಣೆ ನಡೆಸಿದ ನಂತರ ಈ ಎಲ್ಲಾ ಬೆದರಿಕೆಗಳನ್ನು ಪೊಲೀಸರು ಹುಸಿಕರೆ ಎಂದು ತಳ್ಳಿಹಾಕಿದ್ದರು.

### ಗಡಿ ನಿಯಂತ್ರಣ ರೇಖೆಯುದ್ದಕ್ಕೂ ಮುಂದುವರೆದ ಗುಂಡಿನ ಚಕಮಕಿ

**ಶ್ರೀನಗರ:** ಗಡಿ ನಿಯಂತ್ರಣ ರೇಖೆಯುದ್ದಕ್ಕೂ ಪಾಕಿಸ್ತಾನ ಸೇನೆ ಅಪ್ರಚೋದಿತ ಗುಂಡಿನ ದಾಳಿ ನಡೆಸಿದ್ದು, ಇದಕ್ಕೆ ಭಾರತೀಯ ಪಡೆಗಳು ತಕ್ಕ ಪ್ರತ್ಯುತ್ತರ ನೀಡಿವೆ ಎಂದು ಸೇನಾ ಮೂಲಗಳು ತಿಳಿಸಿವೆ.

26 ನಾಗರಿಕರನ್ನು ಬಲಿತೆಗೆದುಕೊಂಡ ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಭಾರತ ಮತ್ತು ಪಾಕಿಸ್ತಾನದ ನಡುವೆ ಉದ್ವಿಗ್ನತೆಯ ಮಧ್ಯೆ, ಸತತ 2ನೇ ರಾತ್ರಿ ಗುಂಡಿನ ಚಕಮಕಿ ನಡೆದಿದೆ.

ಪಾಕಿಸ್ತಾನ ಪಡೆಗಳು ತಡರಾತ್ರಿಯೂ ನಿಯಂತ್ರಣ ರೇಖೆ (ಎಲ್‌ಒಸಿ) ಉದ್ದಕ್ಕೂ ಭಾರತೀಯ ನೆಲೆಗಳ ಮೇಲೆ ಗುಂಡು ಹಾರಿಸಿದವು ಮತ್ತು ಭಾರತವು ಸೂಕ್ತವಾಗಿ ಪ್ರತಿಕ್ರಿಯಿಸಿದೆ. ಏಪ್ರಿಲ್ 25 ಮತ್ತು 26 ರ ರಾತ್ರಿ, ಕಾಶ್ಮೀರದ ನಿಯಂತ್ರಣ ರೇಖೆಯ ಉದ್ದಕ್ಕೂ ವಿವಿಧ ಪಾಕಿಸ್ತಾನ ಸೇನಾ ಪೋಸ್ಟ್‌ಗಳಿಂದ ಅಪ್ರಚೋದಿತ ಸಣ್ಣ ಶಸ್ತ್ರಾಸ್ತ್ರ ಗುಂಡಿನ ದಾಳಿ ನಡೆಸಲಾಯಿತು ಎಂದು ಮೂಲಗಳು ತಿಳಿಸಿವೆ.

ಭಾರತೀಯ ಪಡೆಗಳು ಸಣ್ಣ ಶಸ್ತ್ರಾಸ್ತ್ರಗಳೊಂದಿಗೆ ಸೂಕ್ತವಾಗಿ ಪ್ರತಿಕ್ರಿಯಿಸಿದವು ಎಂದು ಅವರು ಹೇಳಿದರು. ಗುಂಡಿನ ದಾಳಿಯಲ್ಲಿ ಪ್ರಾಣಹಾನಿ ಸಂಭವಿಸಿಲ್ಲ. ಪಹಲ್ಗಾಮ್ ದಾಳಿಯಲ್ಲಿ ಭಾಗಿಯಾಗಿರುವ ಭಯೋತ್ಪಾದಕರನ್ನು ಬೇಟೆಯಾಡುವುದಾಗಿ ಭಾರತ ಪ್ರತಿಪಾದಿಸಿದ ನಂತರ ಪಾಕಿಸ್ತಾನ ಸೇನೆಯನ್ನು ಹೈ ಅಲರ್ಟ್ ಮಾಡಲಾಗಿದೆ. ಸಿಂಧೂ ಜಲ ಒಪ್ಪಂದವನ್ನು ಭಾರತ ಅಮಾನತುಗೊಳಿಸಿರುವುದನ್ನು ಪಾಕಿಸ್ತಾನ ತಿರಸ್ಕರಿಸಿದೆ ಮತ್ತು ಒಪ್ಪಂದದ ಅಡಿಯಲ್ಲಿ ಪಾಕಿಸ್ತಾನಕ್ಕೆ ಸೇರಿದ ನೀರಿನ ಹರಿವನ್ನು ನಿಲ್ಲಿಸುವ ಯಾವುದೇ ಕ್ರಮಗಳನ್ನು ಯುದ್ಧದ ಕೃತ್ಯ ಎಂದು ನೋಡಲಾಗುವುದು ಎಂದು ಹೇಳಿದೆ.

### ಪೋಪ್ ಫ್ರಾನ್ಸಿಸ್‌ಗೆ ಶೋಕಸಾಗರದ ವಿದಾಯ

**ವ್ಯಾಟಿಕನ್:** ರೋಮನ್ ಕ್ಯಾಥೋಲಿಕ್‌ನ ಧರ್ಮಗುರು ಪೋಪ್ ಫ್ರಾನ್ಸಿಸ್ ಅವರ ಅಂತ್ಯಕ್ರಿಯೆ ಸೇಂಟ್ ಪೀಟರ್ಸ್ ಬೆಸಿಲಿಕಾದಿಂದ 4 ಕಿ.ಮೀ. ದೂರದಲ್ಲಿರುವ ರೋಮ್‌ನ ಬೆಸಿಲಿಕಾ ಡಿ ಸಾಂಟಾ ಮಾರಿಯಾ ಮ್ಯಾಗಿಯೋರ್‌ನಲ್ಲಿ ವಿಶ್ವ ನಾಯಕರ ಸಮ್ಮುಖದಲ್ಲಿ ನಡೆದಿದೆ. ಅಂತ್ಯಕ್ರಿಯೆಗೂ ಮುನ್ನ ಪೋಪ್ ಫ್ರಾನ್ಸಿಸ್ ಅವರ ಶವ ಪೆಟ್ಟಿಗೆಯನ್ನು ವ್ಯಾಟಿಕನ್ ಸಿಟಿಯಲ್ಲಿ ಸಾರ್ವಜನಿಕ ದರ್ಶನಕ್ಕೆ ಇಡಲಾಗಿತ್ತು. ಭಾರತದ ರಾಷ್ಟ್ರಪತಿ ದ್ರೌಪದಿ ಮುರ್ಮು, ಅಮೆರಿಕ ಅಧ್ಯಕ್ಷ ಟ್ರಂಪ್ ಸೇರಿ ಸುಮಾರು 160 ದೇಶಗಳ ಗಣ್ಯರು ಅಂತಿಮ ದರ್ಶನ ಪಡೆದರು. ಸುಮಾರು ಎರಡೂವರೆ ಲಕ್ಷ ಜನರು ಅಂತಿಮ ನಮನ ಸಲ್ಲಿಸಲಿದ್ದಾರೆ.

ರೋಮನ್ ಕ್ಯಾಥೋಲಿಕ್ ಚರ್ಚ್‌ನ ಮೊದಲ ಲ್ಯಾಟಿನ್ ಅಮೆರಿಕದ ಧರ್ಮಗುರುಗಳಾದ ಪೋಪ್ ಅನಾರೋಗ್ಯದ ಕಾರಣ ಸತತ ಮೂರನೇ ವರ್ಷ ವಾರ್ಷಿಕ ಗುಡ್ ಫ್ರೈಡೇ ಮೆರವಣಿಗೆ ಯಲ್ಲಿ ಹಾಜರಾಗಿರಲಿಲ್ಲ. ಭಾನುವಾರ ಬೆಳಿಗ್ಗೆ ಅಮೆರಿಕದ ಉಪಾಧ್ಯಕ್ಷ ಜೆ.ಡಿ. ವ್ಯಾನ್ಸ್ ಅವರೊಂದಿಗಿನ ಖಾಸಗಿ ಸಭೆಯಲ್ಲಿ ಪೋಪ್ ಕಾಣಿಸಿಕೊಂಡಿದ್ದರು. ವೈದ್ಯರು ಪೋಪ್ ಫ್ರಾನ್ಸಿಸ್ ಅವರಲ್ಲಿ ವಿಶ್ರಾಂತಿಯಲ್ಲಿರಬೇಕೆಂದು ಸೂಚಿಸಿದ್ದರೂ ಈಸ್ಟರ್ ಭಾನುವಾರದಂದು ಭಕ್ತರಿಗೆ ದರ್ಶನ ನೀಡಿದ್ದರು.



## ಇರಾನ್ ಬಂದರಿನಲ್ಲಿ ಪ್ರಬಲ ಸ್ಫೋಟ: 400ಕ್ಕೂ ಹೆಚ್ಚು ಗಾಯ



**ಟೆಹರಾನ್:** ಇರಾನ್ ನ ಬಂದರು ನಗರವಾದ ಅಬ್ಬಾಸ್ ನಲ್ಲಿ ಶನಿವಾರದಂದು ಪ್ರಬಲ ಸ್ಫೋಟವೊಂದು ಸಂಭವಿಸಿದ್ದು, ಸುಮಾರು 400ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಅಲ್ಲಿನ ರಾಜಾಯ್ಯೆ ಬಂದರಿನಲ್ಲಿ ಈ ಸ್ಫೋಟ ಸಂಭವಿಸಿದ್ದಾಗಿ ಅಧಿಕಾರಿಗಳು ತಿಳಿಸಿದ್ದಾರೆ.

ಆದರೆ, ಇದು ಬಾಂಬ್ ಸ್ಫೋಟವೋ ಅಥವಾ ಬಂದರಿನಲ್ಲಿ ಇರಿಸಲಾಗಿದ್ದ ಯಾವುದಾದರೂ ಕಚ್ಚಾ ವಸ್ತುವಿನ ಸ್ಫೋಟವೋ ಎಂಬುದು ತಕ್ಷಣಕ್ಕೆ ತಿಳಿದು ಬಂದಿಲ್ಲ. ಸದ್ಯಕ್ಕೆ ಗಾಯಾಳುಗಳನ್ನು ಆಸ್ಪತ್ರೆಗೆ ಸಾಗಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗಿದೆ. ಆನಂತರ ಸೂಕ್ತ ತನಿಖೆಯಲ್ಲಿ ಈ ಬಗ್ಗೆ ನಿಖರ ಮಾಹಿತಿ ನೀಡಲಾಗುತ್ತದೆ ಎಂದು ಸ್ಥಳೀಯ ಪೊಲೀಸರು ತಿಳಿಸಿದ್ದಾರೆ. ಟರ್ಕಿಯ ರಾಜಧಾನಿ ಬೈರೂತ್‌ನ ಬಂದರಿನಲ್ಲಿ 2019ರಲ್ಲಿ ಹೀಗೆಯೇ ಪ್ರಬಲವಾದ ಸ್ಫೋಟ ಸಂಭವಿಸಿತ್ತು. ಅದು ಭಯೋತ್ಪಾದನೆಯ ಕೃತ್ಯವಾಗಿರಲಿಲ್ಲ. ಹಡಗಿನಲ್ಲಿ ತರಲಾಗಿದ್ದ ಕಂಟೈನರ್ ಒಂದರಲ್ಲಿ ಬಂದಿದ್ದ ಪಾರ್ಸೆಲ್ ಒಂದು ಸ್ಫೋಟಗೊಂಡಿತ್ತು. ಆ ತೀವ್ರತೆಯಿಂದಾಗಿ 200 ಮಂದಿ ಸಾವಿಗೀಡಾಗಿದ್ದರು. ಕಿಲೋಮೀಟರ್ ಗಳವರೆಗೆ ಅದರ ತೀವ್ರತೆ ಆವರಿಸಿತ್ತು. ಅನೇಕ ಮನೆಗಳು ಹಾಗೂ ಧ್ವಂಸವಾಗಿದ್ದವು.

ಅವರು ಹೇಳುವ ಪ್ರಕಾರ, ಇರಾನ್ ನ ರಾಜಾಯ್ಯೆ ಬಂದರಿನಲ್ಲಿ ಸಾಮಾನ್ಯವಾಗಿ ಸರಕು ಸಾಗಣೆಯೇ ಪ್ರಧಾನವಾಗಿ ನಡೆಯುವ ವಾಣಿಜ್ಯ ಚಟುವಟಿಕೆಗಳಾಗಿವೆ. ಅಲ್ಲಿ ವಿಶೇಷವಾಗಿ, ಪೆಟ್ರೋಕೆಮಿಕಲ್ ವಸ್ತುಗಳು, ಕಚ್ಚಾತೈಲದ ಕಂಟೈನರ್‌ಗಳೇ ಹೆಚ್ಚಾಗಿ ಆಮದು ರಫ್ತು ಆಗುತ್ತಿರುತ್ತವೆ. ಹಾಗಾಗಿ, ಯಾವುದೋ ತೈಲೋತ್ಪನ್ನ ವಸ್ತುವೇ ಸ್ಫೋಟವಾಗಿರಬಹುದು ಎಂದು ಶಂಕಿಸಲಾಗಿದೆ.

### ಕಂಟೈನರ್ ನಲ್ಲೇ ಸ್ಫೋಟ

ಇರಾನ್ ಬಂದರಿನಲ್ಲಿ ನಡೆದಿರುವ ಸ್ಫೋಟ ಕೂಡ ಕಂಟೈನರ್ ಒಂದರಲ್ಲಿ ಬಂದಿರುವ ಕಚ್ಚಾವಸ್ತುವೊಂದು ಸ್ಫೋಟವಾಗಿರುವುದರಿಂದಲೇ ಆಗಿರುವ ಸಾಧ್ಯತೆಯಿದೆ ಎಂದು ಸ್ಥಳೀಯ ತುರ್ತು ಸಂದರ್ಭ ನಿರ್ವಹಣಾಧಿಕಾರಿ ಮೆಹರ್ಬಾದ್ ಹಸನ್ ಝೂದೇ ಅವರು ಹೇಳಿದ್ದಾರೆ.

## ನ್ಯಾಯಾಧೀಶರನ್ನೇ ಬಂಧಿಸಿದ ಟ್ರಂಪ್ ಆಡಳಿತ



**ಮಿಲ್ವಾಕೀ:** ಅಮೆರಿಕದಲ್ಲೂ ನ್ಯಾಯಾಂಗ ಮತ್ತು ಕಾರ್ಯಾಂಗದ ನಡುವಿನ ಶೀತಲ ಸಮರ ಮುಂದುವರೆದಿದೆ. ವಲಸೆ ನೀತಿ ಸೇರಿ ನ್ಯಾಯಾಂಗದ ಕೆಲ ಆದೇಶಗಳಿಂದ ಕುಪಿತಗೊಂಡಿರುವ ಟ್ರಂಪ್ ಸರ್ಕಾರದ ಅಧಿಕಾರಿಗಳು ಅಮೆರಿಕದ ನ್ಯಾಯಾಧೀಶರೊಬ್ಬರನ್ನು ಬಂಧಿಸಿ ಸಂಕಷ್ಟ ಮೈಮೇಲೆ ಎಳೆದುಕೊಂಡಿದ್ದಾರೆ.

ವಲಸೆ ಅಧಿಕಾರಿಗಳಿಂದ ತಪ್ಪಿಸಿಕೊಳ್ಳಲು ವ್ಯಕ್ತಿಯೊಬ್ಬರಿಗೆ ಸಹಾಯ ಮಾಡಿದ ಆರೋಪದಲ್ಲಿ ಮಿಲ್ವಾಕೀ ನ್ಯಾಯಾಧೀಶರೊಬ್ಬರನ್ನು ಎಫ್‌ಬಿಐ ಬಂಧಿಸಿದೆ ಎಂದು ವರದಿಯಾಗಿದೆ.

ವಲಸೆ ಅಧಿಕಾರಿಗಳು ಆತನನ್ನು ಬಂಧಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ತಿಳಿದ ನಂತರ ಮಿಲ್ವಾಕೀ ಕೌಂಟಿ ಸರ್ಕ್ಯೂಟ್ ನ್ಯಾಯಾಲಯದ ನ್ಯಾಯಾಧೀಶ ಹನ್ನಾ ಡುಗಾನ್ ಅವರನ್ನು ವಕೀಲರು ನ್ಯಾಯಾಧೀಶರ ಬಾಗಿಲಿನ ಮೂಲಕ ತನ್ನ ನ್ಯಾಯಾಲಯದ ಕೋಣೆಯಿಂದ ಹೊರಗೆ ಕರೆದೊಯ್ದಿದ್ದಾರೆ ಎಂದು ಆರೋಪಿಸಲಾಗಿದೆ.

ಎಫ್‌ಬಿಐ ಏಜೆಂಟರು ಅವರನ್ನು ಕಾಲ್ನಡಿಗೆಯಲ್ಲಿ ಬೆನ್ನಟ್ಟಿದ ನಂತರ ಆ ವ್ಯಕ್ತಿಯನ್ನು ನ್ಯಾಯಾಲಯದ ಹೊರಗೆ ವಶಕ್ಕೆ ತೆಗೆದುಕೊಂಡಿದ್ದಾರೆ. ನ್ಯಾಯಾಧೀಶರ ಬಂಧನವು ಫೆಡರಲ್ ಅಧಿಕಾರಿಗಳು ಮತ್ತು ರಾಜ್ಯ ಮತ್ತು ಸ್ಥಳೀಯ ಅಧಿಕಾರಿಗಳ ನಡುವಿನ ಉದ್ವಿಗ್ನತೆಯನ್ನು ನಾಟಕೀಯವಾಗಿ ಹೆಚ್ಚಿಸಿದೆ.

ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಆಡಳಿತವು ಅವರ ವಲಸೆ ಜಾರಿ ಆದ್ಯತೆಗಳಲ್ಲಿ ಹಸ್ತಕ್ಷೇಪ ಮಾಡುತ್ತಿದೆ ಎಂದು ಆರೋಪಿಸಿದೆ. ಗಡಿಪಾರು ಮತ್ತು ಇತರ ವಿಷಯಗಳ ಬಗ್ಗೆ ಅಧ್ಯಕ್ಷರ ಕಾರ್ಯನಿರ್ವಾಹಕ ಕ್ರಮಗಳ ಬಗ್ಗೆ ಟ್ರಂಪ್ ಆಡಳಿತ ಮತ್ತು ಫೆಡರಲ್ ನ್ಯಾಯಾಂಗದ ನಡುವೆ ಹೆಚ್ಚುತ್ತಿರುವ ಯುದ್ಧದ ಮಧ್ಯೆ ಇಂತಹ ಘಟನೆ ನಡೆದಿರುವುದು ಘರ್ಷಣೆ ಹೆಚ್ಚಲು ಕಾರಣವಾಗಬಹುದಾಗಿದೆ.

## ಕಾಶ್ಮೀರದ ಆದಿಲ್ ಹತ್ಯಾಕಾಂಡದ ರೂವಾರಿ



**ನವದೆಹಲಿ:** ವಿದ್ಯಾರ್ಥಿ ವೀಸಾದ ಮೇಲೆ ಪಾಕಿಸ್ತಾನಕ್ಕೆ ತೆರಳಿದ್ದ ಕಾಶ್ಮೀರದ ಆದಿಲ್ ಅಹದ್ ಥೋಕರ್ ಎಂಬ ಪಾಪಿಯೇ ಪಹಲ್ಗಾಮ್ ಹತ್ಯಾಕಾಂಡದ ರೂವಾರಿ ಎಂಬ ಮಾಹಿತಿ ಪೊಲೀಸರಿಗೆ ಸಿಕ್ಕಿದೆ.

ಕಾಶ್ಮೀರದ ಅನಂತ್‌ನಾಗ್ ಜಿಲ್ಲೆಯ ಬಿಜ್ಬೆಹರಾದ ಗುರ್ರೆ ಗ್ರಾಮದ ಆದಿಲ್ ಅಹ್ಮದ್ ಥೋಕರ್ ಪಹಲ್ಗಾಮ್‌ನ ಬೈಸಾರನ್‌ನ್ನಲ್ಲಿ ನಡೆದ ಭಯೋತ್ಪಾದಕ ದಾಳಿಯ ಪ್ರಮುಖ ರೂವಾರಿ ಎಂದು ನಂಬಲಾಗಿದೆ.

ಪಹಲ್ಗಾಮ್ ಹತ್ಯಾಕಾಂಡದಲ್ಲಿ ಭಾಗಿಯಾಗಿದ್ದ ಭಯೋತ್ಪಾದಕರಲ್ಲಿ ಒಬ್ಬನಾದ ಆದಿಲ್ ಅಹ್ಮದ್ ಥೋಕರ್ 2018 ರಲ್ಲಿ ಪಾಕಿಸ್ತಾನಕ್ಕೆ ಹೋಗಿ ಆರು ವರ್ಷಗಳ ನಂತರ ಮೂರರಿಂದ ನಾಲ್ಕು ಭಯೋತ್ಪಾದಕರೊಂದಿಗೆ ಕಣಿವೆಗೆ ಮರಳಿದ್ದ ಎಂದು ಮೂಲಗಳು ತಿಳಿಸಿವೆ.

ಭಾರತವನ್ನು ತೊರೆಯುವ ಮೊದಲೇ ಗಡಿಯಾಚೆಯಿಂದ ಕಾರ್ಯನಿರ್ವಹಿಸುತ್ತಿರುವ ನಿಷೇಧಿತ ಭಯೋತ್ಪಾದಕ ಸಂಘಟನೆಗಳೊಂದಿಗೆ ಸಂಪರ್ಕ ಹೊಂದಿರುವ ವ್ಯಕ್ತಿಗಳೊಂದಿಗೆ ಆದಿಲ್ ಸಂಪರ್ಕ ದಲ್ಲಿದ್ದ ಎಂದು ಗುಪ್ತಚರ ಮೂಲಗಳು ತಿಳಿಸಿವೆ. ಪಾಕಿಸ್ತಾನಕ್ಕೆ ಬಂದ ನಂತರ, ಥೋಕರ್ ಸಾರ್ವಜನಿಕ ದೃಷ್ಟಿಯಿಂದ ಕಣ್ಮರೆಯಾದರು. ಅವರು ತಮ್ಮ ಕುಟುಂಬದೊಂದಿಗೆ ಸಂಪರ್ಕವನ್ನು ಕಡಿದುಕೊಂಡರು, ಮತ್ತು ಸುಮಾರು ಎಂಟು ತಿಂಗಳವರೆಗೆ ಅವರ ಉಪಸ್ಥಿತಿಯ ಯಾವುದೇ ಕುರುಹು ಸ್ಥಾಪಿಸಲು ಸಾಧ್ಯವಾಗಿರಲಿಲ್ಲ.

ಅವನ ಡಿಜಿಟಲ್ ಹೆಜ್ಜೆಗುರುತನ್ನು ಮೇಲ್ವಿಚಾರಣೆ ಮಾಡುತ್ತಿದ್ದ ಗುಪ್ತಚರ ಸಂಸ್ಥೆಗಳು ಅವನನ್ನು ಕಳೆದುಕೊಂಡವು. ಬಿಜ್ಬೆಹರಾದಲ್ಲಿನ ಅವರ ಮನೆಯ ಮೇಲೆ ಕೇಂದ್ರೀಕರಿಸಿದ ಸಮಾನಾಂತರ ಕಣ್ಗಾವಲು ಕಾರ್ಯಾಚರಣೆಯು ಯಾವುದೇ ಪ್ರಮುಖ ಪ್ರಗತಿಯನ್ನು ನೀಡಲಿಲ್ಲ. ಗುಪ್ತಚರ ಮೂಲಗಳ ಪ್ರಕಾರ, ಥೋಕರ್ ಈ ಸಮಯದಲ್ಲಿ ಸೈದ್ಧಾಂತಿಕ ಮತ್ತು ಅರೆಸೈನಿಕ ತರಬೇತಿ ಪಡೆಯುತ್ತಿದ್ದರು ಎನ್ನಲಾಗಿದೆ.

## ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಖಂಡಿಸಿದ ವಿಶ್ವಸಂಸ್ಥೆ



**ನವದೆಹಲಿ:** ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ವಿಶ್ವಸಂಸ್ಥೆಯ ಭದ್ರತಾ ಮಂಡಳಿ ಖಂಡಿಸಿದ್ದು, ಈ ಖಂಡನೀಯ ಭಯೋತ್ಪಾದಕ ಕೃತ್ಯದ ದುಷ್ಕರ್ಮಿಗಳು, ಸಂಘಟಕರು ಮತ್ತು ಪ್ರಾಯೋಜಕರನ್ನು ಹೊಣೆಗಾರರನ್ನಾಗಿ ಮಾಡುವ ಮತ್ತು ಅವರನ್ನು ನ್ಯಾಯದ ಮುಂದೆ ತರುವ ಅಗತ್ಯವನ್ನು ಒತ್ತಿಹೇಳಿದೆ.

15 ರಾಷ್ಟ್ರಗಳ ವಿಶ್ವಸಂಸ್ಥೆಯ ಭದ್ರತಾ ಮಂಡಳಿ ಪತ್ರಿಕಾ ಹೇಳಿಕೆಯನ್ನು ಬಿಡುಗಡೆ ಮಾಡಿದೆ, ಅದರಲ್ಲಿ ಭಯೋತ್ಪಾದನೆಯು ಅದರ ಎಲ್ಲಾ ರೂಪಗಳು ಮತ್ತು ಅಭಿವ್ಯಕ್ತಿಗಳಲ್ಲಿ ಅಂತರರಾಷ್ಟ್ರೀಯ ಶಾಂತಿ ಮತ್ತು ಭದ್ರತೆಗೆ ಅತ್ಯಂತ ಗಂಭೀರ ಬೆದರಿಕೆಗಳಲ್ಲಿ ಒಂದಾಗಿದೆ ಎಂದು ಪುನರುಚ್ಚರಿಸಿದೆ.

ಏಪ್ರಿಲ್ 22 ರಂದು ಜಮ್ಮು ಮತ್ತು ಕಾಶ್ಮೀರದಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ಭದ್ರತಾ ಮಂಡಳಿಯ ಸದಸ್ಯರು ಬಲವಾಗಿ ಖಂಡಿಸಿದರು, ಈ ಸಂದರ್ಭದಲ್ಲಿ ಕನಿಷ್ಠ 26 ಜನರು ಸಾವನ್ನಪ್ಪಿದ್ದಾರೆ ಮತ್ತು ಅನೇಕರು ಗಾಯಗೊಂಡಿದ್ದಾರೆ ಎಂದು ಅದು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದೆ.


ಪತ್ರಿಕಾ ಹೇಳಿಕೆಯು ಎಲ್ಲಾ 15 ಸದಸ್ಯರ ಪರವಾಗಿ ಯುಎನ್‌ಎಸ್ಸಿ ಅಧ್ಯಕ್ಷರು ಮಾಧ್ಯಮಗಳಿಗೆ ಮಾಡಿದ ಘೋಷಣೆಯಾಗಿದೆ. ಪಾಕಿಸ್ತಾನವು ಪ್ರಸ್ತುತ ಯುಎನ್‌ಎಸ್ಸಿಯಲ್ಲಿ ಶಾಶ್ವತವಲ್ಲದ ಸದಸ್ಯ ರಾಷ್ಟ್ರವಾಗಿ ಕುಳಿತಿದೆ.ಯುಎನ್‌ಎಸ್ಸಿ ಸದಸ್ಯರು ಕುಟುಂಬಗಳಿಗೆ ತಮ್ಮ ಆಳವಾದ ಸಹಾನುಭೂತಿ ಮತ್ತು ಸಂತಾಪವನ್ನು ವ್ಯಕ್ತಪಡಿಸಿದರು.

ಈ ಖಂಡನೀಯ ಭಯೋತ್ಪಾದಕ ಕೃತ್ಯದ ದುಷ್ಕರ್ಮಿಗಳು, ಸಂಘಟಕರು, ಹಣಕಾಸುದಾರರು ಮತ್ತು ಪ್ರಾಯೋಜಕರನ್ನು ಹೊಣೆಗಾರರನ್ನಾಗಿ ಮಾಡುವ ಮತ್ತು ಅವರನ್ನು ನ್ಯಾಯದ ಮುಂದೆ ತರುವ ಅಗತ್ಯವನ್ನು ಅವರು ಒತ್ತಿಹೇಳಿದರು.

ಹತ್ಯೆಗಳಿಗೆ ಕಾರಣರಾದವರನ್ನು ಹೊಣೆಗಾರರನ್ನಾಗಿ ಮಾಡಬೇಕು ಎಂದು ಯುಎನ್‌ಎಸ್ಸಿ ಒತ್ತಿಹೇಳಿತು ಮತ್ತು ಅಂತರರಾಷ್ಟ್ರೀಯ ಕಾನೂನು ಮತ್ತು ಸಂಬಂಧಿತ ಭದ್ರತಾ ಮಂಡಳಿಯ ನಿರ್ಣಯಗಳ ಅಡಿಯಲ್ಲಿ ತಮ್ಮ ಬಾಧ್ಯತೆಗಳಿಗೆ ಅನುಗುಣವಾಗಿ, ಈ ನಿಟ್ಟಿನಲ್ಲಿ ಎಲ್ಲಾ ಸಂಬಂಧಿತ ಅಧಿಕಾರಿಗಳೊಂದಿಗೆ ಸಕ್ರಿಯವಾಗಿ ಸಹಕರಿಸುವಂತೆ ಎಲ್ಲಾ ದೇಶಗಳನ್ನು ಒತ್ತಾಯಿಸಿತು.

ಭಯೋತ್ಪಾದನೆಯ ಯಾವುದೇ ಕೃತ್ಯಗಳು ಅಪರಾಧ ಮತ್ತು ನ್ಯಾಯಸಮ್ಮತವಲ್ಲ ಎಂದು ಸದಸ್ಯರು ಪುನರುಚ್ಚರಿಸಿದರು, ಅವುಗಳ ಪ್ರೇರಣೆ, ಎಲ್ಲಿ, ಯಾವಾಗ ಮತ್ತು ಯಾರಿಂದ ಮಾಡಲ್ಪಟ್ಟಿದೆ ಎಂಬುದನ್ನು ಲೆಕ್ಕಿಸದೆ. ವಿಶ್ವಸಂಸ್ಥೆಯ ಚಾರ್ಟರ್ ಮತ್ತು ಅಂತರರಾಷ್ಟ್ರೀಯ ಮಾನವ ಹಕ್ಕುಗಳ ಕಾನೂನು, ಅಂತರರಾಷ್ಟ್ರೀಯ ನಿರಾಶ್ರಿತರ ಕಾನೂನು ಮತ್ತು ಅಂತರರಾಷ್ಟ್ರೀಯ ಮಾನವೀಯ ಕಾನೂನು ಸೇರಿದಂತೆ ಅಂತರರಾಷ್ಟ್ರೀಯ ಕಾನೂನಿನ ಅಡಿಯಲ್ಲಿ ಇತರ ಬಾಧ್ಯತೆಗಳಿಗೆ ಅನುಗುಣವಾಗಿ ಎಲ್ಲಾ ದೇಶಗಳು ಎಲ್ಲಾ ರೀತಿಯಲ್ಲಿ ಹೋರಾಡುವ ಅಗತ್ಯವನ್ನು ಅವರು ಪುನರುಚ್ಚರಿಸಿದರು.

## ಪೋರ್ಷೆ ಅಪಘಾತ ಪ್ರಕರಣ: ಆರೋಪಿ ಅಪ್ರಾಪ್ತ ಬಾಲಕನ ತಾಯಿಗೆ ಸುಪ್ರೀಂ ಜಾಮೀನು



**ಪುಣೆ:** ಪುಣೆ ಪೋರ್ಷೆ ಕಾರು ಅಪಘಾತದಲ್ಲಿ ಇಬ್ಬರು ಸಾವನ್ನಪ್ಪಿದ ಪ್ರಕರಣದಲ್ಲಿ ಭಾಗಿಯಾದ 17 ವರ್ಷದ ಬಾಲಕನ ತಾಯಿಗೆ ಸುಪ್ರೀಂ ಕೋರ್ಟ್ ಮಧ್ಯಂತರ ಜಾಮೀನು ನೀಡಿದ ನಾಲ್ಕು ದಿನಗಳ ನಂತರ ಶನಿವಾರ ಜೈಲಿನಿಂದ ಹೊರಬಂದಿದ್ದಾರೆ.

ರಕ್ತದ ಮಾದರಿ ವಿನಿಮಯ ಪ್ರಕರಣದಲ್ಲಿ ಬಂಧಿಸಲ್ಪಟ್ಟ 10 ಆರೋಪಿಗಳಲ್ಲಿ ಜಾಮೀನಿನ ಮೇಲೆ ಬಿಡುಗಡೆಯಾದ ಮೊದಲ ವ್ಯಕ್ತಿಯಾಗಿದ್ದಾರೆ.

ಬಂಧನದಲ್ಲಿರುವ ಇತರರಲ್ಲಿ ಅಪ್ರಾಪ್ತ ಬಾಲಕನ ತಂದೆ, ಸಸೂನ್ ಆಸ್ಪತ್ರೆಯ ವೈದ್ಯರಾದ ಅಜಯ್ ತಾವರೆ ಮತ್ತು ಶ್ರೀಹರಿ ಹಾಲ್ನೋರ್, ಆಸ್ಪತ್ರೆ ಸಿಬ್ಬಂದಿ ಅತುಲ್ ಘಟ್ಕಾಂಬಳೆ, ಇಬ್ಬರು ಮಧ್ಯವರ್ತಿಗಳು ಮತ್ತು ಇತರ ಮೂವರು ಸೇರಿದ್ದಾರೆ.

ಕಳೆದ ವರ್ಷ ಮೇ 19 ರ ಮುಂಜಾನೆ ಪುಣೆಯ ಕಲ್ಯಾಣಿ ನಗರದಲ್ಲಿ 17 ವರ್ಷದ ಬಾಲಕನೊಬ್ಬ ಕುಡಿದ ಮತ್ತಿನಲ್ಲಿ ಚಲಾಯಿಸುತ್ತಿದ್ದ ಪೋರ್ಷೆ ಕಾರು ದ್ವಿಚಕ್ರ ವಾಹನದಲ್ಲಿದ್ದ ಇಬ್ಬರು ಐಟಿ ವೃತ್ತಿಪರರನ್ನು ಡಿಕ್ಕಿ ಹೊಡೆದು ಕೊಂದಿತು.

ಅಪಘಾತದ ಸಮಯದಲ್ಲಿ ತನ್ನ ಮಗ ಮದ್ಯದ ಮತ್ತಿನಲ್ಲಿದ್ದಿದ್ದನ್ನು ಮರೆಮಾಡಲು ತನ್ನ ರಕ್ತದ ಮಾದರಿಯನ್ನು ತನ್ನ ಮಗನ ರಕ್ತದ ಮಾದರಿಯೊಂದಿಗೆ ಬದಲಾಯಿಸಿಕೊಂಡ ಆರೋಪ ಬಾಲಕನ ತಾಯಿಯ ಮೇಲಿದೆ. ತಾಯಿಗೆ ಮಧ್ಯಂತರ ಜಾಮೀನು ನೀಡುವಾಗ, ಜಾಮೀನು ಷರತ್ತುಗಳನ್ನು ನಿಗದಿಪಡಿಸಲು ಸುಪ್ರೀಂ ಕೋರ್ಟ್ ಪುಣೆ ನ್ಯಾಯಾಲಯಕ್ಕೆ ನಿರ್ದೇಶನ ನೀಡಿತು. ಅದರ ಪ್ರಕಾರ, ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ಎರಡೂ ಕಡೆಯ ವಾದಗಳನ್ನು ಆಲಿಸಿತು.

ವಿಶೇಷ ಸಾರ್ವಜನಿಕ ಅಭಿಯೋಜಕ ಶಿಶಿರ್ ಹಿರೇ ರಾಜ್ಯವನ್ನು ಪ್ರತಿನಿಧಿಸಿದರೆ, ವಕೀಲರಾದ ಅಂಗದ್ ಗಿಲ್ ಮತ್ತು ಧ್ವನಿ ಶಾ ಮಹಿಳೆಯ ಪರವಾಗಿ ವಾದ ಮಂಡಿಸಿದರು.

### ಸೇನಾ ಸಿಬ್ಬಂದಿಯ ಬೆಂಗಾವಲು ಪಡೆಯನ್ನು ಗುರಿಯಾಗಿಸಿಕೊಂಡು ರಿಮೋಟ್ ಕಂಟ್ರೋಲ್ ಐಇಡಿ ದಾಳಿ

## 10 ಪಾಕ್ ಸೈನಿಕರನ್ನು ಉಡೀಸ್ ಮಾಡಿದ ಬಲೂಚಿ ದಂಗೆಕೋರರು



ಬಲೂಚ್ ಲಿಬರೇಶನ್ ಆರ್ಮಿ ಎಚ್ಚರಿಕೆ

**ಇಸ್ಲಾಮಾಬಾದ್:** ಬಲೂಚಿಸ್ತಾನದ ಕ್ವೆಟ್ಟಾ ಬಳಿಯ ಮಾರ್ಗಾತ್ ಪ್ರದೇಶದಲ್ಲಿ ಪಾಕಿಸ್ತಾನಿ ಸೇನಾ ಬೆಂಗಾವಲು ಪಡೆಯ ಮೇಲೆ ಬಲೂಚ್ ಲಿಬರೇಶನ್ ಆರ್ಮಿ ದಾಳಿ ನಡೆಸಿದ್ದು, ಪಾಕ್ ಸೇನೆಯ 10 ಸಿಬ್ಬಂದಿಯನ್ನು ಹತ್ಯೆ ಮಾಡಿದೆ. ಬಲೂಚ್ ಲಿಬರೇಶನ್ ಆರ್ಮಿ ಈ ದಾಳಿಯ ಜವಾಬ್ದಾರಿ ಹೊತ್ತುಕೊಂಡಿದೆ.

ದಿಬಲೂಚ್ ಲಿಬರೇಶನ್ ಆರ್ಮಿ(ಬಿಎಲ್‌ಎ) ಪಾಕಿಸ್ತಾನದ ಕ್ವೆಟ್ಟಾ ಬಳಿಯ ಮಾರ್ಗತ್‌ನಲ್ಲಿ ಪಾಕಿಸ್ತಾನಿ ಸೇನಾ ಸಿಬ್ಬಂದಿಯ ಬೆಂಗಾವಲು ಪಡೆಯನ್ನು ಗುರಿಯಾಗಿಸಿಕೊಂಡು ರಿಮೋಟ್ ಕಂಟ್ರೋಲ್ ಐಇಡಿ ದಾಳಿ ನಡೆಸಲಾಗಿದೆ. ಬಲೂಚ್ ದಂಗೆ ಕೋರರಿಂದ ಪಾಕ್ ಸೇನೆಯ ಸುಬೇದಾರ್ ಶೆಹಜಾದ್ ಅಮೀನ್, ನಯಬ್ ಸುಬೇದಾರ್ ಅಬ್ಬಾಸ್, ಸಿಪಾಯಿ ಖಲೀಲ್, ಸಿಪಾಯಿ ಜಾಹಿದ್, ಸಿಪಾಯಿ ಖುರ್ರಂ ಮತ್ತು ಇತರರು ಹತ್ಯೆಗೀಡಾಗಿದ್ದಾರೆ.

ಕ್ವೆಟ್ಟಾದ ಹೊರವಲಯದಲ್ಲಿರುವ ಮಾರ್ಗಾಟ್‌ನಲ್ಲಿ ಸೇನೆಯ ವಾಹನಗಳನ್ನು ಗುರಿಯಾಗಿಸಿ ಈ ದಾಳಿ ನಡೆಸಲಾಗಿದೆ. ರಿಮೋಟ್ ಕಂಟ್ರೋಲ್ ಬಳಸಿ ಈ ದಾಳಿ ಮಾಡಲಾಗಿದೆ ಎಂದು ಬಿಎಲ್‌ಎ ಹೇಳಿಕೊಂಡಿದ್ದು, ಬಲೂಚಿಸ್ತಾನದಲ್ಲಿ ನಡೆಯುತ್ತಿರುವ ಉದ್ವಿಗ್ನ ಪರಿಸ್ಥಿತಿಗೆ ಇದು ಮತ್ತೊಂದು ಉದಾಹರಣೆಯಾಗಿದೆ. ನಮ ಹೋರಾಟಗಾರರು ಸೇನೆಯ ವಾಹನವನ್ನು ಗುರಿಯಾಗಿಸಿ ದಾಳಿ ಮಾಡಿದ್ದಾರೆ ಎಂದು ಬಿಎಲ್‌ಎ ಹೇಳಿದ್ದು, ಸ್ಫೋಟದಲ್ಲಿ ವಾಹನವು ಸಂಪೂರ್ಣವಾಗಿ ನಾಶವಾಗಿದೆ.

ಬಲೂಚಿಸ್ತಾನವನ್ನು ಪಾಕಿಸ್ತಾನದಿಂದ ಪ್ರತ್ಯೇಕಗೊಳಿಸುವ ಗುರಿಯೊಂದಿಗೆ ಬಲೂಚ್ ಲಿಬರೇಶನ್ ಆರ್ಮಿ ಹಲವು ವರ್ಷಗಳಿಂದ ಹೋರಾಟ ನಡೆಸುತ್ತಿದೆ. ಇತ್ತೀಚಿನ ದಿನಗಳಲ್ಲಿ ಈ ಹೋರಾಟವನ್ನು ಬಿಎಲ್‌ಎ ಹೆಚ್ಚಿಸಿದ್ದು, ಪಾಕಿಸ್ತಾನ ಸೇನೆ ಮತ್ತು ಬಲೂಚ್ ಪ್ರತ್ಯೇಕತಾವಾದಿಗಳ ನಡುವಿನ ಸಂಘರ್ಷ ತೀವ್ರಗೊಳ್ಳುತ್ತಿದೆ.

ಇದರಿಂದ ಈ ಭಾಗದಲ್ಲಿ ಪರಿಸ್ಥಿತಿ ದಿನದಿಂದ ದಿನಕ್ಕೆ ಬಿಗಡಾಯಿಸುತ್ತಿದೆ. ಇತ್ತೀಚೆಗೆ ಬಿಎಲ್‌ಎ ರೈಲೊಂದನ್ನು ಅಪಹರಿಸಿದ್ದನ್ನೂ ಇಲ್ಲಿ ಸರಿಸಬಹುದು. ಈ ದಾಳಿ ಬಲೂಚಿಸ್ತಾನದಲ್ಲಿ ನಡೆಯುತ್ತಿರುವ ನಿರಂತರ ಉದ್ವಿಗ್ನತೆಯ ಪ್ರತೀಕವಾಗಿದೆ. ಕಳೆದ ಬಲೂಚಿಸ್ತಾನದಲ್ಲಿ ನಡೆದ ಪ್ರತ್ಯೇಕ ದಾಳಿಗಳಲ್ಲೂ ಏಳು ಸೇನಾ ಸಿಬ್ಬಂದಿ ಮೃತಪಟ್ಟು ನಾಲ್ವರು ಗಾಯಗೊಂಡಿದ್ದರು.

ಈ ದಾಳಿಗಳು ಝಮುರಾನ್, ಕೊಲ್ವಾ ಹಾಗೂ ಕಲಾತ್ ಜಿಲ್ಲೆಗಳಲ್ಲಿ ನಡೆದಿದ್ದವು. ಇದೇ ವೇಳೆ, ಕೆಲವು ಪ್ರದೇಶಗಳಲ್ಲಿ ಭದ್ರತಾ ಠಾಣೆಗಳನ್ನು ವಶಪಡಿಸಿಕೊಂಡಿರುವುದಾಗಿ ಬಿಎಲ್‌ಎ ತಿಳಿಸಿದೆ. ಈ ಘಟನೆಗಳು ಪಾಕಿಸ್ತಾನಿ ಸೇನೆಯ ಭದ್ರತೆ ಬಗ್ಗೆ ಗಂಭೀರ ಪ್ರಶ್ನೆಗಳನ್ನು ಎಬ್ಬಿಸುತ್ತಿವೆ.ಪಾಕಿಸ್ತಾನದ ಬೋಲಾನ್‌ನಲ್ಲಿ ಬಿಎಲ್‌ಎ ಜಾಫರ್ ಎಕ್ಸ್‌ಪ್ರೆಸ್ ಅನ್ನು ಅಪಹರಿಸಿದ ಒಂದು ತಿಂಗಳ ನಂತರ ಈ ಘಟನೆ ನಡೆದಿದೆ.

### ನಮ್ಮ ಸ್ವಾತಂತ್ರ್ಯಕ್ಕಾಗಿ ಹೋರಾಟ ನಿಲ್ಲುವುದಿಲ್ಲ

ಮುಂದಿನ ದಿನಗಳಲ್ಲಿ ಪಾಕಿಸ್ತಾನ ಸೇನೆಯ ವಿರುದ್ಧದ ಕಾರ್ಯಾಚರಣೆಗಳನ್ನು ತೀವ್ರಗೊಳಿಸುವುದಾಗಿ ಬಲೂಚ್ ಲಿಬರೇಶನ್ ಆರ್ಮಿ ಎಚ್ಚರಿಕೆ ನೀಡಿದೆ. ನಮ್ಮ ಸ್ವಾತಂತ್ರ್ಯಕ್ಕಾಗಿ ಹೋರಾಟ ನಿಲ್ಲುವುದಿಲ್ಲ. ನಾವು ನಮ್ಮೆಲ್ಲಾ ಶಕ್ತಿಯಿಂದ ಶತ್ರುಗಳನ್ನು ಗುರಿಯಾಗಿಸುತ್ತೇವೆ, ಎಂದು ಘೋಷಿಸಿದೆ. ಕೂಡ ಬಿಎಲ್‌ಎ ಬಲೂಚಿಸ್ತಾನದ ವಿವಿಧೆಡೆ ಏಳು ಜನ ಪಾಕಿಸ್ತಾನ ಸೈನಿಕರನ್ನು ಕೊಂದಿತ್ತು. ಈ ಘಟನೆಗಳಲ್ಲಿ ನಾಲ್ಕು ಜನರಿಗೆ ಗಾಯಗಳಾಗಿತ್ತು. ಜಮುರಾನ್, ಕೊಲ್ವಾ ಮತ್ತು ಕಲತ್ ಜಿಲ್ಲೆಗಳಲ್ಲಿ ಈ ದಾಳಿಗಳು ನಡೆದಿದ್ದವು. ಕೆಲವು ಕಡೆಗಳಲ್ಲಿ ಭದ್ರತಾ ಠಾಣೆಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಬಿಎಲ್‌ಎ ಹೇಳಿಕೊಂಡಿದೆ.

ರೈಲು ಹೈಜಾಕ್‌ನಲ್ಲಿ ಸುಮಾರು 339 ಪ್ರಯಾಣಿಕರನ್ನು ಒತ್ತೆಯಾಳಾಗಿ ಇರಿಸಲಾಗಿತ್ತು ಮತ್ತು ಈ ಘಟನೆಯಲ್ಲಿ ಒಟ್ಟು 25 ಜನರು ಪ್ರಾಣ ಕಳೆದುಕೊಂಡಿದ್ದರು. ರೈಲು ಕ್ವೆಟ್ಟಾದಿಂದ ಉತ್ತರ ನಗರವಾದ ಪೇಶಾವರಕ್ಕೆ ಹೋಗುತ್ತಿದ್ದಾಗ ಬಿಎಲ್‌ಎ ಹಳಿಯನ್ನು ಸ್ಫೋಟಿಸಲಾಯಿತು. ಇದರಿಂದಾಗಿ ಒಂಬತ್ತು ಬೋಗಿಗಳು ಮತ್ತು ಜಾಫರ್ ಎಕ್ಸ್‌ಪ್ರೆಸ್ ರೈಲಿನ ಎಂಜಿನ್ ಸುರಂಗದೊಳಗೆ ಭಾಗಶಃ ನಿಂತಿತ್ತು, ಬಳಿಕ ಕಾರ್ಯಾಚರಣೆ ನಡೆಸಿ ಒತ್ತೆಯಾಳುಗಳನ್ನು ಬಲೂಚಿಸ್ತಾನ್ ಲಿಬರೇಶನ್ ಆರ್ಮಿ ಕಡೆಯಿಂದ ಬಿಡಿಸಿಕೊಳ್ಳಲಾಯ್ತು.



# ಎಆರ್ ರೆಹಮಾನ್ 2 ಕೋಟಿ ದಂಡ



ವಿಚಾರಣೆ ನಡೆಸಿದ ದೆಹಲಿ ಹೈಕೋರ್ಟ್

ಭಾರತದ ನಂಬರ್ 1 ಸಂಗೀತ ನಿರ್ದೇಶಕ ಎನಿಸಿಕೊಂಡಿರುವ ಎಆರ್ ರೆಹಮಾನ್ ಅವರ ಒಂದು ಹಾಡು ಈಗ ವಿವಾದಕ್ಕೆ ಕಾರಣವಾಗಿದೆ. ರೆಹಮಾನ್ ಕಂಪೋಸ್ ಮಾಡಿರುವ ಹಾಡಿನ ಮೇಲೆ ಕೃತಿಚೌರ್ಯ ಆರೋಪ ಮಾಡಲಾಗಿತ್ತು. ವಿಚಾರಣೆ ನಡೆಸಿದ ದೆಹಲಿ ಹೈಕೋರ್ಟ್ ಎಆರ್ ರೆಹಮಾನ್ ವಿರುದ್ಧ ಆದೇಶ ಹೊರಡಿಸಿದ್ದು, ಎರಡು ಕೋಟಿ ದಂಡ ವಿಧಿಸಿದೆ. ಮಣಿರತ್ನಂ ನಿರ್ದೇಶನದ 'ಪೊನ್ನಿಯಿನ್ ಸೆಲ್ವನ್' ಸಿನಿಮಾದ ನಿರ್ಮಾಪಕರು ಮತ್ತು ಸಂಗೀತ ನಿರ್ದೇಶಕ ಎಆರ್ ರೆಹಮಾನ್ ಸಂಕಷ್ಟಕ್ಕೆ ಸಿಲುಕಿದ್ದಾರೆ. 'ಪೊನ್ನಿಯಿನ್ ಸೆಲ್ವನ್ 2' ಸಿನಿಮಾದ ಹಾಡೊಂದರ ಬಗ್ಗೆ ಹೂಡಲಾಗಿದ್ದ ದಾವೆಯಲ್ಲಿ ಸಿನಿಮಾ ನಿರ್ಮಾಪಕರಿಗೆ ಮತ್ತು ಸಂಗೀತ ನಿರ್ದೇಶಕ ಎಆರ್ ರೆಹಮಾನ್ ಅವರಿಗೆ ಹಿನ್ನಡೆ ಉಂಟಾಗಿದೆ. ಎಆರ್ ರೆಹಮಾನ್, ಬೇರೆ ಹಾಡೊಂದರ ರಾಗ, ಸಂಗೀತವನ್ನು ಕೃತಿಚೌರ್ಯ ಮಾಡಿರುವ ಆರೋಪ ಸಾಬೀತಾಗಿದ್ದು ಎರಡು ಕೋಟಿ ರೂಪಾಯಿ ದಂಡವನ್ನು ಹೈಕೋರ್ಟ್ ವಿಧಿಸಿದೆ. 'ಪೊನ್ನಿಯಿನ್ ಸೆಲ್ವನ್ 2' ಸಿನಿಮಾದಲ್ಲಿ ಜಯಂ ರವಿ ಮತ್ತು ಶೋಭಿತಾ ಧುಲಿಪಾಲ ನಡುವೆ 'ವೀರ ರಾಜ ವೀರ' ಎಂಬ ಹಾಡೊಂದು ಇದೆ. ಈ ಹಾಡಿನ ವಿರುದ್ಧ ಉಸ್ತಾದ್ ಫಯಾಜ್ ಡಾಗರ್ ಎಂಬುವರು ಹಾಡಿನ ವಿರುದ್ಧ ಕೃತಿಚೌರ್ಯದ ಆರೋಪದ ಮಾಡಿ ದೆಹಲಿ ಹೈಕೋರ್ಟ್ ಮೆಟ್ಟಿಲೇರಿದ್ದಾರೆ. 'ವೀರ ರಾಜ ವೀರ' ಹಾಡನ್ನು ಶಿವ ಸ್ತುತಿಯಿಂದ ಕದ್ದಿದ್ದು, ಶಿವ ಸ್ತುತಿಯನ್ನು ತಮ್ಮ ತಂದೆ ಮತ್ತು ತಮ್ಮ ಚಿಕ್ಕಪ್ಪನವರು ಕಂಪೋಸ್ ಮಾಡಿದ್ದರು, ಅದರ ರಾಗ, ಸಂಗೀತ, ಬೀಟ್‌ಗಳನ್ನು ಸಹ ಯಾವುದೇ ಬದಲಾವಣೆ ಇಲ್ಲದೆ ಬಳಸಿಕೊಂಡಿದ್ದಾರೆ' ಎಂದು ಉಸ್ತಾದ್ ಫಯಾಜ್ ಆರೋಪಿಸಿದ್ದಾರೆ. ದೂರಿನ ವಿಚಾರಣೆ ನಡೆಸಿದ ದೆಹಲಿ ಹೈಕೋರ್ಟ್, ಎಆರ್ ರೆಹಮಾನ್ ಅವರಿಗೆ ಎರಡು ಕೋಟಿ ರೂಪಾಯಿ ದಂಡವನ್ನು ಹೇರಿದೆ ಅದರ ಜೊತೆಗೆ ಕೋರ್ಟ್ ಕಪಾಲದ ಖರ್ಚಿಗೆ ಎರಡು ಲಕ್ಷ ರೂಪಾಯಿಯನ್ನು ಹೆಚ್ಚುವರಿಯಾಗಿ ಡಾಗರ್ ಕುಟುಂಬಕ್ಕೆ ನೀಡಬೇಕು ಎಂದಿದೆ.



ಖಾನ್ ಕೊಡುತ್ತಿರುವ ಬಾಡಿಗೆ ಎಷ್ಟು

# ಹೊಸ ಮನೆಗೆ ವಾಸ್ತವ್ಯ ಬದಲಿಸಿದ ಶಾರುಖ್




ಶಾರುಖ್ ಖಾನ್ ಅವರ ಮನೆ 'ಮನ್ನತ್' ಭಾರತದ ಅತ್ಯಂತ ದುಬಾರಿ ಮತ್ತು ಜನಪ್ರಿಯ ಮನೆಗಳಲ್ಲಿ ಒಂದು. ಆದರೆ ಇದೀಗ ಶಾರುಖ್ ಖಾನ್ 'ಮನ್ನತ್' ಅನ್ನು ತೊರೆದು ಮುಂಬೈನಲ್ಲಿಯೇ ಬಾಡಿಗೆ ಮನೆಯೊಂದಕ್ಕೆ ಶಿಫ್ಟ್ ಆಗಿದ್ದಾರೆ. ಮುಂಬೈನ ಅತ್ಯಂತ ದುಬಾರಿ ಮತ್ತು ಜನಪ್ರಿಯ ಮನೆಗಳಲ್ಲಿ ಶಾರುಖ್ ಖಾನ್ ಅವರ ಮನ್ನತ್ ಸಹ ಒಂದು. ಶಾರುಖ್ ಖಾನ್ ಅವರ ಮನ್ನತ್ ಮನೆ ಪ್ರವಾಸಿ ತಾಣವೇ ಆಗಿತ್ತು, ಪ್ರತಿದಿನ ಸಾವಿರಾರು ಮಂದಿ ಶಾರುಖ್ ಖಾನ್ ಮನೆಗೆ ಭೇಟಿ ನೀಡುತ್ತಿದ್ದರು. ಆದರೆ ಇದೀಗ ಶಾರುಖ್ ಖಾನ್ ತಮ್ಮ 'ಮನ್ನತ್' ಮನೆಯನ್ನು ತೊರೆದಿದ್ದಾರೆ. ಬಹಳ ಕಷ್ಟಪಟ್ಟು, ಬಹಳ ಪ್ರೀತಿಯಿಂದ ಖರೀದಿ ಮಾಡಿದ್ದ 'ಮನ್ನತ್' ಮನೆಯನ್ನು ತೊರೆದಿರುವ ಶಾರುಖ್ ಖಾನ್ ಮತ್ತು ಕುಟುಂಬ ಬಾಡಿಗೆ ಮನೆಗೆ ವಾಸ್ತವ್ಯ ಬದಲಾಯಿಸಿದೆ. ಶಾರುಖ್ ಖಾನ್ ಮತ್ತು ಕುಟುಂಬ ಈಗ ಮುಂಬೈನಲ್ಲಿಯೇ ಬಾಡಿಗೆ ಮನೆಯೊಂದನ್ನು ಪಡೆದಿದ್ದು, ಈ ಬಾಡಿಗೆ ಮನೆ ಬಾಲಿವುಡ್ ನಟ ಮತ್ತು ನಿರ್ಮಾಪಕ ಜಾಕಿ ಬಗ್ನಾನಿ ಹಾಗೂ ಅವರ ಸಹೋದರಿಗೆ ಸೇರಿದ್ದಾಗಿದೆ. ಮನ್ನತ್‌ಗೆ ಹೋಲಿಸಿದರೆ ಬಹಳ ಚಿನ್ನ ಮನೆ ಇದಾಗಿದ್ದು ರೂಂಗಳ ಸಂಖ್ಯೆಯೂ ಕಡಿಮೆಯೇ ಇವೆ. ಪಾರ್ಕಿಂಗ್ ಸಹ ಕಡಿಮೆ ಇದೆಯಂತೆ.

ಆದರೆ ಈ ಮನೆಗೆ ಶಾರುಖ್ ಖಾನ್ ಪ್ರಸ್ತುತ ಬರೋಬ್ಬರಿ 24 ಲಕ್ಷ ರೂಪಾಯಿ ಬಾಡಿಗೆ ಕೊಡುತ್ತಿದ್ದಾರೆ. ಈಗಿರುವ ಮನೆಯಲ್ಲಿ ತಮ್ಮ ಅವಶ್ಯಕತೆಗಳಿಗೆ ತಕ್ಕಂತೆ ಸಣ್ಣ-ಪುಟ್ಟ ಬದಲಾವಣೆಗಳನ್ನು ಶಾರುಖ್ ಖಾನ್ ಕುಟುಂಬ ಮಾಡಿಕೊಂಡಿದೆ. ಲಭ್ಯ ಮಾಹಿತಿಗಳಂತೆ ಒಂದು ವರ್ಷಕ್ಕಾಗಿ ಮಾತ್ರವೇ ಶಾರುಖ್ ಖಾನ್ ಅವರು ಜಾಕಿ ಬಗ್ನಾನಿ ಜೊತೆಗೆ ಬಾಡಿಗೆ ಕರಾರು ಮಾಡಿಕೊಂಡಿದ್ದಾರಂತೆ. ಅದರಂತೆ ಪ್ರತಿ ತಿಂಗಳು 24 ಲಕ್ಷ ರೂಪಾಯಿ ಬಾಡಿಗೆ ಹಣ ನೀಡಲಿದ್ದಾರೆ.

# ಕುಲದಲ್ಲಿ ಕೀಳ್ಯಾವುದೊ ಹಾಡು ಬಿಡುಗಡೆ

ಸಿನಿಮಾ ... ರೆಡಿಯಾಗಿದೆ



'ಕುಲದಲ್ಲಿ ಕೀಳ್ಯಾವುದೊ' ಡಾ ರಾಜ್‌ಕುಮಾರ್ ಅವರ 'ಸತ್ಯ ಹರಿಶ್ಚಂದ್ರ,' ಸಿನಿಮಾದ ಹಾಡು. ಇದು ಸಾರ್ವಕಾಲಿಕ ಸೂಪರ್ ಹಿಟ್ ಗೀತೆ. ಇದೀಗ ಇದೇ ಹೆಸರಿನ ಸಿನಿಮಾ ಒಂದು ತೆರೆಗೆ ಬರುತ್ತಿದೆ. ಕೆಲ ದಿನಗಳ ಹಿಂದಷ್ಟೆ ಈ ಸಿನಿಮಾದ ಶೀರ್ಷಿಕೆ ಗೀತೆಯನ್ನು ಸಾಲು ಮರದ ತಿಮ್ಮಕ್ಕನವರು ಬಿಡುಗಡೆ ಮಾಡಿದರು. ಬಿಡುಗಡೆ ಆಗಿರುವ ಹಾಡಿನಲ್ಲಿ ನಟಿಸಿರುವುದು ನಿರ್ದೇಶಕ ಯೋಗರಾಜ್ ಭಟ್. ''ಕಾಮಿಡಿ ಕಿಲಾಡಿಗಳು'' ಖ್ಯಾತಿಯ ಮಡೆನೂರ್ ಮನು ನಾಯಕನಾಗಿ ನಟಿಸಿರುವ ''ಕುಲದಲ್ಲಿ ಕೀಳ್ಯಾವುದೋ'' ಸಿನಿಮಾ ಬಿಡುಗಡೆಗೆ ರೆಡಿಯಾಗಿದೆ. ಯೋಗರಾಜ್ ಭಟ್ಟರು ಈ ಸಿನಿಮಾವನ್ನು ಪ್ರೆಸೆಂಟ್ ಮಾಡುತ್ತಿದ್ದಾರೆ. ಪರ್ಲ್ ಸಿನಿ ಕ್ರಿಯೇಷನ್ಸ್ ಲಾಂಛನದಲ್ಲಿ ಸಂತೋಷ್ ಕುಮಾರ್ ಎ. ಕೆ ಮತ್ತು ವಿದ್ಯಾ ಅವರು ಸಿನಿಮಾಕ್ಕೆ ಬಂಡವಾಳ ಹೂಡಿದ್ದಾರೆ. ಕೆ.ರಾಮನಾರಾಯಣ್ ನಿರ್ದೇಶನ ಮಾಡಿದ್ದಾರೆ.



# ಶ್ರೀನಿಧಿ, ಯಶ್ ಬಗ್ಗೆ ತಪ್ಪು ತಿಳಿದುಕೊಂಡಿದ್ದ ಫ್ಯಾನ್ಸ್

ಶ್ರೀನಿಧಿ ಶೆಟ್ಟಿ ಅವರು ಚಿತ್ರರಂಗದಲ್ಲಿನ ಗ್ಯಾಪ್, ಯಶ್ ಅವರ ಜೊತೆಗಿನ ಸಂಬಂಧ ಹಾಗೂ 'ಕೆಜಿಎಫ್' ಚಿತ್ರದ ಯಶಸ್ಸಿನ ಬಗ್ಗೆ ಮಾತನಾಡಿದ್ದಾರೆ. 'ಕೋಬ್ರಾ,' ಚಿತ್ರದ ನಂತರ ಅವರು ಯಾಕೆ ಸಿನಿಮಾಗಳಿಂದ ದೂರ ಉಳಿದರು ಎಂಬುದನ್ನು ಸ್ಪಷ್ಟಪಡಿಸಿದ್ದಾರೆ. ಯಶ್ ಅವರ ಯಶಸ್ಸಿಗೆ ಅವರು ಶುಭ ಹಾರೈಸಿದ್ದು, ಅವರೊಂದಿಗಿನ ಸ್ನೇಹದ ಬಗ್ಗೆಯೂ ಮಾತನಾಡಿದ್ದಾರೆ. ನಟಿ ಶ್ರೀನಿಧಿ ಶೆಟ್ಟಿ ಹಾಗೂ ಯಶ್ 'ಕೆಜಿಎಫ್' ಸರಣಿಯಲ್ಲಿ ಒಟ್ಟಾಗಿ ನಟಿಸಿದ್ದರು. ಆ ಬಳಿಕ ಶ್ರೀನಿಧಿ ಮಾಡಿದ್ದು ಕೇವಲ ಒಂದು ಸಿನಿಮಾ. ಈಗ 'ಕೆಜಿಎಫ್' ಬೆಡಗಿ 'ಹಿಟ್ 3' ಸಿನಿಮಾ ಮೂಲಕ ಅವರು ಚಿತ್ರರಂಗಕ್ಕೆ ಮರಳುತ್ತಿದ್ದಾರೆ. ಅವರು ಯಶ್ ಜೊತೆಗಿನ ಒಡನಾಟ ಹಾಗೂ ಯಶ್ ಅವರ ಯಶಸ್ಸಿನ ಬಗ್ಗೆ ಮಾತನಾಡಿದ್ದಾರೆ. ಅಲ್ಲದೆ, ಇಷ್ಟು ಸಮಯ ಚಿತ್ರರಂಗದಿಂದ ದೂರ ಇದ್ದಿದ್ದು ಯಾಕೆ ಎಂಬುದನ್ನು ಕೂಡ ಅವರು ವಿವರಿಸಿದ್ದಾರೆ.

'ಕೆಜಿಎಫ್ 2' ರಿಲೀಸ್ ಬಳಿಕ ಶ್ರೀನಿಧಿ ಶೆಟ್ಟಿ 'ಕೋಬ್ರಾ' ಹೆಸರಿನ ತಮಿಳು ಸಿನಿಮಾ ಮಾಡಿದರು. ಚಿಯಾನ್ ವಿಕ್ರಮ್ ಇದಕ್ಕೆ ಹೀರೋ. ಆ ಬಳಿಕ ಅವರು ಸೈಲೆಂಟ್ ಆಗಿ ಹೋದರು. ಆಗ ನಟಿಯ ಬಗ್ಗೆ ಸಾಕಷ್ಟು ಟಾಕ್ ಇತ್ತು. 'ಕೆಜಿಎಫ್ ರೀತಿಯ ಕಥೆ, ಅದೇ ರೀತಿಯ ಥೀಮ್ ಇಟ್ಟುಕೊಂಡು ಸಾಕಷ್ಟು ಸಿನಿಮಾಗಳು ಬಂದವು. ಆದರೆ, ನಾನು ಯಾವುದೂ ಒಪ್ಪಿಕೊಳ್ಳಲಿಲ್ಲ. ನನಗೆ ಸಿನಿಮಾ ಮಾಡುವ ಆಸಕ್ತಿಯೇ ಇಲ್ಲ ಎಂದು ಜನರು ಭಾವಿಸಿದರು. ಹೀಗಾಗಿ, ನನಗೆ ಸಿನಿಮಾ ಆಫರ್ ನೀಡೋದನ್ನು ಅವರ ನಿಲ್ಲಿಸಿದರು' ಎಂದಿದ್ದಾರೆ ಶ್ರೀನಿಧಿ ಶೆಟ್ಟಿ.

ಎಲ್ಲದಕ್ಕೂ ಸ್ಪಷ್ಟನೆ ಕೊಟ್ಟ ನಟಿ

# ಖುಷಿ ಸುದ್ದಿ ಕೊಟ್ಟ ಸೋನಾಕ್ಷಿ-ಜಹೀರ್



ಬಿಎಂಡಬ್ಲ್ಯು ಕಾರು ಖರೀದಿ

ಖ್ಯಾತ ಬಾಲಿವುಡ್ ದಂಪತಿ ಸೋನಾಕ್ಷಿ ಸಿನ್ಹಾ ಮತ್ತು ಜಹೀರ್ ಇಕ್ಬಾಲ್ ಅವರು ಹೊಸ ಐಷಾರಾಮಿ ಬಿಎಂಡಬ್ಲ್ಯು ಕಾರನ್ನು ಖರೀದಿಸಿ ತಮ್ಮ ಸಂತೋಷವನ್ನು ಹಂಚಿಕೊಂಡಿದ್ದಾರೆ. ತಮ್ಮ ಮೊದಲ ವಿವಾಹ ವಾರ್ಷಿಕೋತ್ಸವಕ್ಕೂ ಮುನ್ನ ಈ ಕಾರನ್ನು ಖರೀದಿಸಿರುವುದು ಇಬ್ಬರಿಗೂ ವಿಶೇಷವಾಗಿದೆ. ಸಾಮಾಜಿಕ ಮಾಧ್ಯಮದಲ್ಲಿ ಫೋಟೋಗಳನ್ನು ಹಂಚಿಕೊಂಡು ಅವರು ತಮ್ಮ ಸಂತೋಷವನ್ನು ವ್ಯಕ್ತಪಡಿಸಿದ್ದಾರೆ. ಬಾಲಿವುಡ್‌ನ ಖ್ಯಾತ ದಂಪತಿ ಸೋನಾಕ್ಷಿ ಸಿನ್ಹಾ ಮತ್ತು ಜಹೀರ್ ಇಕ್ಬಾಲ್ ಯಾವಾಗಲೂ ಸುದ್ದಿಯಲ್ಲಿರುತ್ತಾರೆ. ಅವರ ಬಗ್ಗೆ ಒಂದಿಲ್ಲೊಂದು ವಿಚಾರ ಚರ್ಚೆ ಆಗುತ್ತಲೇ ಇರುತ್ತದೆ. ಅನೇಕ ಬಾರಿ ಅವರು ಟ್ರೋಲ್ ಆದ ಉದಾಹರಣೆ ಇದೆ. ಈ ಬಾರಿ ಅವರು ಹೊಸ ಕಾರಣಕ್ಕಾಗಿ ಬೆಳಕಿಗೆ ಬಂದಿದ್ದಾರೆ. ಸೋನಾಕ್ಷಿ ಸಿನ್ಹಾ ಅವರು ತಮ್ಮ ಅಭಿಮಾನಿಗಳೊಂದಿಗೆ ಒಳ್ಳೆಯ ಸುದ್ದಿಯನ್ನು ಹಂಚಿಕೊಂಡಿದ್ದಾರೆ. ಈ ಶುಭ ಸುದ್ದಿ ತಿಳಿದ ಅಭಿಮಾನಿಗಳು ಅವರಿಗೆ ಶುಭ ಹಾರೈಸುವ ಮೂಲಕ ಅಭಿನಂದಿಸಿದ್ದಾರೆ. ಅಭಿಮಾನಿಗಳೊಂದಿಗೆ ಸೋನಾಕ್ಷಿ ಸಿನ್ಹಾ-ಜಹೀರ್ ಶುಭ ಸುದ್ದಿ ಹಂಚಿಕೊಂಡಿದ್ದಾರೆ.

# ಸಿಎಸ್‌ಕೆ ಸೋಲುತ್ತಿದ್ದಂತೆ ಕಣ್ಣೀರಿಟ್ಟ ಶೃತಿ ಹಸನ್

ಐಪಿಎಲ್ 2025 ರ 43 ನೇ ಪಂದ್ಯದಲ್ಲಿ, 5 ಬಾರಿಯ ಚಾಂಪಿಯನ್ ಚೆನ್ನೈ ಸೂಪರ್ ಕಿಂಗ್ಸ್ ಮತ್ತು ಸನ್ ರೈಸರ್ಸ್ ಹೈದರಾಬಾದ್ ಪರಸ್ಪರ ಮುಖಾಮುಖಿಯಾಗಿದ್ದವು. ಈ ಪಂದ್ಯ ಚೆನ್ನೈನ ಎಂಎ ಚಿದಂಬರಂ ಕ್ರೀಡಾಂಗಣದಲ್ಲಿ ನಡೆಯಿತು. ಈ ಪಂದ್ಯವನ್ನು ವೀಕ್ಷಿಸಲು ಖ್ಯಾತ ನಟಿ ಶ್ರುತಿ ಹಾಸನ್ ಕೂಡ ಕ್ರೀಡಾಂಗಣಕ್ಕೆ ಬಂದಿದ್ದರು. ಶ್ರುತಿ ಕೂಡ



ತಮ್ಮ ಕೆಲವು ಫೋಟೋಗಳನ್ನು ಸಾಮಾ ಜಿಕ ಜಾಲತಾಣಗಳಲ್ಲಿ ಹಂಚಿಕೊಂಡಿದ್ದು, ಅದರಲ್ಲಿ ಅವರು ಚೆನ್ನೈ ತಂಡ ಮತ್ತು ಮಹೇಂದ್ರ ಸಿಂಗ್ ಧೋನಿ ಅವರನ್ನು ಬೆಂಬಲಿಸುತ್ತಿರುವುದನ್ನು ಕಾಣಬಹುದಾಗಿದೆ. ಆದಾಗ್ಯೂ, ಸಿಎಸ್‌ಕೆ ಈ ಪಂದ್ಯದಲ್ಲಿ ಹೀನಾಯ ಸೋಲನ್ನು ಎದುರಿಸಬೇಕಾಯಿತು. ತನ್ನ ನೆಚ್ಚಿನ ತಂಡ ಸೋತಿದ್ದನ್ನು ನೋಡಿ ಶ್ರುತಿ ಹಸನ್ ಕೂಡ ತುಂಬಾ ಭಾವುಕರಾಗಿದ್ದು, ಕ್ರೀಡಾಂಗಣದಲ್ಲಿಯೇ ಕಣ್ಣೀರು ಹಾಕಿದ್ದಾರೆ. ಇದೀಗ ಅದರ ವಿಡಿಯೋ ಎಲ್ಲೆಡೆ ವೈರಲ್ ಆಗಿದೆ.

**ಕ್ರೀಡಾಂಗಣದಲ್ಲಿಯೇ ಕಣ್ಣೀರು ಹಾಕಿದ ಶ್ರುತಿ**

ಚೆನ್ನೈ ಸೂಪರ್ ಕಿಂಗ್ಸ್ ಮತ್ತು ಸನ್‌ರೈಸರ್ಸ್ ಹೈದರಾಬಾದ್ ನಡುವಿನ ಪಂದ್ಯ ಮುಗಿದ ಬಳಿಕ ಶ್ರುತಿ ಹಸನ್ ಕಣ್ಣೀರು ಹಾಕುತ್ತಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದೆ. ಇದರಲ್ಲಿ ಅವರು ತುಂಬಾ ಭಾವುಕರಾಗಿ ಕಾಣುತ್ತಿದ್ದು, ಕಣ್ಣೀರು ಒರೆಸಿಕೊಳ್ಳುತ್ತಿದ್ದಾರೆ. ತನ್ನ ನೆಚ್ಚಿನ ತಂಡ ಸೋತದ್ದನ್ನು ನೋಡಿ, ಶ್ರುತಿ ನಿರಾಶೆಗೊಂಡಿದ್ದು, ದುಃಖ ತಡೆಯಲು ಸಾಧ್ಯವಾಗಲಿಲ್ಲ.

**ಚೆನ್ನೈ ತಂಡಕ್ಕೆ ಹೀನಾಯ ಸೋಲು**

ಇನ್ನು ಪಂದ್ಯದ ಬಗ್ಗೆ ಹೇಳುವುದಾದರೆ.. ಸನ್‌ರೈಸರ್ಸ್ ಹೈದರಾಬಾದ್ ತಂಡವು 8 ಎಸೆತಗಳು ಬಾಕಿ ಇರುವಂತೆಯೇ ಚೆನ್ನೈ ಸೂಪರ್ ಕಿಂಗ್ಸ್ ತಂಡವನ್ನು 5 ವಿಕೆಟ್‌ಗಳಿಂದ ಸೋಲಿಸುವ ಮೂಲಕ ಇತಿಹಾಸ ನಿರ್ಮಿಸಿತು. ಟಾಸ್ ಗೆದ್ದ ಹೈದರಾಬಾದ್ ಮೊದಲು ಬೌಲಿಂಗ್ ಮಾಡಲು ನಿರ್ಧರಿಸಿ ಸಿಎಸ್‌ಕೆ ತಂಡವನ್ನು ಕೇವಲ 154 ರನ್‌ಗಳಿಗೆ ಆಲೌಟ್ ಮಾಡಿತು.

ಚೆನ್ನೈ ಪರ ಯುವ ಬ್ಯಾಟ್ಸ್‌ಮನ್ ಆಯುಷ್ ಮ್ಹಾತ್ರೆ 30 ರನ್ ಗಳಿಸಿದರೆ, ಡೆವಾಲ್ಡ್ ಬ್ರೆವಿಸ್ 44 ರನ್ ಗಳಿಸಿದರು. ಆದರೆ, ನಾಯಕ ಧೋನಿ 10 ಎಸೆತಗಳಲ್ಲಿ ಕೇವಲ 6 ರನ್ ಗಳಿಸಿ ನಿರಾಶೆ ಮೂಡಿಸಿದರು. ಈ ಸಣ್ಣ ಗುರಿಯನ್ನು ಹೈದರಾಬಾದ್ ತಂಡ 18.4 ಓವರ್‌ಗಳಲ್ಲಿ ಬೆನ್ನಟ್ಟಿತು. ಈ ಮೂಲಕ ಐಪಿಎಲ್ ಇತಿಹಾಸದಲ್ಲಿ ಮೊದಲ ಬಾರಿಗೆ ಸನ್‌ರೈಸರ್ಸ್ ಹೈದರಾಬಾದ್ ತಂಡವು ಚೆನ್ನೈ ಸೂಪರ್ ಕಿಂಗ್ಸ್ ತಂಡವನ್ನು ಚೆಪಾಕ್‌ನಲ್ಲಿ ಸೋಲಿಸಿದ ದಾಖಲೆಯನ್ನು ಬರೆಯಿತು.



# ಸಾರಾ ಜೊತೆಗಿನ ಬ್ರೇಕ್ ಅಪ್ ಮೌನ ಮುರಿದ ಗಿಲ್



03 ವರ್ಷಗಳಿಂದ ನಾನು

ಟೀಂ ಇಂಡಿಯಾದ ಸ್ಟಾರ್ ಬ್ಯಾಟ್ಸ್‌ಮನ್ ಶುಭ್‌ಮನ್ ಗಿಲ್ ಕ್ರಿಕೆಟ್ ಜೊತೆಗೆ ತಮ್ಮ ವೈಯಕ್ತಿಕ ಜೀವನದಿಂದಲೂ ಸುದ್ದಿಯಲ್ಲಿದ್ದಾರೆ. ವಾಸ್ತವವಾಗಿ ಕಳೆದ ಹಲವಾರು ವರ್ಷಗಳಿಂದ ಗಿಲ್ ಅವರ ಹೆಸರು ಮಾಜಿ ಕ್ರಿಕೆಟಿಗ ಸಚಿನ್ ತೆಂಡೂಲ್ಕರ್ ಅವರ ಪುತ್ರಿ ಸಾರಾ ತೆಂಡೂಲ್ಕರ್ ಅವರೊಂದಿಗೆ ತಳುಕು ಹಾಕಿಕೊಂಡಿದೆ. ಆದರೆ ಇಬ್ಬರೂ ಈ ಬಗ್ಗೆ ಇದುವರೆಗೆ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಈಗ ಇಬ್ಬರೂ ಇನ್ಸ್ಟಾಗ್ರಾಮ್‌ನಲ್ಲಿ ಒಬ್ಬರನ್ನೊಬ್ಬರು ಅನ್ ಫಾಲೋ ಮಾಡಿದ್ದಾರೆ. ಇದಾದ ನಂತರ ಇಬ್ಬರ ಪ್ರೀತಿ ಬ್ರೇಕ್ ಅಪ್ ಆಗಿರಬಹುದು ಎಂಬ ವದಂತಿಗಳು ಹರಿದಾಡುತ್ತಿವೆ. ಇದೆಲ್ಲದರ ನಡುವೆ, ಶುಭ್‌ಮನ್ ಗಿಲ್ ಊಹಾಪೋಹಗಳ ಬಗ್ಗೆ ಮೊದಲ ಬಾರಿಗೆ ಮೌನ ಮುರಿದಿದ್ದಾರೆ. ಸಾರಾ ತೆಂಡೂಲ್ಕರ್ ಅವರಲ್ಲದೆ, ರಿದ್ಧಿಮಾ ಪಂಡಿತ್, ಅನನ್ಯಾ ಪಾಂಡೆ, ಸೋನಮ್ ಬಾಜ್ವಾ ಮತ್ತು ಅವನೀತ್ ಕೌರ್ ಸೇರಿದಂತೆ ಅನೇಕ ನಟಿಯರೊಂದಿಗೆ ಶುಭಮನ್ ಗಿಲ್ ಅವರ ಹೆಸರು ಆಗಾಗ ಕೇಳಿಬರುತ್ತಿದೆ. ಆದರೆ, ಶುಭ್‌ಮನ್ ಗಿಲ್ ಈಗ ಈ ವಿಷಯದ ಬಗ್ಗೆ ಮೌನ ಮುರಿದಿದ್ದು, 'ನಾನು 3 ವರ್ಷಗಳಿಗೂ ಹೆಚ್ಚು ಸಮಯದಿಂದ ಒಂಟಿಯಾಗಿದ್ದೇನೆ. ಆದಾಗ್ಯೂ, ನನ್ನ ಹೆಸರನ್ನು ಬೇರೆ ಬೇರೆ ಹುಡುಗಿಯರೊಂದಿಗೆ ತಳುಕು ಹಾಕುತ್ತಾ ವದಂತಿ ಸೃಷ್ಟಿಸಿರುತ್ತಾರೆ. ಅಷ್ಟಕ್ಕೂ ನನ್ನೊಂದಿಗೆ ಯಾರ ಹೆಸರನ್ನು ತಳುಕು ಹಾಕಿರುತ್ತಾರೋ ಅವರನ್ನು ನಾನು ಎಂದಿಗೂ ನೋಡಿಲ್ಲ ಅಥವಾ ಭೇಟಿಯೂ ಆಗಿಲ್ಲ ಎಂದಿದ್ದಾರೆ.

ಈ ಹೇಳಿಕೆಯೊಂದಿಗೆ ಶುಭ್‌ಮನ್ ಗಿಲ್ ಎಲ್ಲಾ ವದಂತಿಗಳಿಗೆ ಅಂತ್ಯ ಹಾಡಿದ್ದು, ಪ್ರಸ್ತುತ ಅವರು ಒಂಟಿಯಾಗಿರುವುದಾಗಿ ಸ್ಪಷ್ಟಪಡಿಸಿದ್ದಾರೆ. ಆದಾಗ್ಯೂ, ಕೆಲವು ಸಮಯದ ಹಿಂದೆ ಶುಭ್‌ಮನ್, ಅವನೀತ್ ಜೊತೆ ಡೇಟಿಂಗ್ ಮಾಡುತ್ತಿದ್ದಾರೆ ಎಂಬ ಸುದ್ದಿಯೂ ಬಂದಿತ್ತು. ಇದಕ್ಕೆ ಪೂರಕವಾಗಿ ಅವನೀತ್ ಮತ್ತು ಶುಭ್‌ಮನ್ ತಮ್ಮ ಸ್ನೇಹಿತರೊಂದಿಗೆ ರಜೆ ದಿನಗಳನ್ನು ಕಳೆದಿದ್ದರು. ಅಲ್ಲದೆ ಅವನೀತ್, ಶುಭಮನ್ ಅವರ ಹುಟ್ಟುಹಬ್ಬಕ್ಕೂ ಶುಭ ಹಾರೈಸಿದ್ದರು. ಇಷ್ಟೇ ಅಲ್ಲ, ಟೀಂ ಇಂಡಿಯಾ ಪಂದ್ಯಗಳನ್ನು ವೀಕ್ಷಿಸಲು ಅವನೀತ್ ಹಲವು ಬಾರಿ ಕ್ರೀಡಾಂಗಣದಲ್ಲೂ ಕಾಣಿಸಿಕೊಂಡಿದ್ದರು.

# ಮಳೆಗೆ ಆಹುತಿಯಾದ ಕೆಕೆಆರ್-ಪಂಜಾಬ್ ಪಂದ್ಯ!

## ಎರಡೂ ತಂಡಗಳಿಗೂ ಒಂದೊಂದು ಅಂಕ ಹಂಚಿಕೆ



ಕೋಲ್ಕತ್ತಾ ನೈಟ್ ರೈಡರ್ಸ್ ಮತ್ತು ಪಂಜಾಬ್ ಕಿಂಗ್ಸ್ ನಡುವಿನ ಪಂದ್ಯ ಮಳೆಯಿಂದ ರದ್ದಾಯಿತು. ಪಂಜಾಬ್ 202 ರನ್ ಗುರಿ ನೀಡಿತ್ತು. ಕೆಕೆಆರ್ 7 ರನ್ ಗಳಿಸಿದ್ದಾಗ ಮಳೆ ಬಂದಿತು. ಎರಡೂ ತಂಡಗಳಿಗೆ ಒಂದೊಂದು ಅಂಕ ನೀಡಲಾಯಿತು.

ಕೋಲ್ಕತ್ತಾ ನೈಟ್ ರೈಡರ್ಸ್ ಹಾಗೂ ಪಂಜಾಬ್ ನಡುವೆ ಕೋಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ನಡೆಯುತ್ತಿರುವ ಪಂದ್ಯ ಮಳೆಕಾರಣದಿಂದ ಫಲಿತಾಂಶವಿಲ್ಲದೆ ರದ್ದಾಗಿದೆ. ಮೊದಲು ಬ್ಯಾಟಿಂಗ್ ಮಾಡಿದ ಪಂಜಾಬ್ ಕಿಂಗ್ಸ್ 202ರನ್‌ಗಳ ಗುರಿ ನೀಡಿತ್ತು. ಈ ಗುರಿ ಬೆನ್ನಟ್ಟಿ ಕೆಕೆಆರ್ ಮೊದಲ ಓವರ್‌ನಲ್ಲಿ 7 ರನ್ ಗಳಿಸಿದ್ದ ವೇಳೆ ಮಳೆಯಿಂದ ಆಟ ಸ್ಥಗಿತಗೊಂಡಿತು. ಮಳೆ ನಿರಂತರವಾಗಿ ಮುಂದುವರಿದ ಕಾರಣ ಪಂದ್ಯವನ್ನ ರದ್ದುಗೊಳಿಸಿ ಎರಡೂ ತಂಡಕ್ಕೂ ಒಂದೊಂದು ಅಂಕ ನೀಡಲಾಗಿದೆ.

ಇದಕ್ಕೂ ಮುನ್ನ ಟಾಸ್ ಗೆದ್ದು ಬ್ಯಾಟಿಂಗ್ ಮಾಡಿದ ಪಿಬಿಕೆಎಸ್ ತಂಡ ಆರಂಭಿಕರಾದ ಪ್ರಿಯಾಂಶ್ ಆರ್ಯ ಹಾಗೂ



ಪ್ರಭಸಿಮ್ರನ್ ಸಿಂಗ್ ಸಿಡಿಸಿದ ಅರ್ಧಶತಕಗಳ ನೆರವಿನಿಂದ ಕೆಕೆಆರ್‌ಗೆ 20ಟ ರನ್‌ಗಳಿಸಿತ್ತು. ಪ್ರಭಸಿಮ್ರನ್ ಸಿಂಗ್ 49 ಎಸೆತಗಳಲ್ಲಿ 6 ಬೌಂಡರಿ, 6 ಸಿಕ್ಸರ್‌ಗಳ ಸಹಿತ 83 ರನ್‌ಗಳಿಸಿದರೆ, ಪ್ರಿಯಾಂಶ್ ಆರ್ಯ 35 ಎಸೆತಗಳಲ್ಲಿ 8 ಬೌಂಡರಿ, 4 ಸಿಕ್ಸರ್‌ಗಳ ಸಹಿತ 69 ರನ್‌ಗಳಿಸಿದರು. ಶ್ರೇಯಸ್ ಅಯ್ಯರ್ 16 ಎಸೆತಗಳಲ್ಲಿ ತಲಾ 1 ಬೌಂಡರಿ, ಸಿಕ್ಸರ್ ಸಹಿತ ಅಜೇಯ 25 ರನ್ ಗಳಿಸಿದ್ದರು..



# ನಾವು ಅಲ್ಲೇ ತಪ್ಪು ಮಾಡಿದೆವು

**ಸತತ ಸೋಲಿಗೆ ಕಾರಣ ತಿಳಿಸಿದ ಸಿಎಸ್‌ಕೆ ಹೆಡ್ ಕೋಚ್**

ಆಟಗಾರರು ಉತ್ತಮವಾಗಿ ಆಡಲಿಲ್ಲ

ಈ ಬಾರಿಯ ಐಪಿಎಲ್‌ನಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ತಂಡದ ಪ್ರದರ್ಶನ ನಿರಾಶಾದಾಯಕವಾಗಿತ್ತು. ತಂಡವು ಆಡಿರುವ 9 ಪಂದ್ಯಗಳಲ್ಲಿ ಎರಡರಲ್ಲಿ ಮಾತ್ರ ಗೆಲುವು ಸಾಧಿಸಿದ್ದರೆ, 7 ಪಂದ್ಯಗಳಲ್ಲಿ ಸೋಲು ಕಂಡಿದೆ. ಸಿಎಸ್‌ಕೆ ತಂಡ ಪ್ಲೇಆಫ್‌ನಿಂದ ಬಹುತೇಕ ಹೊರಬಿದ್ದಿದೆ. ಆದಾಗ್ಯೂ, ಧೋನಿ ಪಡೆ ಈಗ ಪ್ಲೇಆಫ್ ತಲುಪಬೇಕಾದರೆ, ಎಲ್ಲಾ ಪಂದ್ಯಗಳನ್ನು ಗೆಲ್ಲುವುದರೊಂದಿಗೆ ಇತರ ತಂಡಗಳ ಫಲಿತಾಂಶಗಳನ್ನು ಅವಲಂಬಿಸಬೇಕಾಗುತ್ತದೆ, ಅಂದರೆ ಒಂದು ಪವಾಡ ಮಾತ್ರ ಚೆನ್ನೈ ಅನ್ನು ಪ್ಲೇಆಫ್‌ಗೆ ಕೊಂಡೊಯ್ಯಲು ಸಾಧ್ಯ. ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧದ ತವರಿನಲ್ಲಿ ಸೋಲಿನ ನಂತರ, ಮಾತನಾಡಿರುವ ಚೆನ್ನೈ ಸೂಪರ್ ಕಿಂಗ್ಸ್ ಕೋಚ್ ಸ್ಟೀಫನ್ ಫ್ಲೆಮಿಂಗ್ ತಂಡದ ಈ ಸತತ ಸೋಲುಗಳಿಗೆ ನಿಜವಾದ ಕಾರಣ ಬಹಿರಂಗಪಡಿಸಿದರು.

**ಸಿಎಸ್‌ಕೆ ಮಾಡಿದ ತಪ್ಪೇನು:** ಏಪ್ರಿಲ್ 25 ರಂದು ಚೆಪಾಕ್ ಮೈದಾನದಲ್ಲಿ ನಡೆದ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ತಂಡವು ಚೆನ್ನೈ ಸೂಪರ್ ಕಿಂಗ್ಸ್ ತಂಡವನ್ನು 5 ವಿಕೆಟ್‌ಗಳಿಂದ ಸೋಲಿಸಿತು. ಈ ಸೀಸನ್‌ನಲ್ಲಿ ಸಿಎಸ್‌ಕೆ ಆಡಿದ 9 ಪಂದ್ಯಗಳಲ್ಲಿ ಇದು 7ನೇ ಸೋಲು. ಈ ಸೋಲಿನ ನಂತರ ಮಾತನಾಡಿದ ಸಿಎಸ್‌ಕೆ ಮುಖ್ಯ ಕೋಚ್ ಸ್ಟೀಫನ್ ಫ್ಲೆಮಿಂಗ್, 'ಮೆಗಾ ಹರಾಜಿನಲ್ಲಿ ಫ್ರಾಂಚೈಸಿ ದೊಡ್ಡ ತಪ್ಪು ಮಾಡಿದೆ ಎಂದು ಒಪ್ಪಿಕೊಂಡರು. ಈ ಸೀಸನ್‌ನ ಆರಂಭದಲ್ಲಿ ತಂಡವು ಕೆಲವು ಕೆಲಸಗಳನ್ನು ಸರಿಯಾಗಿ ಮಾಡಲಿಲ್ಲ. ಅಂದಿನಿಂದ, ಪ್ರತಿ ಪಂದ್ಯದಲ್ಲೂ ಕುಸಿತ ಮುಂದುವರೆಯಿತು. ಪ್ರಸ್ತುತ ಸೀಸನ್‌ನಲ್ಲಿ ಚೆನ್ನೈ ತಂಡವು ಮುಂಬೈ ಇಂಡಿಯನ್ಸ್ ವಿರುದ್ಧ ತವರಿನಲ್ಲಿ ಗೆಲುವಿನೊಂದಿಗೆ ಆರಂಭಿಸಿತು, ಆದರೆ ಆ ನಂತರ ಆಡಿದ 8 ಪಂದ್ಯಗಳಲ್ಲಿ ಕೇವಲ ಒಂದು ಪಂದ್ಯವನ್ನು ಮಾತ್ರ ಗೆಲ್ಲುವಲ್ಲಿ ಯಶಸ್ವಿಯಾಗಿದೆ. ಮೆಗಾ ಹರಾಜಿನ ಸಮಯದಲ್ಲಿ, ನಾವು ಉತ್ತಮ ಆಟಗಾರರನ್ನು ಖರೀದಿಸಲು ವಿಫಲರಾಗಿದ್ದೇವೆ. ಇದು ನಮ್ಮ ತಂಡದ ಸೋಲಿಗೆ ಪ್ರಮುಖ ಕಾರಣವಾಗಿದೆ. ನಾವು ಪ್ರಯತ್ನಿಸಿದ ಮತ್ತು ಪರೀಕ್ಷಿಸಲ್ಪಟ್ಟ ಆಟಗಾರರನ್ನು ಮಾತ್ರ ನಂಬಿದ್ದೆವು, ಆದರೆ ನಾವು ತಂಡದಲ್ಲಿ ಹೊಸ ಆಟಗಾರರನ್ನು ಸಹ ಸೇರಿಸಿಕೊಳ್ಳಬೇಕಾಗಿತ್ತು ಎಂದು ಅವರು ಹೇಳಿದರು.

ರಾಹುಲ್ ತ್ರಿಪಾಠಿ, ದೀಪಕ್ ಹೂಡಾ, ವಿಜಯ್ ಶಂಕರ್ ಅವರಂತಹ ಬ್ಯಾಟ್ಸ್‌ಮನ್‌ಗಳು ಈ ಸೀಸನ್‌ನಲ್ಲಿ ಬ್ಯಾಟ್‌ನಿಂದ ವಿಶೇಷವಾದ ಏನನ್ನೂ ಮಾಡಲು ಸಾಧ್ಯವಾಗಲಿಲ್ಲ, ಇದರಿಂದಾಗಿ ತಂಡವು ತೊಂದರೆ ಅನುಭವಿಸಬೇಕಾಯಿತು. ಮುಂದಿನ ಸೀಸನ್‌ನಲ್ಲಿ ಯುವ ಆಟಗಾರರಾದ ಆಯುಷ್ ಮ್ಹಾತ್ರೆ, ಶೇಖ್ ರಶೀದ್ ಮತ್ತು ಡೆವಾಲ್ಡ್ ಬ್ರೆವಿಸ್ ಉತ್ತಮ ಪ್ರದರ್ಶನ ನೀಡಬಹುದು. ತಂಡವು ಅವರನ್ನು ಭರವಸೆಯಿಂದ ನೋಡುತ್ತಿದೆ.

ಇದು ಮಾತ್ರವಲ್ಲದೆ ನಿಯಮಿತ ನಾಯಕ ರುತುರಾಜ್ ಗಾಯಕ್ವಾಡ್ ಗಾಯಗೊಂಡಿರುವುದರಿಂದ ತಂಡದ ಬ್ಯಾಟಿಂಗ್ ಕೂಡ ದುರ್ಬಲಗೊಂಡಿದೆ. ನಾವು ನಮ್ಮ ತಪ್ಪುಗಳಿಂದ ಕಲಿಯುತ್ತೇವೆ ಮತ್ತು ಸುಧಾರಿಸಲು ಪ್ರಯತ್ನಿಸುತ್ತೇವೆ. ನಾವು ಬಹಳಷ್ಟು ತಪ್ಪುಗಳನ್ನು ಮಾಡಿದ್ದೇವೆ, ಅದನ್ನು ನಾನು ಒಪ್ಪಿಕೊಳ್ಳುತ್ತೇನೆ' ಎಂದು ಕೋಚ್ ಸ್ಟೀಫನ್ ಫ್ಲೆಮಿಂಗ್ ಹೇಳಿಕೊಂಡಿದ್ದಾರೆ.


Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news

**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**